23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 330 | ನವದೆಹಲಿ | ಬೆಲೆ ₹10 | ಜೂನ್ 5 2026, ಶುಕ್ರವಾರ

# ಆರ್.ಮುನಿರಾಜು ಅವರಿಗೆ ವಾಷಿಂಗ್ಟನ್ ಡಿಜಿಟಲ್ ವಿವಿ ಗೌರವ ಡಾಕ್ಟರೇಟ್

**ನಾಳೆ ಜೂ.6, ಶನಿವಾರ ಡಾಕ್ಟರೇಟ್ ಪ್ರದಾನ**

ನವದೆಹಲಿಯ ಹಾಲಿಡೇ ಇನ್ ಹೋಟೆಲ್ (ಡಿಸ್ಟ್ರಿಕ್ಟ್ ಸೆಂಟರ್, 13ಎ, ಮಯೂರ್ ಪ್ಲೇಸ್, ಮಯೂರ್ ವಿಹಾರ್, (ನವದೆಹಲಿ–110091)ನಲ್ಲಿ ಜೂ.6ರ ಶನಿವಾರ 10ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ನಡೆಯುವ ಸಮಾರಂಭದಲ್ಲಿ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗುವುದು

ವಾಷಿಂಗ್ಟನ್ ಡಿಜಿಟಲ್ ಯೂನಿವರ್ಸಿಟಿಯ ಅಕಾಡೆಮಿಕ್ ಕೌನ್ಸಿಲ್ ಸಾಮಾಜಿಕ ಆಧ್ಯಾತ್ಮಿಕ ಸೇವೆಯಲ್ಲಿ ನಿಮಗೆ ಗೌರವ ಡಾಕ್ಟರೇಟ್ ನಾಮನಿರ್ದೇಶನವನ್ನು ಅಧಿಕೃತವಾಗಿ ಅನುಮೋದಿಸಿದೆ ಎಂದು ತಿಳಿಸಲು ನಾವು ಸಂತೋಷಪಡುತ್ತೇವೆ. ಈ ಗೌರವಾನ್ವಿತ ಮನ್ನಣೆಯು ನಮ್ಮ ವಿಶ್ವವಿದ್ಯಾಲಯದ ಮೌಲ್ಯಗಳನ್ನು ಎತ್ತಿಹಿಡಿಯುವ, ತಮ್ಮ ವೃತ್ತಿಪರ ಸಾಧನೆಗಳು, ಪಾಂಡಿತ್ಯಪೂರ್ಣ ಪ್ರಭಾವ ಮತ್ತು ವಿಶಿಷ್ಟ ಸೇವೆಯ ಮೂಲಕ ವ್ಯಕ್ತಿಗಳನ್ನು ಗೌರವಿಸುವ ನಮ್ಮ ಸಂಸ್ಥೆಯ ಸಂಪ್ರದಾಯವನ್ನು ಪ್ರತಿಬಿಂಬಿಸುತ್ತದೆ. ನಮ್ಮ ಗೌರವ ಡಾಕ್ಟರೇಟ್ ಅನ್ನು ಆಯಾ ಕ್ಷೇತ್ರಗಳಲ್ಲಿ ನಾಯಕತ್ವ, ನಾವೀನ್ಯತೆ, ನೈತಿಕ ಮೌಲ್ಯಗಳು ಮತ್ತು ಸಮರ್ಪಣಾ ಮನೋಭಾವವನ್ನು ಪ್ರದರ್ಶಿಸುವ ವಿಶಿಷ್ಟ ವ್ಯಕ್ತಿಗಳಿಗೆ ನೀಡಲಾಗುತ್ತದೆ. ನಿಮ್ಮ ಆಯ್ಕೆಯು ನಿಮ್ಮ ಪ್ರಭಾವಶಾಲಿ ಕೆಲಸ, ಕಾರ್ಯತಂತ್ರದ ಒಳನೋಟಗಳು ಮತ್ತು ವ್ಯಾಪಾರ ಕ್ಷೇತ್ರದಲ್ಲಿ ಅರ್ಥ–ಪೂರ್ಣ ಬೆಳವಣಿಗೆಗೆ ಕಾರಣವಾದ ಶ್ರೇಷ್ಠತೆಯ ಬದ್ಧತೆಗೆ ಸಾಕ್ಷಿಯಾಗಿದೆ. ಈ ಗೌರವವು ನಿಮ್ಮ ಅಸಾಧಾರಣ ಕೊಡುಗೆಗಳನ್ನು, ಸಾಂಸ್ಥಿಕ ಪ್ರಗತಿಯನ್ನು ರೂಪಿಸುವಲ್ಲಿ ನಿಮ್ಮ ಪ್ರಭಾವವನ್ನು ಮತ್ತು ನಿಮ್ಮ ಕೆಲಸದ ವ್ಯಾಪ್ತಿಯಲ್ಲಿ ವೃತ್ತಿಪರ ಅಭಿವೃದ್ಧಿಯನ್ನು ಉತ್ತೇಜಿಸುವ ನಿಮ್ಮ ಸಮರ್ಪಣೆಯನ್ನು ಗುರುತಿಸುತ್ತದೆ. ಗೌರವ ಮನ್ನಣೆಗಳಿಗಾಗಿ ವಿಶ್ವವಿದ್ಯಾಲಯದ ಮಾನದಂಡಗಳಿಗೆ ಅನುಗುಣವಾಗಿ, ನಿಮ್ಮ ನಾಮನಿರ್ದೇಶನವನ್ನು ನಮ್ಮ ಅಕಾಡೆಮಿಕ್ ಕೌನ್ಸಿಲ್ ಸಮಗ್ರ ಮತ್ತು ಕಠಿಣ ಮೌಲ್ಯಮಾಪನಕ್ಕೆ ಒಳಪಡಿಸಿದೆ. ಈ ಅನುಮೋದನೆಯು ನಿಮ್ಮ ಸಾಧನೆಗಳು ಮತ್ತು ವೃತ್ತಿಪರ ನಡವಳಿಕೆಯು ಈ ಪ್ರತಿಷ್ಠಿತ ಗೌರವವನ್ನು ಪಡೆಯುವವರಲ್ಲಿ ನಾವು ನಿರೀಕ್ಷಿಸುವ ವಿಶಿಷ್ಟತೆಯ ಮಟ್ಟವನ್ನು ಪ್ರತಿಬಿಂಬಿಸುತ್ತದೆ ಎಂಬುದನ್ನು ಸೂಚಿಸುತ್ತದೆ. ಗೌರವ ಡಾಕ್ಟರೇಟ್ (ಹಾನರಿಸ್ ಕಾಸಾ) ನಿಮ್ಮ ಹಿಂದಿನ ಸಾಧನೆಯನ್ನು ಗುರುತಿಸುವುದಲ್ಲದೆ, ಇತರರಿಗೆ ಪ್ರೇರಣೆ ನೀಡುವ, ಸಮಾಜದ ಪ್ರಗತಿಗೆ ಕೊಡುಗೆ ನೀಡುವ ಮತ್ತು ನಾಯಕತ್ವ ಹಾಗೂ ಸೇವೆಯ ಅತ್ಯುನ್ನತ ಮೌಲ್ಯಗಳನ್ನು ಎತ್ತಿಹಿಡಿಯುವ ನಿಮ್ಮ ನಿರಂತರ ಸಾಮರ್ಥ್ಯವನ್ನು ದೃಢೀಕರಿಸುತ್ತದೆ ಎಂದು ನಾವು ನಂಬುತ್ತೇವೆ. ಈ ವಿಶಿಷ್ಟ ಗೌರವಕ್ಕಾಗಿ ದಯವಿಟ್ಟು ನಮ್ಮ ಹೃತ್ಪೂರ್ವಕ ಅಭಿನಂದನೆಗಳನ್ನು ಸ್ವೀಕರಿಸಿ. ಮುಂಬರುವ ಘಟಿಕೋತ್ಸವ ಸಮಾರಂಭದಲ್ಲಿ ಹಾನರಿಸ್ ಕಾಸಾ ಪ್ರಶಸ್ತಿಯನ್ನು ಅಧಿಕೃತವಾಗಿ ಪ್ರದಾನ ಮಾಡಲು ವಿಶ್ವವಿದ್ಯಾಲಯವು ಎದುರು ನೋಡುತ್ತಿದೆ.



## ಮುನಿರಾಜು ಅವರ ಕಾರ್ಯಕ್ಷೇತ್ರ

- ಮಾಜಿ ನಿರ್ದೇಶಕ, ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್
- ಸಂಸ್ಥಾಪಕ ಅಧ್ಯಕ್ಷ, ಬನಶಂಕರಿ ಇನ್ಸ್‌ಟಿಟ್ಯೂಟ್, ಬೆಂಗಳೂರು
- ಸಂಸ್ಥಾಪಕ ಅಧ್ಯಕ್ಷ, ಶ್ರೀಅಯ್ಯಪ್ಪಸ್ವಾಮಿ ದೇವಸ್ಥಾನ ಟ್ರಸ್ಟ್ ಮತ್ತು ಮಾರಮ್ಮ ದೇವಸ್ಥಾನ, ಕತ್ತರಿಗುಪ್ಪೆ, ಬೆಂಗಳೂರು
- ಸಂಸ್ಥಾಪಕ ಅಧ್ಯಕ್ಷ, ಶ್ರೀಲಕ್ಷ್ಮೀವೆಂಕಟೇಶ್ವರ ದೇವಸ್ಥಾನ ಟ್ರಸ್ಟ್, ಇಟ್ಟಮಡು, ಬೆಂಗಳೂರು
- ಸಂಸ್ಥಾಪಕ ಅಧ್ಯಕ್ಷ, ಶ್ರೀವೀರಾಂಜನೇಯಸ್ವಾಮಿ ದೇವಸ್ಥಾನ, ಇಟ್ಟಮಡು, ಬೆಂಗಳೂರು
- ಸಂಸ್ಥಾಪಕ ಅಧ್ಯಕ್ಷ, ಶ್ರೀಕೃಷ್ಣ ಟೆಂಪಲ್, ಬನಗಿರಿನಗರ, ಬನಶಂಕರಿ 3ನೇ ಹಂತ, ಬೆಂಗಳೂರು
- ಅಧ್ಯಕ್ಷ, ಶ್ರೀಚೌಡೇಶ್ವರಿ ದೇವಸ್ಥಾನ, ಮಿಂಡಗಲ್ ಗ್ರಾಮ, ಚಿಂತಾಮಣಿ
- ಮಾಜಿ ಅಧ್ಯಕ್ಷ, ಕರ್ನಾಟಕ ಪ್ರದೇಶ ನೇತಾಜಿ ಸುಭಾಶ್‌ಚಂದ್ರ ಬೋಸ್ ಡಿಸ್ಕಶನ್ ಫೋರಂ, ಬೆಂಗಳೂರು
- ಮಾಜಿ ಪೋಷಕರು, ಕರ್ನಾಟಕ ಪ್ರದೇಶ ಗಾಂಧಿಜಯಂತಿ ಸಮಿತಿ, ಬೆಂಗಳೂರು
- ಮಾಜಿ ಉಪಾಧ್ಯಕ್ಷ, ಕರ್ನಾಟಕ ಮಾಸ್ಟರ್ ಅಥ್ಲೆಟಿಕ್ ಅಸೋಸಿಯೇಷನ್, ಬೆಂಗಳೂರು

## ನಿತ್ಯ ಪಂಚಾಂಗ 5.06.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

**ಅಧಿಕ ಜ್ಯೇಷ್ಠ ಬಹುಳ, ಪಂಚಮಿ, ಶ್ರವಣ ನಕ್ಷತ್ರ, ವಿಶ್ವ ಪರಿಸರ ದಿನ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಜಮೀರ್‌ಗೆ ಸಚಿವ ಸ್ಥಾನ ತಪ್ಪಿಸಲೆಂದೇ ಆಡಿಯೋ ಲೀಕ್ ಸತೀಶ್ ಜಾರಕಿಹೊಳಿ ಕಿಡಿ



**ಬೆಂಗಳೂರು, ಜೂ.4:** ರಾಜ್ಯ ರಾಜಕಾರಣದಲ್ಲಿ ಸಚಿವ ಸಂಪುಟ ಕಸರತ್ತು ಮತ್ತು ಖಾತೆ ಹಂಚಿಕೆಯ ಬೆನ್ನಲ್ಲೇ ಆಡಿಯೋ ಬಾಂಬ್ ಸದ್ದು ಜೋರಾಗಿದ್ದು, ಇದೀಗ ಸಚಿವ ಸತೀಶ್ ಜಾರಕಿಹೊಳಿ ಅವರು ಈ ಕುರಿತು ಸ್ಫೋಟಕ ಹೇಳಿಕೆ ನೀಡಿದ್ದಾರೆ. ಸಚಿವ ಸ್ಥಾನದ ರೇಸ್‌ನಲ್ಲಿದ್ದ ಜಮೀರ್ ಅಹ್ಮದ್ ಖಾನ್ ಅವರಿಗೆ ಸಚಿವ ಸ್ಥಾನ ತಪ್ಪಿಸುವ ಉದ್ದೇಶದಿಂದಲೇ ಆಡಿಯೋ ಬಹಿರಂಗಪಡಿಸಲಾಗಿದೆ ಎಂದು ಜಾರಕಿಹೊಳಿ ಬಾಂಬ್ ಸಿಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮಂತ್ರಿಸ್ಥಾನ ತಪ್ಪಿಸುವುದಕ್ಕಾಗಿಯೇ ಜಮೀರ್ ಆಡಿಯೋ ಬಿಟ್ಟಿರುವಂತಿದೆ. ಯಾರೋ ಹೂಡಿದ ಆ ತಂತ್ರ ಈಗ ಸಫಲ ಆಗಿದೆ ಎಂದು ಹೇಳುವ ಮೂಲಕ ಕಾಂಗ್ರೆಸ್ ಪಕ್ಷದ ಒಳಗಿನ ಆಂತರಿಕ ರಾಜಕೀಯ ಮೇಲಾಟಗಳನ್ನು ಬಹಿರಂಗಪಡಿಸಿದ್ದಾರೆ. ಈಗಾಗಲೇ ಆಡಿಯೋ ಬಿಟ್ಟಾಗಿದೆ. ಎಷ್ಟೇ ಆಡಿಯೋ ಬಿಟ್ಟರೂ ಏನೂ ವ್ಯತ್ಯಾಸವಾಗಲ್ಲ ಎಂದು ಮಾರ್ಮಿಕವಾಗಿ ನುಡಿದಿದ್ದಾರೆ.

**ಪಕ್ಷಕ್ಕೆ ಜಮೀರ್ ಶಕ್ತಿ**

ಮೊದಲ ಪಟ್ಟಿಯಲ್ಲಿ ಜಮೀರ್ ಅಹ್ಮದ್ ಅವರಿಗೆ ಸಚಿವ ಸ್ಥಾನ ಸಿಗದೇ ಇರುವುದರ ಬಗ್ಗೆ ಮಾತನಾಡಿದ ಸತೀಶ್ ಜಾರಕಿಹೊಳಿ, ಜಮೀರ್ ಪರವಾಗಿ ಭರ್ಜರಿ ಬ್ಯಾಟಿಂಗ್ ಮಾಡಿದ್ದಾರೆ. ಜಮೀರ್ ಅವಶ್ಯಕತೆ ನಮಗೆ ಮತ್ತು ಪಕ್ಷಕ್ಕೆ ಖಂಡಿತಾ ಇದೆ.

ಜಮೀರ್ ಶಕ್ತಿ ಪಕ್ಷಕ್ಕೆ ಬೇಕು. ಅವರಿಗೆ ಸಚಿವ ಸ್ಥಾನ ನೀಡುವ ಕುರಿತು ಹೈಕಮಾಂಡ್ ಅಂತಿಮ ತೀರ್ಮಾನ ಮಾಡುತ್ತದೆ" ಎಂದು ಹೇಳುವ ಮೂಲಕ ಹೈಕಮಾಂಡ್ ಕೋರ್ಟ್‌ಗೆ ಚೆಂಡನ್ನು ಎಸೆದಿದ್ದಾರೆ.

# ಎಸ್‌ಐಆರ್: ಜನರ ಹಕ್ಕಿಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಿ- ಅಧಿಕಾರಿಗಳಿಗೆ ಸಿಎಂ ಡಿ.ಕೆ.ಶಿ. ಆದೇಶ

**ಬೆಂಗಳೂರು, ಜೂ.4:** ರಾಜ್ಯದಲ್ಲಿ ಮತದಾರರ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಆರಂಭವಾಗಿದ್ದು, ಮತದಾನದ ಹಕ್ಕು ಕಸಿಯಲು ಬಿಡಬಾರದು. ಎಲ್ಲಾ ಹಿರಿಯ ಅಧಿಕಾರಿಗಳು ಈ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆದೇಶಿಸಿದ್ದಾರೆ.

ವಿಧಾನಸೌಧ ಸಭಾಂಗಣದಲ್ಲಿ ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಹಾಗೂ ಉನ್ನತ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಎಸ್.ಐ.ಆರ್ ಬಗ್ಗೆ ಎಚ್ಚರಿಕೆ ವಹಿಸುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಕೆಳಹಂತದ ಅಧಿಕಾರಿಗಳಿಗೆ ಈ ಕುರಿತು ಸೂಕ್ತ ಮಾರ್ಗದರ್ಶ ಮಾಡಿ. ಜನರಿಗೆ ನೆರವಾಗಲು ಬೂತ್‌ಹಂತದಲ್ಲಿ ಸಹಾಯ ಡೆಸ್ಕ್ ಪ್ರಾರಂಭಿಸಬೇಕು. ಜನರು ಅಗತ್ಯ ದಾಖಲೆಗಳನ್ನು ಪಡೆಯಲು ನೆರವು ಒದಗಿಸಬೇಕು. ಪ್ರತಿಯೊಬ್ಬರಿಗೂ ಮತದಾನದ ಹಕ್ಕು ಒದಗಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

ತಳಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವವರು ಸರ್ಕಾರದ ಪ್ರತಿನಿಧಿಗಳಾಗಿದ್ದು, ಜನರಲ್ಲಿ ವಿಶ್ವಾಸ ಮೂಡಿಸುವ ಕೆಲಸ ಮಾಡಬೇಕು. ಎಲ್ಲರೂ ಒಂದು ತಂಡವಾಗಿ ಕಾರ್ಯ ನಿರ್ವಹಿಸಿದರೆ ಮಾತ್ರ ಜನಪರ ಆಡಳಿತ ನೀಡಲು ಸಾಧ್ಯ. ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿ ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿ ವಾಸ್ತವ್ಯ ಮಾಡಬೇಕು. ಇದನ್ನು ಖಾತ್ರಿಪಡಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು. ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿ ಸರಿಯಾಗಿ ಬೆಳಗ್ಗೆ 10ಗಂಟೆಗೆ ಕಚೇರಿಯಲ್ಲಿ ಕರ್ತವ್ಯಕ್ಕೆ ಹಾಜರಾಗಿ ಸಾರ್ವಜನಿಕರಿಗೆ ಲಭ್ಯವಿರಬೇಕು ಎಂದರು.

ರಾಜ್ಯದ ಅಧಿಕಾರಿಗಳಿಗೆ ದೇಶದಲ್ಲಿಯೇ ಅತ್ಯುತ್ತಮ ಹೆಸರಿದೆ. ನಾವು ಅಧಿಕಾರದ ಅವಧಿಯಲ್ಲಿ ಏನು ಸಾಕ್ಷಿಗುಡ್ಡೆ ಉಳಿಸಿ ಹೋಗಿದ್ದೇವೆ ಎನ್ನುವುದು ಮುಖ್ಯ. ಪ್ರಾಮಾಣಿಕವಾಗಿ, ಕಾನೂನು ಪ್ರಕಾರ ಕಾರ್ಯನಿರ್ವಹಿಸಿ. ಒತ್ತಡಗಳಿಗೆ ಮಣಿದು ಕಾನೂನುಬಾಹಿರ ಕಾರ್ಯಗಳಿಗೆ ಒತ್ತಾಸೆ ನೀಡಬೇಡಿ. ಕಾನೂನಿನಲ್ಲಿ ಅವಕಾಶ ಇಲ್ಲದಿದ್ದರೆ ನೇರವಾಗಿ ನನಗೆ ಮತ್ತು ನನ್ನ ಸಚಿವರಿಗೆ ತಿಳಿಸಿ. ಆದರೆ ಸಕಾರಾತ್ಮಕ ಧೋರಣೆಯನ್ನು ಹೊಂದುವ ಮೂಲಕ ಜನರ ಸಮಸ್ಯೆಗಳನ್ನು ಬಗೆಹರಿಸಲು ದಾರಿ ಕಂಡುಕೊಳ್ಳುವ ಮನೋಭಾವ ಮುಖ್ಯ ಎಂದರು.

ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ತಾಲೂಕು ಮಟ್ಟಕ್ಕೆ ತೆರಳಿ ಜನರ ಅಹವಾಲುಗಳನ್ನು ಆಲಿಸುವ ಮತ್ತು ಪರಿಹರಿಸುವ ಕಾರ್ಯದಲ್ಲಿ ನಿರತರಾಗಬೇಕು.

ಈ ಕುರಿತು ವರದಿಯನ್ನು ನೇರವಾಗಿ ನನ್ನ ಗಮನಕ್ಕೆ ತರಬೇಕು. ಜನರ ಮನೆ ಬಾಗಿಲಿಗೆ ಆಡಳಿತವನ್ನು ತಲುಪಿಸುವ ಕಾರ್ಯವನ್ನು ವ್ಯವಸ್ಥಿತವಾಗಿ ಕೈಗೊಳ್ಳಬೇಕು. ಎಲ್ಲಾ ಸಚಿವರು ಸಹ ತಾಲೂಕುಗಳಿಗೆ ನಿರಂತರ ಭೇಟಿ ನೀಡಿ ಜನರ ಅಹವಾಲುಗಳನ್ನು ನೇರವಾಗಿ ಸ್ವೀಕರಿಸಲಿದ್ದಾರೆ ಎಂದರು.

ದೆಹಲಿಯಲ್ಲಿರುವ ರಾಜ್ಯದ ಅಧಿಕಾರಿಗಳು, ರಾಜ್ಯದ ಯೋಜನೆಗಳ ಅನುಷ್ಠಾನಕ್ಕೆ ಗರಿಷ್ಠ ಪ್ರಯತ್ನ ಮಾಡಬೇಕು. ಬಜೆಟ್ ನಲ್ಲಿನ ಎಲ್ಲಾ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕಾರ್ಯ ಆಗಬೇಕು. ಗ್ರಾಮೀಣ ಆರ್ಥಿಕತೆ ಕಡಿಮೆಯಾಗುತ್ತಿದ್ದು, ನಗರದತ್ತ ವಲಸೆ ಬರುವವರ ಸಂಖ್ಯೆ ಹೆಚ್ಚಾಗುತ್ತಿರುವುದು ಗಂಭೀರ ಬೆಳವಣಿಗೆಯಾಗಿದೆ. ಗ್ರಾಮೀಣ ಆರ್ಥಿಕತೆ ಹೆಚ್ಚಿಸಲು ಒತ್ತು ನೀಡುವುದು ನಮ್ಮ ಆದ್ಯತೆಯಾಗಿದೆ.

## ಶಿಕ್ಷಣ ವ್ಯವಸ್ಥೆ ಸುಧಾರಿಸಬೇಕಿದೆ



ರಾಜ್ಯದಲ್ಲಿ ಪ್ರಸ್ತುತ 50 ಸಾವಿರ ಶಿಕ್ಷಕರ ಕೊರತೆಯಿದ್ದು, ಶಿಕ್ಷಣ ವ್ಯವಸ್ಥೆಯನ್ನು ಸಮಗ್ರವಾಗಿ ಸುಧಾರಿಸಬೇಕಿದೆ. ಶಿಕ್ಷಕರನ್ನು ಹಂತ ಹಂತವಾಗಿ ನೇಮಕ ಮಾಡಲಾಗುವುದು. ಸಿಎಸ್‌ಆರ್ ಅನುದಾನದ ಸಮರ್ಪಕ ಬಳಕೆ ಮಾಡುವ ಮೂಲಕ ಶಿಕ್ಷಣ ಕ್ಷೇತ್ರದ ಆಮೂಲಾಗ್ರ ಸುಧಾರಣೆಗೆ ಕ್ರಮ ಕೈಗೊಳ್ಳಬೇಕು. ಬೆಂಗಳೂರಿನಲ್ಲಿ 26 ಲಕ್ಷ ಐಟಿ ವೃತ್ತಿಪರರು ಇದ್ದಾರೆ, ನಮ್ಮ ರಾಜ್ಯದಲ್ಲಿ 70 ವೈದ್ಯಕೀಯ ಕಾಲೇಜುಗಳಿವೆ. ಇಂದು ಹಲವು ವಿಷಯಗಳಲ್ಲಿ ಇಡೀ ವಿಶ್ವ ಬೆಂಗಳೂರಿನ ಕಡೆಗೆ ನೋಡುತ್ತಿದೆ. ನಮ್ಮಲ್ಲಿರುವ ಮಾನವ ಸಂಪನ್ಮೂಲ, ಇಲ್ಲಿನ ಹವಾಮಾನ ದೇಶದಲ್ಲಿಯೇ ಅತ್ಯುತ್ತಮವಾಗಿದೆ. ಇಂತಹ ಬೆಂಗಳೂರಿನ ಪ್ರಗತಿಗೆ ನಮ್ಮ ಕೊಡುಗೆ ಏನು ಎಂದು ಪ್ರತಿಯೊಬ್ಬರೂ ಆತ್ಮವಿಮರ್ಶೆ ಮಾಡಬೇಕು ಎಂದು ಡಿ.ಕೆ. ಶಿವಕುಮಾರ್ ಸೂಚಿಸಿದರು.

# ಸಾಮೂಹಿಕ ನಾಯಕತ್ವದಲ್ಲಿ ಮುನ್ನಡೆಯಿರಿ: ಡಿ.ಕೆ.ಶಿವಕುಮಾರ್‌ಗೆ ಹೈಕಮಾಂಡ್ ಸೂಚನೆ

**ಏಕಪಕ್ಷೀಯ ನಿರ್ಧಾರ ಬೇಡ, ಚುನಾವಣೆ ಮೇಲೆ ಪರಿಣಾಮ ಬೀರುವ ಆತಂಕ**

**ಬೆಂಗಳೂರು, ಜೂ. 4:** ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಳ್ಳದೇ, ಸಾಮೂಹಿಕ ನಾಯಕತ್ವದಲ್ಲೇ ಮುನ್ನಡೆಯುವಂತೆ ಡಿ. ಕೆ.ಶಿವಕುಮಾರ್ ಅವರಿಗೆ ಕಾಂಗ್ರೆಸ್ ಹೈಕಮಾಂಡ್ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ಕೆಲವು ವಿಚಾರಗಳಲ್ಲಿ ಡಿ.ಕೆ.ಶಿವಕುಮಾರ್ ಮುನ್ನುಗ್ಗುವ ಪ್ರವೃತ್ತಿ ಹೊಂದಿದ್ದು, ಸರಿ ಎನಿಸಿದ ವಿಚಾರಗಳಲ್ಲಿ ಏಕಪಕ್ಷೀಯ ನಿರ್ಧಾರ ತೆಗೆದುಕೊಳ್ಳುವುದು ಸಹಜ ಪ್ರವೃತಿಯಾಗಿದೆ. ಹಲವಾರು ಸಂದರ್ಭಗಳಲ್ಲಿ ಕಾಂಗ್ರೆಸ್ ಅಧ್ಯಕ್ಷರಾಗಿ ಪ್ರಮುಖ ಹಾಗೂ ಪ್ರಭಾವಿಗಳನ್ನೇ ಸಂಘಟನೆ ಚಟುವಟಿಕೆಯಿಂದ ಹೊರ ಹಾಕಿದ ಉದಾಹರಣೆಗಳಿವೆ.

ರಾಜಕೀಯ ವಿರೋಧಿಗಳ ಲೆಕ್ಕಾಚಾರ ಚುಕ್ತಾ ಮಾಡುವಲ್ಲಿಯೂ ಡಿ.ಕೆ.ಶಿವಕುಮಾರ್ ಎತ್ತಿದ ಕೈ. ಆದರೆ ಕಾಂಗ್ರೆಸ್ ಪಕ್ಷದ ಹಿತದೃಷ್ಟಿಯಿಂದ ಇದನ್ನು ನಿಯಂತ್ರಿಸಿಕೊಳ್ಳಬೇಕು. ಏಕಪಕ್ಷೀಯ ನಿರ್ಧಾರದ ಪ್ರವೃತ್ತಿ ಚುನಾವಣೆಯ ಮೇಲೆ ಗಾಢ ಪರಿಣಾಮ ಬೀರಲಿದೆ ಎಂಬ ಆತಂಕ ಹೈಕಮಾಂಡ್‌ಗೆ ಇದೆ. ಹೀಗಾಗಿ ಅತ್ಯಂತ ಎಚ್ಚರಿಕೆಯಿಂದ ಸೂಕ್ಷ್ಮ, ನಯ–ನಾಜೂಕಿನಿಂದ ನಿರ್ಧಾರಗಳನ್ನು ಪಾಲಿಸುವಂತೆ ಸೂಚಿಸಿದ್ದಾರೆ.

ಪ್ರಮುಖವಾಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರೆಯುವಂತೆ ಸೂಚನೆ ನೀಡಲಾಗಿದೆ. ಎರಡು ಬಾರಿ ರಾಜ್ಯದಲ್ಲಿ ಕಾಂಗ್ರೆಸ್‌ನ ಗೆಲುವಿಗೆ ಸಿದ್ದರಾಮಯ್ಯ ಅವರ ಕೊಡುಗೆಯನ್ನು ಕಡೆಗಣಿಸುವಂತಿಲ್ಲ. ಮುಂದಿನ ಚುನಾವಣೆಯಲ್ಲಿ ಅವರ ಮಾರ್ಗದರ್ಶನ ಮತ್ತು ನಾಯಕತ್ವ ಪಕ್ಷಕ್ಕೆ ಅಗತ್ಯ ಇದೆ. ಯಾವುದೇ ಸಂದರ್ಭದಲ್ಲೂ ಸಿದ್ದರಾಮಯ್ಯ ಮತ್ತು ಅವರ ಬೆಂಬಲಿಗರ ಹಿತರಕ್ಷಣೆಗೆ ಧಕ್ಕೆಯಾಗದಂತೆ ನಡೆದುಕೊಳ್ಳುವಂತೆ ತಾಕೀತು ಮಾಡಿರುವುದಾಗಿ ತಿಳಿದು ಬಂದಿದೆ.

ಡಿ.ಕೆ.ಶಿವಕುಮಾರ್ ಅವರ ಸಂಪುಟಕ್ಕೆ 13 ಮಂದಿ ಸಚಿವರ ಸೇರ್ಪಡೆಯಾಗಿದೆ. ಇನ್ನೂ 20 ಸ್ಥಾನಗಳು ಖಾಲಿ ಇವೆ. ನಿಗಮ ಮಂಡಳಿಗಳಲ್ಲಿ ಸುಮಾರು 60ಕ್ಕೂ ಹೆಚ್ಚು ಹುದ್ದೆಗಳು ತೆರವಾಗಲಿದ್ದು, ಅವುಗಳಿಗೆ ನೇಮಕಾತಿಯಾಗಬೇಕಿದೆ. ಬಿಬಿಎಂಪಿ ಚುನಾವಣೆಯಲ್ಲಿ ಅಭ್ಯರ್ಥಿಗಳ ಆಯ್ಕೆ ವಿಚಾರದಲ್ಲೂ ಎಚ್ಚರಿಕೆ ವಹಿಸಬೇಕಿದೆ ಎಂದು ಚರ್ಚೆಯಾಗಿದೆ.

ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಹಿಂದುಳಿದ ಈಡಿಗ ಸಮುದಾಯದ ಬಿ.ಕೆ.ಹರಿಪ್ರಸಾದ್ ಅವರಿಗೆ ನೀಡಲಾಗಿದೆ. ಅದರ ಜೊತೆಯಲ್ಲಿ ಅಹಿಂದ ನಾಯಕತ್ವಕ್ಕೆ ಸಿದ್ದರಾಮಯ್ಯ ಅವರ ಉಪಸ್ಥಿತಿ ಅತಿ ಮುಖ್ಯವಾಗಿದೆ ಎಂದು ಭಾವಿಸಲಾಗಿದೆ.

ಬಿ.ಕೆ.ಹರಿಪ್ರಸಾದ್, ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ್, ವೀರಶೈವ–ಲಿಂಗಾಯತ ಸಮುದಾಯದ ಈಶ್ವರ್ ಖಂಡ್ರೆ ಸೇರಿದಂತೆ ಇತರ ನಾಯಕರ ಜೊತೆ ಸಮನ್ವಯದಿಂದ ಕರ್ತವ್ಯ ನಿರ್ವಹಿಸಬೇಕೆಂದು ಎಚ್ಚರಿಕೆ ನೀಡಲಾಗಿದೆ.

ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸುವವರೆಗೂ ಯಾವ ರೀತಿ ಸೌಹಾರ್ದತೆಯನ್ನು ಕಾಯ್ದುಕೊಳ್ಳಲಾಗಿತ್ತೋ ಅದೇ ಮಾದರಿಯನ್ನು ಮುಂದುವರಿಸಬೇಕು. ಸಂಪುಟ ವಿಸ್ತರಣೆ ಬಳಿಕ ಒಂದಿಷ್ಟು ಅಸಮಾಧಾನಗಳು ಕಂಡು ಬರಬಹುದು. ಶಾಸಕರ ಜೊತೆ ವ್ಯಕ್ತಿಗತ ಸಂಪರ್ಕ ಕಾಯ್ದುಕೊಳ್ಳುವ ಮೂಲಕ ಸರ್ಕಾರದ ಅಸ್ತಿತ್ವಕ್ಕೆ ಧಕ್ಕೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿರು ವುದಾಗಿ ಮೂಲಗಳು ತಿಳಿಸಿವೆ.

ಸಚಿವರಿಗೆ ಅವರ ಇಲಾಖೆಗಳಲ್ಲಿ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಲು ಅವಕಾಶ ಮಾಡಿಕೊಡಬೇಕು. ಏಕಪಕ್ಷೀಯವಾದ ನಿರ್ಧಾರ ಮತ್ತು ಅನಪೇಕ್ಷಣೀಯವಾದ ಹಸ್ತಕ್ಷೇಪಗಳನ್ನು ನಿಯಂತ್ರಿಸುವ ಅಗತ್ಯ ಇದೆ ಎಂದು ಹೇಳಲಾಗಿದೆ.

2028ರ ವಿಧಾನಸಭೆ 2029ರ ಲೋಕಸಭಾ ಚುನಾವಣೆಯನ್ನು ಗಮನದಲ್ಲಿಟ್ಟು ಕೊಂಡು ಕಾರ್ಯನಿರ್ವಹಣೆ ಮಾಡಿ, ರಾಜ್ಯದ ಆರ್ಥಿಕ ಪರಿಸ್ಥಿತಿಯ ಮೇಲೆ ತೀವ್ರ ನಿಗಾ ಇರಲಿ, ಕಾಲ ಕಾಲಕ್ಕೆ ಜನಾಭಿಪ್ರಾಯಗಳನ್ನು ಸಂಗ್ರಹಿಸಿ, ಜನಸ್ನೇಹಿ ಆಡಳಿತ ನಡೆಸಬೇಕು ಎಂದು ಹಿರಿಯ ನಾಯಕರು ಹಿತವಚನ ನೀಡಿದ್ದಾರೆ ಎಂದು ತಿಳಿದು ಬಂದಿದೆ.

# ಅಧಿಕಾರ ಬೇಕಾದವರು ಡಿಕೆಶಿ ಜತೆ ಹೋಗಿ, ಪಕ್ಷ ಕಟ್ಟುವವರು ನನ್ನೊಂದಿಗೆ ಬನ್ನಿ

## ಕಾಂಗ್ರೆಸ್‌ನಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾದ ಕೆಪಿಸಿಸಿ ನೂತನ ಸಾರಥಿ ಬಿ.ಕೆ. ಹರಿಪ್ರಸಾದ್ ಹೇಳಿಕೆ

**ಬೆಂಗಳೂರು, ಜೂ. 4–** ಅಧಿಕಾರ, ಸ್ಥಾನಮಾನ ಬೇಕಾದವರು ಡಿ.ಕೆ.ಶಿವಕುಮಾರ್ ಅವರ ಜೊತೆಗೆ ಹೋಗಿ. ಕಾಂಗ್ರೆಸ್ ಅನ್ನು ಸದೃಢವಾಗಿ ಕಟ್ಟಲು ಬಯಸುವವರು ರಾಹುಲ್ ಗಾಂಧಿ, ಮಲ್ಲಿಕಾರ್ಜುನ್ ಖರ್ಗೆ ಅವರ ಕೈ ಬಲ ಪಡಿಸುವವರು ನನ್ನ ಜೊತೆಗೆ ಬನ್ನಿ ಎಂದು ಕೆಪಿಸಿಸಿಯ ನಿಯೋಜಿತ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸ್ಫೋಟಕ ಹೇಳಿಕೆ ಕಾಂಗ್ರೆಸ್‌ನಲ್ಲಿ ತಲ್ಲಣ ಸೃಷ್ಟಿಸಿದೆ.

ಪಕ್ಷದ ನೂತನ ಸಾರಥಿಯ ಹೇಳಿಕೆ ಸಂಚಲನ ಮೂಡಿಸಿದೆ. ದೇಶದಲ್ಲಿ ಅನೇಕ ಸಮಸ್ಯೆಗಳಿವೆ. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ಪ್ರಿಯಾಂಕ ಗಾಂಧಿ ಅವರು ಹೋರಾಟ ಮಾಡುತ್ತಿದ್ದಾರೆ. ನಾವು ಕೂಡ ಅದೇ ರೀತಿ ಬೀದಿಗಿಳಿದು ಹೋರಾಟ ಮಾಡಬೇಕು ಎಂದು ಪಕ್ಷದ ಕಾರ್ಯಕರ್ತರನ್ನು ಬಿ.ಕೆ. ಹರಿಪ್ರಸಾದ್ ಹುರಿದುಂಬಿಸಿದ್ದಾರೆ.



ಈಗಾಗಲೇ ಸರ್ಕಾರದಲ್ಲಿ ವಿವಿಧ ಹುದ್ದೆಗಳನ್ನು ನಿರ್ವಹಿಸಿದ್ದವರು ಪಕ್ಷ ಸಂಘಟನೆಯಲ್ಲಿ ತೊಡಗಿಸಿ ಕೊಳ್ಳಬೇಕು. ಅಧಿಕಾರ ಸ್ಥಾನಮಾನ ಬೇಕಾದರೆ, ಡಿ.ಕೆ.ಶಿವಕುಮಾರ್ ಜೊತೆ ಹೋಗಿ, ಪಕ್ಷವನ್ನು ಬಲಗೊಳಿಸವಬೇಕು ಎಂಬುವರು ನನ್ನ ಜೊತೆ ಬನ್ನಿ, ನನ್ನ ಮಾತುಗಳಲ್ಲಿ ಯಾವುದೇ ಬಣ್ಣಗಳಿಲ್ಲ. ಸರ್ಕಾರ ಮತ್ತು ಸಂಘಟನೆ ನಡುವೆ ಜವಾಬ್ದಾರಿ ಹಂಚಿಕೊಂಡು ಕೆಲಸ ಮಾಡುತ್ತೇವೆ. ಯಾವುದೇ ಸಂದರ್ಭದಲ್ಲಿ ತಾವು ಕಾರ್ಯಕರ್ತರ ಜೊತೆಗಿರುವುದಾಗಿ ಹರಿಪ್ರಸಾದ್ ತಿಳಿಸಿದ್ದಾರೆ.

## ಅಧಿಕಾರಕ್ಕಿಂತ ಸಿದ್ಧಾಂತ ದೊಡ್ಡದು, ಹುದ್ದೆಗಿಂತ ಜನರ ಹಿತ ಮುಖ್ಯ

ಕಾಂಗ್ರೆಸ್‌ನ ಕೇಂದ್ರ ನಾಯಕತ್ವದ ಈ ನಿರ್ಧಾರವು ಕೇವಲ ಒಬ್ಬ ವ್ಯಕ್ತಿಗೆ ನೀಡಿರುವ ಹುದ್ದೆಯಲ್ಲ. ಇದು ಕಾಂಗ್ರೆಸ್ ಪಕ್ಷದ ಮೂಲ ಸಿದ್ಧಾಂತಗಳಾದ ಸಾಮಾಜಿಕ ನ್ಯಾಯ, ಜಾತ್ಯತೀತತೆ, ಪ್ರಜಾಪ್ರಭುತ್ವ, ಸಂವಿಧಾನವಾದ ಮತ್ತು ದುರ್ಬಲ ವರ್ಗಗಳ ಸಬಲೀಕರಣದ ಪರವಾಗಿ ನೀಡಿರುವ ಸ್ಪಷ್ಟ ಸಂದೇಶವಾಗಿದೆ ಎಂದು ನಾನು ಭಾವಿಸುತ್ತೇನೆ. ದೀರ್ಘಕಾಲದಿಂದ ಪಕ್ಷದ ವಿವಿಧ ಹಂತಗಳಲ್ಲಿ ಸೇವೆ ಸಲ್ಲಿಸಿರುವ ನಾನು ಯಾವುದೇ ಅಧಿಕಾರದ ಹುದ್ದೆಗಳಿಗಾಗಿ ರಾಜಕೀಯ ಮಾಡದೇ, ನನ್ನ ಜೀವನಪೂರ್ತಿ ಕಾಂಗ್ರೆಸ್ ತತ್ವಗಳ ಜಾರಿಗೆ ಮೀಸಲಿಟ್ಟಿದ್ದೇನೆ. ಅಧಿಕಾರಕ್ಕಿಂತ ಸಿದ್ಧಾಂತ ದೊಡ್ಡದು, ಹುದ್ದೆಗಿಂತ ಜನರ ಹಿತ ಮುಖ್ಯ ಎಂಬ ನಿಲುವಿನಂತೆ ನಾನು ರಾಜಕೀಯ ಬದುಕನ್ನು ಕಟ್ಟಿಕೊಂಡಿದ್ದೇನೆ. ಹಾಗಾಗಿ ಕೆಪಿಸಿಸಿ ಅಧ್ಯಕ್ಷ ಹುದ್ದೆ ಎಂಬ ಪಕ್ಷ ಕಟ್ಟುವ ಕಾಯಕವನ್ನು ಅತ್ಯಂತ ಸಂತೋಷದಿಂದ ಸ್ವೀಕರಿಸಿದ್ದೇನೆ ಎಂದು ಹೇಳಿದ್ದಾರೆ. ದೇಶದಲ್ಲಿ ದ್ವೇಷದ ರಾಜಕಾರಣ, ಧರ್ಮದ ಹೆಸರಿನ ಧ್ರುವೀಕರಣ ಮತ್ತು ಸಂವಿಧಾನ ವಿರೋಧಿ ಪ್ರವೃತ್ತಿಗಳು ಹೆಚ್ಚುತ್ತಿರುವ ಈ ಸಂದರ್ಭದಲ್ಲಿ, ಸಾಮಾಜಿಕ ಸಾಮರಸ್ಯ ಮತ್ತು ಜಾತ್ಯತೀತ ಮೌಲ್ಯಗಳನ್ನು ನಿರಂತರವಾಗಿ ಪ್ರತಿಪಾದಿಸುತ್ತಾ ಬಂದಿರುವ ನನಗೆ, ರಾಜ್ಯದಲ್ಲಿರುವ ಸಮರ್ಥ ಸೈದ್ಧಾಂತಿಕ ನಾಯಕರು, ಕಾರ್ಯಕರ್ತರು ಈ ನಿಟ್ಟಿನಲ್ಲಿ ಕೈಜೋಡಿಸಲಿದ್ದಾರೆ. ಸಾಮಾಜಿಕ ನ್ಯಾಯದ ಪರವಾಗಿ ಧ್ವನಿ ಎತ್ತುವವರು, ಕೋಮುವಾದದ ವಿರುದ್ಧ ಹೋರಾಡುವವರು, ಸಂವಿಧಾನವನ್ನು ರಕ್ಷಿಸುವ ಹೋರಾಟಗಾರರು ಮತ್ತು ಪ್ರಗತಿಪರ ಚಿಂತನೆ ಹೊಂದಿರುವ ಕೋಟ್ಯಂತರ ಕಾಂಗ್ರೆಸ್ಸೇತರ ಕಾರ್ಯಕರ್ತರೂ ನಮ್ಮ ದೇಶದ ಈ ಸಂಕಷ್ಟ ಕಾಲದಲ್ಲಿ ನಮ್ಮೊಂದಿಗೆ ಕೈಜೋಡಿಸಬೇಕಿದೆ ಎಂದಿದ್ದಾರೆ.

**ವರಿಷ್ಠರಿಗೆ ಧನ್ಯವಾದ**

ಇದಕ್ಕೂ ಮುನ್ನ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹರಿಪ್ರಸಾದ್ ಅವರು, ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ನನ್ನನ್ನು ನೇಮಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ, ನನ್ನ ಮೇಲೆ ಪ್ರೀತಿ, ವಿಶ್ವಾಸ, ನಂಬಿಕೆ ಇರಿಸಿ ಜವಾಬ್ದಾರಿ ವಹಿಸಿದ ನನ್ನ ಅಚ್ಚುಮೆಚ್ಚಿನ ನಾಯಕಿ ಸೋನಿಯಾ ಗಾಂಧಿ ಅವರಿಗೆ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ, ಎಐಸಿಸಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಹಾಗೂ ಕೆಪಿಸಿಸಿ ರಾಜ್ಯ ಉಸ್ತುವಾರಿ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರಿಗೆ ಧನ್ಯವಾದ ಹೇಳುವುದಾಗಿ ತಿಳಿಸಿದ್ದಾರೆ.

# ಬೀದರ್ ಜಿಲ್ಲೆ ಅಭಿವೃದ್ಧಿಗಾಗಿ ಶಕ್ತಿಮೀರಿ ಶ್ರಮಿಸುವೆ: ಸಚಿವ ಈಶ್ವರ ಖಂಡ್ರೆ



**ಬೆಂಗಳೂರು, ಜೂ.4:** ಹಿಂದುಳಿದಿರುವ ಬೀದರ್ ಜಿಲ್ಲೆಯನ್ನು ಮೈಸೂರು, ಬೆಂಗಳೂರು ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು ಎಂಬುದು ತಮ್ಮ ಕನಸಾಗಿದ್ದು, ಇದಕ್ಕಾಗಿ ಶಕ್ತಿಮೀರಿ ಶ್ರಮಿಸುವುದಾಗಿ ನೂತನ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಬೆಂಗಳೂರಿನಲ್ಲಿ ತಮ್ಮನ್ನು ಅಭಿನಂದಿಸಿದ ಬೀದರ್ ಜನರನ್ನುದ್ದೇಶಿಸಿ ಮಾತನಾಡಿದ ಅವರು, ಬಸವಾದಿ ಶರಣರ ನಾಡು ಬೀದರ್ ತೀವ್ರ ಹಿಂದುಳಿದಿದೆ. ಈ ಪ್ರದೇಶ ಔದ್ಯೋಗಿಕವಾಗಿ, ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿ ಸಾಧಿಸಬೇಕು. ಈ ನಿಟ್ಟಿನಲ್ಲಿ ಎಲ್ಲರ ಪೂರ್ಣ ಸಹಕಾರದೊಂದಿಗೆ ಕಾರ್ಯ ನಿರ್ವಹಿಸುವುದಾಗಿ ಹೇಳಿದರು.

ರಾಜ್ಯ ಸರ್ಕಾರ ಜನಪರವಾಗಿದ್ದು, ಶೋಷಿತರು, ವಂಚಿತರು, ದುರ್ಬಲರು, ದಲಿತರು, ಹಿಂದುಳಿದವರನ್ನು ಮೇಲೆತ್ತಲು ಹಗಲಿರುಳು ದುಡಿಯುತ್ತಿದೆ. ಕಳೆದ 3 ವರ್ಷ ಜೀವಪರ ಮತ್ತು ಜನಪರ ಆಡಳಿತ ನೀಡಿದ್ದು, ಮುಂದಿನ 2 ವರ್ಷವೂ ಉತ್ತಮ ಆಡಳಿತ ನೀಡಿ ಜನಮೆಚ್ಚುಗೆ ಗಳಿಸಿ 2028ರಲ್ಲಿ ಕಾಂಗ್ರೆಸ್ ಪಕ್ಷ ಮರಳಿ ಅಧಿಕಾರಕ್ಕೆ ಬರಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಬೀದರ್ ಸರ್ವಜನಾಂಗದ ಶಾಂತಿಯ ತೋಟವಾಗಿದೆ. ಇಲ್ಲಿ ಪ್ರತಿಯೊಬ್ಬರೂ ಸೌಹಾರ್ದತೆಯಿಂದ ಮತ್ತು ಸಹಬಾಳ್ವೆ ನಡೆಸುತ್ತಿದ್ದಾರೆ. ಬೀದರ್ ಜನತೆ ತಮ್ಮ ಮೇಲೆ ಅಭಿಮಾನವಿಟ್ಟಿದ್ದಾರೆ. ಇವರೆಲ್ಲರ ಪ್ರಾರ್ಥನೆಯ ಫಲವಾಗಿ ತಮಗೆ 3ನೇ ಬಾರಿಗೆ ಸಚಿವರಾಗಿ ಕಾರ್ಯ ನಿರ್ವಹಿಸುವ ಅವಕಾಶ ಸಿಕ್ಕಿದ್ದು, ರಾಜ್ಯದ ಸಮಸ್ತ ಜನತೆಗೆ ಮತ್ತು ಮುಖ್ಯಮಂತ್ರಿಗಳು ಹಾಗೂ ಪಕ್ಷದ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಜನರ ಪ್ರೀತಿ–ವಿಶ್ವಾಸ ತಮಗೆ ಸ್ಫೂರ್ತಿ, ಉತ್ಸಾಹ ತುಂಬುತ್ತಿದ್ದು, ಕೆಲಸ ಮಾಡಲು ಪ್ರೇರಣೆ ಮತ್ತು ಬಲ ನೀಡುತ್ತಿದೆ. ಜನರ ಕಷ್ಟಸುಖದಲ್ಲಿ ತಾವು ಸದಾ ಭಾಗಿಯಾಗುವುದಾಗಿ ಹೇಳಿದ ಅವರು ಅಧಿಕಾರ ಶಾಶ್ವತವಲ್ಲ, ಬರುತ್ತದೆ ಹೋಗುತ್ತದೆ. ಆದರೆ ರಾಜ್ಯದ ಜನರು ತೋರಿರುವ ಪ್ರೀತಿ, ವಿಶ್ವಾಸ ಅಜರಾಮರ ಎಂದರು.

# ಖಾತೆ ಹಂಚಿಕೆಗೆ ಅಸಮಾಧಾನ, ರಾಜೀನಾಮೆಗೆ ಮುಂದಾದ ರಾಮಲಿಂಗಾರೆಡ್ಡಿ

## ಕಂದಾಯಕ್ಕಾಗಿ ಪಟ್ಟು ಸಡಿಲಿಸದ ಕೃಷ್ಣಬೈರೇಗೌಡ



ಬೆಂಗಳೂರು, ಜೂ.4: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲಿ ಮಾರನೇ ದಿನವೇ ಖಾತೆ ಹಂಚಿಕೆ ವಿಚಾರವಾಗಿ ಅಸಮಾಧಾನ ಕಾಣಿಸಿಕೊಂಡಿದ್ದು, ಹಿರಿಯರಾದ ರಾಮಲಿಂಗಾರೆಡ್ಡಿ ರಾಜೀನಾಮೆ ನೀಡಲು ಮುಂದಾಗಿದ್ದು, ಈ ಬೆಳವಣಿಗೆ ಸರ್ಕಾರಕ್ಕೆ ಇರಿಸು– ಮುರಿಸಿನ ವಾತಾವರಣವನ್ನು ನಿರ್ಮಿಸಿದೆ. ಆದೇ ರೀತಿ ಸಚಿವ ಕೃಷ್ಣಬೈರೇಗೌಡ ಕೂಡ ತಮ್ಮಿಂದ ಕಂದಾಯ ಖಾತೆ ಕಸಿದುಕೊಳ್ಳುತ್ತಿರುವುದಕ್ಕೆ ತೀವ್ರ ಅಸಮಾಧಾನಗೊಂಡಿದ್ದಾರೆ.



**ರಾಮಲಿಂಗಾರೆಡ್ಡಿ ಅಸಮಾಧಾನ**

ಸಭೆಯಲ್ಲಿ ಜಲಸಂಪನ್ಮೂಲ ಇಲಾಖೆಗೆ ಸಂಬಂಧಿಸಿದ ವಿಷಯ ಮುನ್ನೆಲೆಗೆ ಬಂದಾಗ ಸಿಟ್ಟಿಗೆದ್ದ ರಾಮಲಿಂಗಾರೆಡ್ಡಿ ಅವರು, ಜಲಸಂಪನ್ಮೂಲಕ್ಕೂ ನನಗೂ ಏನು ಸಂಬಂಧ, ನಾನು ಬೆಂಗಳೂರಿನವನು, ನನಗೆ ಬೆಂಗಳೂರೇ ಬೇಕು" ಎಂದು ನೇರವಾಗಿಯೇ ತಮ್ಮ ಅಸಮಾಧಾನ ಹೊರಹಾಕಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಮಾಧಾನದ ಮಾತುಗಳಿಗೆ ಒಪ್ಪದ ಅವರು, ಮುಖ್ಯಮಂತ್ರಿಗಳ ನಿಲುವಿಗೆ ವಿರೋಧ ವ್ಯಕ್ತಪಡಿಸಿದ ಸಚಿವರು, "ನನಗೆ ಬೇರೆ ಇಲಾಖೆ ಬೇಡ, ನಾನು ಕೇವಲ ಶಾಸಕನಾಗಿ ಇರುತ್ತೇನೆ ಸಾಕು" ಎಂದು ಬೇಸರದಿಂದ ನುಡಿದು ಸಭೆಯಿಂದ ನಿರ್ಗಮಿಸಿದರು ಎನ್ನಲಾಗಿದೆ. ಬೆಂಗಳೂರು ನಗರಾಭಿವೃದ್ಧಿ ಖಾತೆಗಾಗಿ ಪಟ್ಟುಹಿಡಿದಿರುವ ರಾಮಲಿಂಗಾರೆಡ್ಡಿ ಜಲ ಸಂಪನ್ಮೂಲ ಖಾತೆ ನಿರ್ವಹಿಸಲು ನಿರಾಕರಿಸಿದ್ದಾರೆ. ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ರಾಮಲಿಂಗಾರೆಡ್ಡಿ ಯವರಿಗೆ ನಗರಾಭಿವೃದ್ಧಿ ಖಾತೆ ನೀಡುವ ಚರ್ಚೆಯಾಗಿತ್ತು. ಆ ವೇಳೆ ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ.ಸುರೇಶ್ ಅವರು ರಾಮಲಿಂಗಾರೆಡ್ಡಿ ಅವರ ಮನೆಗೆ ತೆರಳಿ, ಮನವೊಲಿಸಿದ್ದಲ್ಲದೇ ಆರಂಭದ ಎರಡೂವರೆ ವರ್ಷಗಳ ಕಾಲ ಬೆಂಗಳೂರು ನಗರಾಭಿವೃದ್ಧಿಯನ್ನು ಬಿಟ್ಟುಕೊಡುವಂತೆ ಮನವಿ ಮಾಡಿದ್ದರು. ಅದಕ್ಕೆ ಆಗ ರಾಮಲಿಂಗಾರೆಡ್ಡಿ ಒಪ್ಪಿದ್ದರು. ಈಗ ಸಂಪುಟ ರಚನೆಯಾದಾಗ ಬೆಂಗಳೂರಿನ ನಗರಾಭಿವೃದ್ಧಿ ಬದಲಾಗಿ ಜಲಸಂಪನ್ಮೂಲ ಖಾತೆ ನೀಡಲು ನಿರ್ಧರಿಸಲಾಗಿದೆ.

**ನೀರಾವರಿ ಇಲಾಖೆಯಲ್ಲಿ ಕೆಲಸ ಮಾಡಲು ಏನೂ ಉಳಿದಿಲ್ಲ**

ಜಲಸಂಪನ್ಮೂಲ ಇಲಾಖೆಗೆ 37,800 ಕೋಟಿ ರೂ. ಹಂಚಿಕೆಯಾಗಿದ್ದು, ಅದರಲ್ಲಿ 37,300 ಕೋಟಿ ರೂ.ಗಳಷ್ಟು ವೆಚ್ಚದ ಕಾಮಗಾರಿಗಳಿಗೆ ಟೆಂಡರ್ ಕರೆದು, ಮುಂದಿನ ಎರಡು ವರ್ಷಗಳ ಕೆಲಸಗಳನ್ನು ಈಗಾಗಲೇ ಇತ್ಯರ್ಥಗೊಳಿಸಲಾಗಿದೆ. ಇನ್ನೂ ಜಲಸಂಪನ್ಮೂಲ ಇಲಾಖೆಯಲ್ಲಿ ಬಾಕಿಯಿರುವುದು ಕೋರ್ಟ್ ತಗಾದೆ ಪ್ರಕರಣಗಳಷ್ಟೆ. ಅಲ್ಲಿ ಕೆಲಸ ಮಾಡಲು ಏನೂ ಉಳಿದಿಲ್ಲ ಎಂಬ ಅಸಮಾಧಾನ ರಾಮಲಿಂಗಾರೆಡ್ಡಿ ವ್ಯಕ್ತಪಡಿಸಿದ್ದಾರೆ ಎಂದು ಹೇಳಲಾಗಿದೆ.

## ದುಡುಕಬೇಡಿ ಎಂದು ಸಿಎಂ ಭರವಸೆ



ಗುರುವಾರ ಬೆಳಗ್ಗೆ ರಾಮಲಿಂಗಾರೆಡ್ಡಿಯವರು ರಾಜೀನಾಮೆ ಬರೆದ ಪತ್ರವನ್ನು ಮಡಚಿ ತಮ ಜೇಬಿನಲ್ಲಿಟ್ಟು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದರು. ವಿಧಾನಸೌಧದಲ್ಲಿ ರಾಜೀನಾಮೆ ಪತ್ರವನ್ನು ಮುಖ್ಯಮಂತ್ರಿ ಅವರಿಗೆ ನೀಡಿದ್ದಾರೆ ಎಂದು ತಿಳಿದುಬಂದಿದೆ. ಆದರೆ ಇದನ್ನು ಒಪ್ಪದ ಡಿ.ಕೆ.ಶಿವಕುಮಾರ್ ಮನವೊಲಿಸಿ, ಹಿರಿಯ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಲು ಬಲವಂತಪಡಿಸಿ ಕರೆದೊಯ್ದಿದ್ದಾರೆ. ನಿಮ್ಮ ಆಸೆಯಂತೆ ನಗರಾಭಿವೃದ್ಧಿ ಇಲಾಖೆಯ ಜವಾಬ್ದಾರಿಯನ್ನೇ ವಹಿಸಲು ಹೈಕಮಾಂಡ್ ಬಳಿ ಚರ್ಚೆ ಮಾಡುತ್ತೇನೆ. ದುಡುಕಬೇಡಿ ಎಂದು ಭರವಸೆ ನೀಡಿದ್ದಾರೆ ಎನ್ನಲಾಗಿದೆ.

## ಯಾವುದೇ ಖಾತೆಗೆ ಬೇಡಿಕೆ ಇಟ್ಟಿಲ್ಲ: ಎಂ.ಬಿ. ಪಾಟೀಲ್



ಖಾತೆ ಹಂಚಿಕೆ ವಿಚಾರ, ಮುಖ್ಯಮಂತ್ರಿ ಅವರ ವಿವೇಚನೆಗೆ ಬಿಟ್ಟಿದ್ದು .ಯಾರಿಗೆ ಯಾವ ಖಾತೆ ನೀಡಬೇಕೆಂಬುದರ ಕುರಿತು ಮುಖ್ಯಮಂತ್ರಿ ಮತ್ತು ಹೈಕಮಾಂಡ್ ಅವರು ಚರ್ಚಿಸಿ ನಿರ್ಧರಿಸಲಿದ್ದಾರೆ. ನಾನು ಯಾವುದೇ ಖಾತೆಗೆ ಬೇಡಿಕೆಯನ್ನಿಟ್ಟಿಲ್ಲ. ಹೈಕಮಾಂಡ್ ನಿರ್ಧಾರಕ್ಕೆ ಬದ್ಧ ಎಂದು ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಎಲ್ಲರೂ ಒಗ್ಗಟ್ಟಾಗಿ ಉತ್ತಮ ಕೆಲಸ ಮಾಡಲಿದ್ದೇವೆ. ಮುಂದಿನ ಚುನಾವಣೆಯಲ್ಲೂ ಸಹ ಕಾಂಗ್ರೆಸ್ ಪಕ್ಷ ಇನ್ನೂ ಹೆಚ್ಚು ಸ್ಥಾನಗಳನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಲಿದ್ದೇವೆ ಎಂದು ಎಂ.ಬಿ. ಪಾಟೀಲ್ ಹೇಳಿದರು.

## ಸಚಿವರ ಖಾತೆ

* ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ – ಆಡಳಿತ ಮತ್ತು ಸಿಬ್ಬಂದಿ ಸುಧಾರಣಾ ಇಲಾಖೆ, ಹಣಕಾಸು, ಗುಪ್ತಚರ, ಇತರ
* ಡಾ. ಜಿ. ಪರಮೇಶ್ವರ, ಉಪಮುಖ್ಯಮಂತ್ರಿ – ಕಂದಾಯ, ಯುವ ಸಬಲೀಕರಣ
* ರಾಮಲಿಂಗಾರೆಡ್ಡಿ– ಜಲಸಂಪನ್ಮೂಲ
* ಸತೀಶ್ ಜಾರಕಿಹೊಳಿ – ಲೋಕೋಪಯೋಗಿ
* ಕೆ.ಜೆ. ಜಾರ್ಜ್ – ಇಂಧನ, ಪ್ರವಾಸೋದ್ಯಮ
* ಕೆ.ಎಚ್. ಮುನಿಯಪ್ಪ – ಆಹಾರ ಮತ್ತು ನಾಗರಿಕ ಪೂರೈಕೆ
* ಈಶ್ವರ್ ಖಂಡ್ರೆ –ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
* ಎಂ.ಬಿ. ಪಾಟೀಲ್– ಬೃಹತ್ ಮತ್ತು ಮಧ್ಯಮ ಕೈಗಾರಿಕೆ
* ಡಾ. ಶರಣಪ್ರಕಾಶ್ ಪಾಟೀಲ್– ವೈದ್ಯಕೀಯ ಶಿಕ್ಷಣ
* ಪ್ರಿಯಾಂಕ ಖರ್ಗೆ– ಗೃಹ ಮತ್ತು ಐಟಿಬಿಟಿ
* ಯು.ಟಿ. ಖಾದರ್– ಆರೋಗ್ಯ ಮತ್ತು ಕುಟುಂಬ ಕಲ್ಯಾಣ
* ಬೈರತಿ ಸುರೇಶ್– ಸಾರಿಗೆ ಇಲಾಖೆ
* ಕೃಷ್ಣಬೈರೇಗೌಡ– ಬೆಂಗಳೂರು ನಗರಾಭಿವೃದ್ಧಿ
* ಡಾ. ಯತೀಂದ್ರ ಸಿದ್ದರಾಮಯ್ಯ – ನಗರಾಭಿವೃದ್ಧಿ

# ಕೇರಳದಂತೆ ಸಿಎಂ ಶಿವಕುಮಾರ್ ಕೂಡ ರಾಜ್ಯದ ಆರ್ಥಿಕ ಸ್ಥಿತಿಗತಿ ಬಗ್ಗೆ ಶ್ವೇತಪತ್ರ ಮಂಡಿಸಲಿ



**ಬೆಂಗಳೂರು, ಜೂ.4:** ಕೇರಳಂನ ನೂತನ ಮುಖ್ಯಮಂತ್ರಿ ವಿ.ಡಿ.ಸತೀಶನ್ ಅವರು ತಮ್ಮ ರಾಜ್ಯದ ಆರ್ಥಿಕ ಸ್ಥಿತಿಗತಿಯ ನೈಜ ಚಿತ್ರಣವನ್ನು ಜನರ ಮುಂದಿಡುವ ಉದ್ದೇಶದಿಂದ ಹಣಕಾಸು ಶ್ವೇತಪತ್ರ ಮಂಡಿಸಿರುವುದು ಸ್ವಾಗತಾರ್ಹ. ಅದೇ ಮಾದರಿಯಲ್ಲಿ ಕರ್ನಾಟಕದ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೂಡ ರಾಜ್ಯದ ಹಣಕಾಸಿನ ಸ್ಥಿತಿಗತಿಯ ಕುರಿತು ಶ್ವೇತಪತ್ರ ಮಂಡಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಈ ಕುರಿತು ಅಶೋಕ್ ಅವರು ಟ್ವೀಟ್ ಮಾಡಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕಕ್ಕೆ ಬಿಟ್ಟುಹೋಗಿರುವ ಆರ್ಥಿಕ ಬಳುವಳಿ ಏನು ಎಂಬುದನ್ನು ತಿಳಿದುಕೊಳ್ಳುವ ಹಕ್ಕು ರಾಜ್ಯದ ಜನರಿಗಿದೆ. ರಾಜ್ಯದ ಸಾಲ ಎಷ್ಟು ಹೆಚ್ಚಾಗಿದೆ, ಸರ್ಕಾರದ ಖಜಾನೆಯ ನಿಜವಾದ ಸ್ಥಿತಿಗತಿ ಏನು ಅವೈಜ್ಞಾನಿಕ ಯೋಜನೆಗಳು, ಮತಬ್ಯಾಂಕ್ ರಾಜಕಾರಣ ಮತ್ತು ದುಂದುವೆಚ್ಚಗಳಿಂದ ರಾಜ್ಯದ ಆರ್ಥಿಕತೆಗೆ ಎಷ್ಟು ಹಾನಿಯಾಗಿದೆ ಮುಂದಿನ ಪೀಳಿಗೆಯ ಹೆಗಲ ಮೇಲೆ ಎಷ್ಟು ಸಾಲದ ಹೊರೆ ಹಾಕಲಾಗಿದೆ ಎಂದು ತಿಳಿಯಬೇಕಿದೆ. ಮುಚ್ಚಿಡಲು, ಮರೆಮಾಚಲು ಏನೂ ಇಲ್ಲವಾದರೆ ಕಾಂಗ್ರೆಸ್ ಸರ್ಕಾರ ತಕ್ಷಣವೇ ವಿಧಾನಸಭೆಯಲ್ಲಿ ಹಣಕಾಸು ಶ್ವೇತಪತ್ರ ಮಂಡಿಸಬೇಕು. ಸತ್ಯವನ್ನು ಹೊರಗೆ ಬರಲು ಬಿಡಬೇಕು. ಕರ್ನಾಟಕಕ್ಕೆ ಪಾರದರ್ಶಕತೆ ಬೇಕು. ಕನ್ನಡಿಗರಿಗೆ ಉತ್ತರದಾಯಿತ್ವ ಬೇಕು. ಎಲ್ಲಕ್ಕಿಂತ ಮುಖ್ಯವಾಗಿ, ಸಿದ್ದರಾಮಯ್ಯ ಸರ್ಕಾರ ರಾಜ್ಯಕ್ಕೆ ಬಿಟ್ಟುಹೋಗಿರುವ ನಿಜವಾದ "ಸಾಕ್ಷಿಗುಡ್ಡೆ" ಏನು ಎಂಬುದು ಜನರಿಗೆ ತಿಳಿಯಬೇಕು ಎಂದು ಅವರು ಒತ್ತಾಯಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜೂನ್ 5 2026, ಶುಕ್ರವಾರ

## ಒಳಪುಟಗಳಲ್ಲಿ

ಭಯೋತ್ಪಾದಕ ಸಂಚು ವಿಫಲಗೊಳಿಸಿದ ಪಂಜಾಬ್ ಪೊಲೀಸ್ - ಪು.4



ಎರಡನೇ ಪಟ್ಟಿಯಲ್ಲಿ ಅವಕಾಶ: ಲಾಡ್ ವಿಶ್ವಾಸ - ಪು.5

ಕೂಡ್ಲಿಗಿ ತಾಲೂಕಿನಲ್ಲಿ ಜಪಾನ್ ಶೈಲಿ ಮಿಯಾವಾಕಿ ಮಾದರಿ ಅರಣ್ಯ ನಿರ್ಮಾಣ - ಪು.6

ಡಿಜಿಟಲ್ ಸಂವಹನ ಅವಿಭಾಜ್ಯ ಅಂಗ: ಫಿರೋಜಾ ಮಿರಜ್ಕರ್ - ಪು.7

# ದಿನದ 24 ಗಂಟೆ ಜನಸೇವೆಗೆ ಲಭ್ಯವಿರಿ, ಅನಗತ್ಯ ವಿಳಂಬ ಸಹಿಸಲ್ಲ

## ಅಧಿಕಾರಿಗಳಿಗೆ ನೂತನ ಸಿಎಂ ಡಿ.ಕೆ. ಶಿವಕುಮಾರ್ ಖಡಕ್ ಎಚ್ಚರಿಕೆ

**ಬೆಂಗಳೂರು, ಜೂ. 4: ಅಧಿಕಾರಿಗಳು ದಿನದ 24 ಗಂಟೆಯೂ ಜನರ ಸೇವೆಗೆ ಲಭ್ಯವಾಗಿರಬೇಕು. ಕಾನೂನು ಹಾಗೂ ನಿಯಾಮಾವಳಿಯ ನೆಪ ಹೇಳಿ ಅನಗತ್ಯ ವಿಳಂಬ ಧೋರಣೆ ಅನುಸರಿಸಿದರೆ ಸಹಿಸುವುದಿಲ್ಲ ಎಂದು ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಖಡಕ್ ಎಚ್ಚರಿಕೆ ನೀಡಿದ್ದಾರೆ.**

ವಿಧಾನಸೌಧದಲ್ಲಿಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ವಿವಿಧ ಇಲಾಖೆಗಳ ಅಯುಕ್ತರು, ನಿರ್ದೇಶಕರು, ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ಮೇಲ್ಪಟ್ಟ ಹಿರಿಯ ಅಧಿಕಾರಿಗಳು, ಅಪರ ಮುಖ್ಯ ಪ್ರಧಾನ ಸಂರಕ್ಷಣಾಧಿಕಾರಿಗಳು, ಮೇಲ್ಪಟ್ಟ ಅರಣ್ಯಾಧಿಕಾರಿಗಳ ಜೊತೆ ಮಹತ್ವದ ಸಭೆ ನಡೆಸಿದರು.

ಈವರೆಗಿನದು ಒಂದು ಲೆಕ್ಕ, ಇನ್ನು ಮುಂದೆ ಬೇರೆಯದೇ ಲೆಕ್ಕ. ಆಡಳಿತದಲ್ಲಿ ಜಡತ್ವವನ್ನು ಯಾವ ಕಾರಣಕ್ಕೂ ಸಹಿಸುವುದಿಲ್ಲ, ಹಾಗೆಯೇ ಭ್ರಷ್ಟಾಚಾರಕ್ಕೂ ಆಸ್ಪದ ನೀಡುವುದಿಲ್ಲ ಎಂದು ಹೇಳಿದರು.

ಇನ್ನೂ ಸಂಪುಟದ ಖಾತೆಗಳು ಹಂಚಿಕೆಯಾಗದ ಹಿನ್ನೆಲೆಯಲ್ಲೇ ಖಾತೆ ರಹಿತ ಸಚಿವರು ಸಭೆಯಲ್ಲಿ ಭಾಗವಹಿಸಿದ್ದರು. ಜನ ಸಂಪರ್ಕ ಹೆಚ್ಚಿರುವ ಕಂದಾಯ, ಗ್ರಾಮೀಣಾಭಿವೃದ್ಧಿ, ಸಾರಿಗೆ, ಆರೋಗ್ಯ, ಶಿಕ್ಷಣ ಮತ್ತು ಪೊಲೀಸ್ ಇಲಾಖೆಗಳ ಜವಾಬ್ದಾರಿ ನಿರ್ವಹಿಸುವ ಅಧಿಕಾರಿಗಳು ಕಾಲಮಿತಿ ಹಾಗೂ ಕಡತಗಳಿಗೆ ಜೋತು



ಬೀಳದೇ ಜನಪರವಾದ ಆಡಳಿತ ನೀಡಲು, ದಿನದ 24 ಗಂಟೆಗಳ ಕಾಲವೂ ಜವಾಬ್ದಾರಿ ನಿರ್ವಹಣೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಾಕೀತು ಮಾಡಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದಲೂ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುತ್ತಿದೆ. ಆದರೆ ಅದರಲ್ಲಿ ದುರುಪಯೋಗವಾಗುತ್ತಿರುವುದು ಕಂಡುಬಂದಿದೆ. ಸುಮಾರು 100 ಕೋಟಿ ರೂ. ಹೆಚ್ಚಿನ ಹಣ ಅನರ್ಹರ ಪಾಲಾಗಿದೆ. ಅಧಿಕಾರಿಗಳು ಇಂತಹ ವಿಚಾರಗಳಲ್ಲಿ ಜವಾಬ್ದಾರಿಯುತವಾಗಿ ವರ್ತಿಸಬೇಕೆಂದು ಡಿ.ಕೆ.ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರದ ಯಾವುದೇ ಯೋಜನೆಗಳಿಗೆ ಹಣಕಾಸಿನ ಕೊರತೆ ಇಲ್ಲ. ಅಧಿಕಾರಿಗಳು ದಕ್ಷತೆಯಿಂದ ಕೆಲಸ ಮಾಡದೆ ಹಣಕಾಸಿನ ಸಮಸ್ಯೆ ಇದೆ ಎಂದು ಬಿಂಬಿಸಿದರೆ, ಕಠಿಣಕ್ರಮ ಕೈಗೊಳ್ಳಲಾಗುವುದು. ಉದ್ಯಮ, ಕೃಷಿ, ಶಿಕ್ಷಣ, ವ್ಯಾಪಾರ ಚಟುವಟಿಕೆಗಳಿಗೆ ಅನುಕೂಲಕರ ವಾತಾವರಣ ಸೃಷ್ಟಿಸಬೇಕು. ಉದ್ಯೋಗ ಸೃಷ್ಟಿಯತ್ತ ಹೆಚ್ಚಿನ ಆಸಕ್ತಿವಹಿಸಬೇಕು ಎಂದು ಸಲಹೆ ನೀಡಿದರು.

ಮಳೆಗಾಲ ಆರಂಭವಾಗುತ್ತಿದ್ದು, ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ರಸಗೊಬ್ಬರ, ಬಿತ್ತನೆ ಬೀಜ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು. ಶಾಂತಿ ಸುವ್ಯಸ್ಥೆ ಕದಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಪೊಲೀಸರು ಅತ್ಯಂತ ಎಚ್ಚರಿಕೆಯಿಂದ ಹಾಗೂ ಸೂಕ್ಷ್ಮತೆಯಿಂದ, ಸರ್ವಜನಾಂಗದ ಶಾಂತಿಯ ತೋಟ ಎಂಬ ಪರಿಕಲ್ಪನೆಯಲ್ಲಿ ಕೆಲಸ ನಿರ್ವಹಿಸುವಂತೆ ಆದೇಶಿಸಿದರು.

ಇನ್ನು ಮುಂದೆ ಯಾವುದೇ ಅಧಿಕಾರಿ ನಿರ್ಲಕ್ಷ್ಯ ವಹಿಸಿದರೆ, ಸರ್ಕಾರಕ್ಕೆ ಕೆಟ್ಟ ಹೆಸರು ಬರುವಂತೆ ನಡೆದುಕೊಂಡರೆ ಮುಲಾಜಿಲ್ಲದೆ ಕ್ರಮ ಜರುಗಿಸಲಾಗುತ್ತದೆ. ಕಾನೂನು ಬಾಹಿರ ಚಟುವಟಿಕೆಗಳನ್ನು ಕಟ್ಟುನಿಟ್ಟಾಗಿ ಹತ್ತಿಕ್ಕಬೇಕು. ಸರ್ಕಾರಿ ಕಚೇರಿಗಳಲ್ಲಿ ಜನರ ಜೊತೆ ಅಧಿಕಾರಿಗಳು ಸೌಹಾರ್ದತೆಯಿಂದ ವರ್ತಿಸಬೇಕು ಎಂದರು.

# ಇಂಧನ ಕ್ಷೇತ್ರದಲ್ಲಿ ಬಾಂಧವ್ಯ ಬಲವರ್ಧನೆ: ಭಾರತ-ವೆನಿಜುವೆಲಾ ಕಾರ್ಯತಂತ್ರ

## ಪ್ರಧಾನಿ ನರೇಂದ್ರ ಮೋದಿ ಮತ್ತು ವೆನೆಜುವೆಲಾ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಮಾತುಕತೆ

**ನವದೆಹಲಿ, ಜೂ.4:** ಭಾರತ ಮತ್ತು ವೆನೆಜುವೆಲಾ ದೇಶಗಳು ಇಂಧನ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸಲು ಮತ್ತು ದೀರ್ಘಾವಧಿಯ ಕಾರ್ಯತಂತ್ರದ ಪಾಲುದಾರಿಕೆ ರೂಪಿಸಲು ಮುಂದಾಗಿವೆ. ಈ ತಿಂಗಳು ವೆನಿಜುವೆಲಾದ ರಾಜಧಾನಿ ಕಾರಕಾಸ್ ಭಾರತದ ಮೂರನೇ ಅತಿದೊಡ್ಡ ಕಚ್ಚಾತೈಲ ಪೂರೈಕೆದಾರನಾಗಿ ಹೊರಹೊಮ್ಮಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಗುರುವಾರ ತಿಳಿಸಿದೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ನಡುವಿನ ಮಾತುಕತೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ (ಪೂರ್ವ) ರುದ್ರೇಂದ್ರ ಟಂಡನ್, ವೆನೆಜುವೆಲಾದಲ್ಲಿರುವ ಅಪಾರ ತೈಲ ನಿಕ್ಷೇಪಗಳು ಮತ್ತು ಭಾರತದಲ್ಲಿ ನಿರಂತರವಾಗಿ ಹೆಚ್ಚುತ್ತಿರುವ ಇಂಧನ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು, ಈ ಚರ್ಚೆಯಲ್ಲಿ ಇಂಧನ ಸಹಕಾರಕ್ಕೆ ಪ್ರಮುಖ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

ಇಬ್ಬರು ನಾಯಕರು ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ಶ್ರೇಣಿಯನ್ನು ಪರಿಶೀಲಿಸಿದರು ಮತ್ತು ಇಂಧನ, ವ್ಯಾಪಾರ, ಹೂಡಿಕೆ, ಆರೋಗ್ಯ ರಕ್ಷಣೆ ಮತ್ತು ಆಟೋಮೊಬೈಲ್‌ಗಳಂತಹ ಕ್ಷೇತ್ರಗಳಲ್ಲಿ ಸಹಕಾರಕ್ಕಾಗಿ ಹೊಸ ಅವಕಾಶಗಳನ್ನು ಗುರುತಿಸಿದರು. ವಿದೇಶಾಂಗ ಸಚಿವಾಲಯದ ಪ್ರಕಾರ, ಮಾತುಕತೆ ಎರಡೂ ದೇಶಗಳ ನಡುವಿನ ಬಹು ಕ್ಷೇತ್ರಗಳನ್ನು



ಒಳಗೊಂಡಿವೆ ಮತ್ತು ಸಹಯೋಗದ ಹೊಸ ಮಾರ್ಗಗಳನ್ನು ಅನ್ವೇಷಿಸುವಾಗ ಅಸ್ತಿತ್ವದಲ್ಲಿರುವ ಪಾಲುದಾರಿಕೆಗಳನ್ನು ಬಲಪಡಿಸುವತ್ತ ಗಮನಹರಿಸಿವೆ ಎಂದರು.

ಇಂಧನ, ವ್ಯಾಪಾರ, ಹೂಡಿಕೆ, ಆರೋಗ್ಯ ರಕ್ಷಣೆ, ಆಟೋಮೊಬೈಲ್‌ಗಳಲ್ಲಿ ಸಹಕಾರದ ಹೊಸಮಾರ್ಗಗಳನ್ನು ಅನ್ವೇಷಿಸಿದರು" ಎಂದು ಎಂಇಎ ಹೇಳಿಕೆಯಲ್ಲಿ ತಿಳಿಸಿದೆ. ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆಯೂ ನಾಯಕರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಅಭಿವೃದ್ಧಿಶೀಲ ರಾಷ್ಟ್ರಗಳ ನಡುವೆ ಬಲವಾದ ಸಹಕಾರದ ಮೇಲೆ ಹಂಚಿಕೆಯ ಒತ್ತು ಪ್ರತಿಬಿಂಬಿಸುವ ಭಾರತ-ವೆನೆಜುವೆಲಾ ಪಾಲುದಾರಿಕೆಯನ್ನು ಗಾಢವಾಗಿಸಲು ಮತ್ತು ಜಾಗತಿಕ ದಕ್ಷಿಣದ ಹಿತಾಸಕ್ತಿಗಳನ್ನು ಮುನ್ನಡೆಸಲು ಎರಡೂ ಕಡೆಯವರು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ ಎಂದು ಸಚಿವಾಲಯ ತಿಳಿಸಿದೆ. ಭಾರತ ಮತ್ತು ವೆನೆಜುವೆಲಾ ಸಾಂಪ್ರದಾಯಿಕವಾಗಿ ಬೆಚ್ಚಗಿನ ಸಂಬಂಧಗಳನ್ನು ಕಾಯ್ದುಕೊಂಡಿವೆ, ವಿಶೇಷವಾಗಿ ಇಂಧನ ವಲಯದಲ್ಲಿ. ವಿದೇಶಾಂಗ ವ್ಯವಹಾರಗಳು, ಆರ್ಥಿಕತೆ ಮತ್ತು ಹಣಕಾಸು, ವಿಜ್ಞಾನ ಮತ್ತು ತಂತ್ರಜ್ಞಾನ, ಸಂವಹನ ಮತ್ತು ಮಾಹಿತಿ ಮತ್ತು ಸಾರಿಗೆಯ ಜವಾಬ್ದಾರಿಯುತ ಸಚಿವರನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗದೊಂದಿಗೆ ರೋಡ್ರಿಗಸ್ ಐದು ದಿನಗಳ ಭೇಟಿಗಾಗಿ ಬುಧವಾರ ಭಾರತಕ್ಕೆ ಆಗಮಿಸಿದ್ದಾರೆ.

# ಪ್ರಧಾನಿ ಮೋದಿ ತುರ್ತು ಪರಿಸ್ಥಿತಿ ಹೇರಬಹುದು: ರಾಹುಲ್ ಕಳವಳ



**ನವದೆಹಲಿ, ಜೂ.4:** ತಾವು ಒಮ್ಮೆ ನಿಯಂತ್ರಿಸುತ್ತಿದ್ದ ವ್ಯವಸ್ಥೆಯ ಕುಸಿತದ ನಂತರ ಜನರ ಒತ್ತಡವನ್ನು ನಿವಾರಿಸಲು ಪ್ರಧಾನಿ ನರೇಂದ್ರ ಮೋದಿ ತುರ್ತು ಪರಿಸ್ಥಿತಿ ಹೇರಬಹುದು. ಒಂದು ವರ್ಷದೊಳಗೆ ಮೋದಿ ಅಧಿಕಾರವನ್ನು ಕಳೆದು ಕೊಳ್ಳುತ್ತಾರೆ ಎಂದು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಆದಿವಾಸಿ ಕಾಂಗ್ರೆಸ್ ಆಯೋಜಿಸಿದ್ದ ಕಾರ್ಯಕ್ರಮವೊಂದರಲ್ಲಿ ಬುಡಕಟ್ಟು ನಾಯಕರನ್ನು ಉದ್ದೇಶಿಸಿ ಮಾತನಾಡಿದ ರಾಹುಲ್ ಮತ್ತೊಮ್ಮೆ ಭಯಾನಕ ಆರ್ಥಿಕ ಸುನಾಮಿ ಸಮೀಪಿಸುತ್ತಿರುವ ಬಗ್ಗೆ ಎಚ್ಚರಿಕೆ ನೀಡಿದರು. ಮೋದಿ ಈ ಹಿಂದೆ ನಿಯಂತ್ರಿಸಿದ ವ್ಯವಸ್ಥೆಯು ಈಗ ಕುಸಿಯುತ್ತಿದೆ. ಅಗಾಧವಾದ ಸಾರ್ವಜನಿಕ ಒತ್ತಡ ಹೊರಹೊಮ್ಮಲಿದೆ. ಇದು ಪ್ರಧಾನಿ ಮೋದಿ ಅವರಿಗೆ ಅಪಾಯಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ದೇಶದಲ್ಲಿ ವ್ಯವಸ್ಥೆಯೊಳಗೆ ಒಂದು ಸಾಂಸ್ಥಿಕ ದಂಗೆ ನಡೆಯುತ್ತಿದೆ. ಚುನಾವಣಾ ಆಯೋಗವು ಸಂಪೂರ್ಣವಾಗಿ ನಿಯಂತ್ರಿಸಲ್ಪಟ್ಟಿದೆ ಎಂದು ನೀವು ಭಾವಿಸುತ್ತೀರಿ. ಮುಖ್ಯ ಚುನಾವಣಾ ಆಯುಕ್ತರ ಸಂದೇಶಗಳು ನನ್ನನ್ನು ತಲುಪುತ್ತಿವೆ. ಗುಪ್ತಚರ ವ್ಯವಸ್ಥೆಯ ಮುಖ್ಯಸ್ಥರು, ಹಿರಿಯ ನ್ಯಾಯಾಂಗ ಸದಸ್ಯರು, ಎಲ್ಲರೂ ದಂಗೆ ಏಳುತ್ತಿದ್ದಾರೆ. ಅವರು ನಮಗೆ ಮಾಹಿತಿ ನೀಡುತ್ತಿದ್ದಾರೆ ಎಂದರು.

ಆರ್ಥಿಕ ಒತ್ತಡ, ಬಡತನ ಮತ್ತು ಸಂಕಟಗಳು ಜನರಲ್ಲಿ ಆಕ್ರೋಶ ಹೆಚ್ಚಿಸುತ್ತಿದೆ. ಈಗ, ಅವರು ಸಾರ್ವಜನಿಕ ಒತ್ತಡವನ್ನು ನಿಗ್ರಹಿಸಲು ಮತ್ತು ತುರ್ತು ಪರಿಸ್ಥಿತಿಯಂತಹದ್ದನ್ನು ಹೇರಲು ಪ್ರಯತ್ನಿಸಬಹುದು. ಅದು ಸಾಧ್ಯವಿದೆ ಎಂದು ಹೇಳಿದರು.

# ರಾಜ್ಯಸಭೆ ಚುನಾವಣೆ: ಖರ್ಗೆ ಸೇರಿ ಕಾಂಗ್ರೆಸ್ ಅಭ್ಯರ್ಥಿಗಳಿಂದ ಇಂದು ನಾಮಪತ್ರ ಸಲ್ಲಿಕೆ



**ಬೆಂಗಳೂರು, ಜೂ.4:** ಮುಂಬರುವ ರಾಜ್ಯಸಭೆ ಚುನಾವಣೆಗೆ ಕರ್ನಾಟಕದಿಂದ ಸ್ಪರ್ಧಿಸಲಿರುವ ಕಾಂಗ್ರೆಸ್ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅಧಿಕೃತವಾಗಿ ನಿಗದಿಯಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಮನ್ಸೂರ್ ಅಲಿಖಾನ್ ಅವರು ಶುಕ್ರವಾರ ಮಧ್ಯಾಹ್ನ 12:30ಕ್ಕೆ ವಿಧಾನಸೌಧದಲ್ಲಿ ನಾಮಪತ್ರಗಳನ್ನು ಸಲ್ಲಿಸಲಿದ್ದಾರೆ.

ರಾಷ್ಟ್ರ ರಾಜಕಾರಣದ ದೃಷ್ಟಿಯಿಂದ ಅತ್ಯಂತ ಮಹತ್ವದ ಜವಾಬ್ದಾರಿ ಹೊಂದಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಾಮಪತ್ರ ಸಲ್ಲಿಕೆ ಕಾರ್ಯಕ್ರಮಕ್ಕೆ ಹೈಕಮಾಂಡ್ ಭಾರಿ ಪ್ರಾಮುಖ್ಯತೆ ನೀಡಿದೆ. ಹೀಗಾಗಿ, ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಅವರು ನಾಮಪತ್ರ ಸಲ್ಲಿಸುವ ವೇಳೆ ಖರ್ಗೆ ಅವರ ಜತೆ ಇರಲಿದ್ದಾರೆ.

ಕಾಂಗ್ರೆಸ್ ಪಕ್ಷದಿಂದ ಒಟ್ಟು ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವುದು ಖಚಿತವಾಗಿದ್ದರೂ, ಮೂರನೇ ಸ್ಥಾನದ ಅಭ್ಯರ್ಥಿ ಯಾರು ಎನ್ನುವ ಕುರಿತು ಹೈಕಮಾಂಡ್ ಮಟ್ಟದಲ್ಲಿ ಇನ್ನು ಅಂತಿಮ ತೀರ್ಮಾನ ಹೊರಬಿದ್ದಿಲ್ಲ.

ಸದ್ಯ ಲಭ್ಯವಿರುವ ಮಾಹಿತಿಯ ಪ್ರಕಾರ, ಪ್ರಮುಖ ನಾಯಕರಾದ ವೈ.ಎಸ್. ಶರ್ಮಿಳಾ ರೆಡ್ಡಿ ಮತ್ತು ಪವನ್ ಖೇರಾ ಅವರ ಹೆಸರು ಪೈಪೋಟಿಯಲ್ಲಿವೆ. ಆಂಧ್ರಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷೆಯಾಗಿರುವ ಶರ್ಮಿಳಾ ಅವರನ್ನು ಕರ್ನಾಟಕದ ಕೋಟಾದಿಂದ ರಾಜ್ಯಸಭೆಗೆ ಕಳುಹಿಸುವ ಮೂಲಕ ದಕ್ಷಿಣ ಭಾರತದಲ್ಲಿ ಪಕ್ಷದ ಸಂಘಟನೆಗೆ ಮತ್ತಷ್ಟು ಬಲ ತುಂಬಲು ಹೈಕಮಾಂಡ್ ಯೋಚಿಸುತ್ತಿದೆ ಎನ್ನಲಾಗಿದೆ. ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ವಕ್ತಾರರಾಗಿ ಮತ್ತು ಪ್ರಮುಖ ತಂತ್ರಜ್ಞರಾಗಿ ದೆಹಲಿ ಮಟ್ಟದಲ್ಲಿ ಸಕ್ರಿಯರಾಗಿರುವ ಪವನ್ ಖೇರಾ ಅವರಿಗೆ ಈ ಬಾರಿ ಕರ್ನಾಟಕದಿಂದ ಅವಕಾಶ ನೀಡಬೇಕು ಎನ್ನುವ ಒತ್ತಡವೂ ಇದೆ. ಈ ಇಬ್ಬರು ಪ್ರಭಾವಿ ನಾಯಕರಲ್ಲಿ ಯಾರಿಗೆ ಅದೃಷ್ಟ ಒಲಿಯಲಿದೆ ಎನ್ನುವುದು ಗುರುವಾರ ತಡರಾತ್ರಿಯ ಒಳಗೆ ಹೈಕಮಾಂಡ್ ಅಧಿಕೃತವಾಗಿ ಪ್ರಕಟಿಸಲಿದೆ. ಅಂತಿಮವಾಗಿ ಆಯ್ಕೆಯಾಗುವ ಮೂರನೇ ಅಭ್ಯರ್ಥಿ ಕೂಡ ಶುಕ್ರವಾರ ಮಧ್ಯಾಹ್ನವೇ ಖರ್ಗೆ ಹಾಗೂ ಮನ್ಸೂರ್ ಅಲಿಖಾನ್ ಅವರ ಜೊತೆಯಲ್ಲೇ ನಾಮಪತ್ರ ಸಲ್ಲಿಸಲಿದ್ದಾರೆ. ಒಟ್ಟಾರೆಯಾಗಿ ವಿಧಾನಸೌಧದಲ್ಲಿ ರಾಜ್ಯ ರಾಜಕಾರಣದ ಪ್ರಮುಖ ಗಣ್ಯರು ಹಾಗೂ ರಾಹುಲ್ ಗಾಂಧಿ ಅವರ ಉಪಸ್ಥಿತಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ನೆರವೇರಲಿದೆ.

# ಸೌರಶಕ್ತಿ ಕ್ಷೇತ್ರ: ಅಮೇರಿಕಾ ಮೀರಿಸಿ ಜಾಗತಿಕವಾಗಿ 2ನೇ ಸ್ಥಾನಕ್ಕೇರಿದ ಭಾರತ



**ನವದೆಹಲಿ, ಜೂ.4:** ಸೌರಶಕ್ತಿ ಉತ್ಪಾದನೆಯಲ್ಲಿ ಭಾರತ 2025ರಲ್ಲಿಯೇ ಅಮೇರಿಕಾವನ್ನು ಹಿಂದಿಕ್ಕಿ ವಿಶ್ವದಲ್ಲೇ ಎರಡನೇ ಸ್ಥಾನದಲ್ಲಿದೆ ಎಂದು ಕೇಂದ್ರ ಹೊಸ ಮತ್ತು ನವೀಕರಿಸ ಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಮನೆ ಮೇಲ್ಛಾವಣಿ ಘಟಕ, ಕೃಷಿ ಪಂಪ್ ಸೌರೀಕರಣದಿಂದ ಹಿಡಿದು ಬೃಹತ್ ಸೌರ ಪಾರ್ಕ್‌ಗಳ ಸ್ಥಾಪನೆವರೆಗೂ ಭಾರತ ಮುಂಚೂಣಿಯಲ್ಲಿದ್ದು, ವಿಶ್ವದ 2ನೇ ಅತಿ ದೊಡ್ಡ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದಿದ್ದಾರೆ.2025ರ ಸೌರ ಶಕ್ತಿ ಸಾಮರ್ಥ್ಯದಲ್ಲಿ ಭಾರತ ಎರಡನೇ ಸ್ಥಾನದಲ್ಲಿದ್ದ ಅಮೆರಿಕವನ್ನು ಮೀರಿಸಿದ್ದು, ವಾರ್ಷಿಕ ಸೇರ್ಪಡೆಯಲ್ಲಿ ಸೌರ ಶಕ್ತಿ ಮಾರುಕಟ್ಟೆಯನ್ನು ವಿಸ್ತೃತವಾಗಿಸಿದೆ. 2025ರಲ್ಲಿ ಭಾರತ 37 GWಗಿಂತ ಹೆಚ್ಚಿನ ಸೌರಶಕ್ತಿ ಸೇರ್ಪಡೆಯನ್ನು ದಾಖಲಿಸಿದ್ದು, ಇದು ಅಮೆರಿಕದ 34 GWಕ್ಕಿಂತ ಅಧಿಕ ಸಾಮರ್ಥ್ಯವನ್ನು ದಾಖಲಿಸಿದೆ. ಅಂತಾರಾಷ್ಟ್ರೀಯ ನವೀಕರಿಸಬಹುದಾದ ಇಂಧನ ಸಂಸ್ಥೆ ವರದಿ ಪ್ರಕಾರ ಅಮೆರಿಕವನ್ನು ಹಿಂದಿಕ್ಕಿ ಜಾಗತಿಕವಾಗಿ 2 ನೇ ಸ್ಥಾನಕ್ಕೆ ತಲುಪಿದೆ ಎಂದು ತಿಳಿಸಿದ್ದಾರೆ

ಗುಜರಾತ್‌ನ ಪಠಾಣ್ ಜಿಲ್ಲೆಯಲ್ಲಿರುವ ಚರಂಕ ಸೌರ ಉದ್ಯಾನ ಭಾರತದ ಸೌರಶಕ್ತಿ ಬೆಳವಣಿಗೆಗೆ ಜಾಗತಿಕ ಮಾನದಂಡ ಸ್ಥಾಪಿಸುತ್ತಿದೆ. ವೇಗವಾಗಿ ಬೆಳೆಯುತ್ತಿರುವ ದೇಶದ ಸೌರಶಕ್ತಿ ಮಾರುಕಟ್ಟೆಗೆ ಪ್ರಮುಖ ಕೊಡುಗೆ ಕೊಡಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಇದೆಲ್ಲ ಸಾಧ್ಯವಾಗಿದೆ ಎಂದಿದ್ದಾರೆ. ಅಂತರಾಷ್ಟ್ರೀಯ ನವೀಕರಿಸಬಹುದಾದ ಇಂಧನ ಸಂಸ್ಥೆ ಡಿಸೆಂಬರ್ 2025ರಲ್ಲಿ ಬಿಡುಗಡೆ ಮಾಡಿದ ವರದಿಯಂತೆ 2025-26ರ ಆರ್ಥಿಕ ವರ್ಷದಲ್ಲಿ ಭಾರತ ಒಟ್ಟು 55.3 GW ಪಳೆಯುಳಿಕೆಯೇತರ ಸಾಮರ್ಥ್ಯದ ಸೇರ್ಪಡೆಯನ್ನು ಸಾಧಿಸಿದೆ ಎಂದು ಹೇಳಿದ್ದಾರೆ. ಜುಲೈ 2025ರಲ್ಲಿ ಭಾರತ ವಿದ್ಯುತ್ ಉತ್ಪಾದನೆಯಲ್ಲಿ ಇದುವರೆಗಿನ ಅತ್ಯಧಿಕ ನವೀಕರಿಸಬಹುದಾದ ಪಾಲನ್ನು ತಲುಪಿದೆ. ನವೀಕರಿಸಬಹುದಾದ ಇಂಧನ ಮೂಲಗಳು ದೇಶದ ಒಟ್ಟು ವಿದ್ಯುತ್ ಬೇಡಿಕೆಯ 203 GWನಲ್ಲಿ ಶೇ.51.5ರಷ್ಟು ಪೂರೈಸುತ್ತಿದೆ ಎಂದು ಮಾಹಿತಿ ನೀಡಿದ್ದಾರೆ.

# ಮೂರನೇ ವಾರದಲ್ಲಿ ಎರಡನೇ ಹಂತದ ಸಂಪುಟ ವಿಸ್ತರಣೆ: ಹೊಸ ಮುಖಗಳಿಗೆ ಆದ್ಯತೆ

**ಬೆಂಗಳೂರು, ಜೂ. 4:** ಈ ತಿಂಗಳ ಮೂರನೇ ವಾರದಲ್ಲಿ 2ನೇ ಹಂತದ ಸಚಿವ ಸಂಪುಟ ವಿಸ್ತರಣೆಯಾಗುವ ಸಾಧ್ಯತೆ ಇದ್ದು, ಹೊಸ ಮುಖಗಳಿಗೆ ಆದ್ಯತೆ ದೊರೆಯುವ ನಿರೀಕ್ಷೆಯಿದೆ. ಮೊದಲ ಹಂತದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೇರಿ 14 ಮಂದಿ ಸಂಪುಟ ಸೇರಿದ್ದಾರೆ. ಇನ್ನೂ 20 ಸ್ಥಾನಗಳು ಖಾಲಿ ಇವೆ. ಅವುಗಳಿಗೆ 15ರಿಂದ 20 ದಿನಗಳ ಒಳಗಾಗಿ ಸಚಿವರನ್ನು ಮಂತ್ರಿಮಂಡಲಕ್ಕೆ ಸೇರ್ಪಡೆ ಮಾಡಿಕೊಳ್ಳುವ ಸಾಧ್ಯತೆಯಿದೆ.

14 ಮಂದಿ ಬುಧವಾರ ಪ್ರಮಾಣವಚನ ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್ ಅವರನ್ನು ಹೈಕಮಾಂಡ್ ರಾಜ್ಯ ಕಾಂಗ್ರೆಸ್ ಅಧ್ಯಕ್ಷರನ್ನಾಗಿ ನೇಮಿಸಿದೆ. ವಿಧಾನ ಸಭೆಯ ಅಧ್ಯಕ್ಷ ಸ್ಥಾನಕ್ಕೆ ಯು.ಟಿ.ಖಾದರ್ ರಾಜೀನಾಮೆ ನೀಡಿ, ಸಂಪುಟ ಸೇರಿದ್ದಾರೆ. ವಿಧಾನಸಭೆಯಿಂದ ವಿಧಾನ ಪರಿಷತ್‌ನ ನಾಲ್ಕು ಸದಸ್ಯರ ಆಯ್ಕೆಗಾಗಿ ಜೂನ್ 18ರಂದು ನಡೆಯುವ ಚುನಾವಣೆಗಾಗಿ ನಾಲ್ವರ ಅಭ್ಯರ್ಥಿಗಳ ಹೆಸರನ್ನು ಹೈಕಮಾಂಡ್ ನಿನ್ನೆಯೇ ಘೋಷಿಸಿದೆ.

ಈ ಎಲ್ಲಾ ದಿಢೀರ್ ಬೆಳವಣಿಗೆಗಳಂತೆ ಸಂಪುಟದ ಖಾಲಿ ಇರುವ ಹುದ್ದೆಗಳಿಗೂ ಶೀಘ್ರದಲ್ಲೇ ನೇಮಕಾತಿಯಾಗಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ಇನ್ನೆರಡು ತಿಂಗಳ ಒಳಗಾಗಿ ಮಳೆಗಾಲದ ವಿಧಾನಮಂಡಲದ ಅಧಿವೇಶನ ನಡೆಸಬೇಕಿದೆ. ಆ ವೇಳೆಗೆ ಪೂರ್ಣ ಪ್ರಮಾಣದ ಸಂಪುಟ ರಚಿಸುವುದು ಮುಖ್ಯಮಂತ್ರಿಯವರ ಇರಾದೆಯಾಗಿದೆ. ವಿಧಾನಸಭೆ ಮತ್ತು ರಾಜ್ಯಸಭೆಗೆ ಸದಸ್ಯರ ಆಯ್ಕೆಗೆ ಚುನಾವಣೆಯ ಬಳಿಕ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ, ಪರಮೇಶ್ವರ್ ಹಾಗೂ ಬಿ.ಕೆ.ಹರಿಪ್ರಸಾದ್ ಮತ್ತೊಮ್ಮೆ ದೆಹಲಿಗೆ ಭೇಟಿ ನೀಡಲಿದ್ದು, ಸಂಪುಟ ವಿಸ್ತರಣೆ, ನಿಗಮ ಮಂಡಳಿಗಳ ಕುರಿತಂತೆ ಹೈಕಮಾಂಡ್ ನಾಯಕರ ಜೊತೆ ಚರ್ಚೆ ನಡೆಸಲಿದ್ದಾರೆ. ಎರಡನೇ ಹಂತದ ಸಂಪುಟ ರಚನೆಯ ವೇಳೆ ಯುವ ಉತ್ಸಾಹಿಗಳಿಗೆ ಮಣೆ ಹಾಕಲಾಗುತ್ತದೆ. ಡಿ.ಕೆ.ಶಿವಕುಮಾರ್ ಅವರು ತಮ್ಮದೇ ಆದ ಸಂಪುಟದ ತಂಡವನ್ನು ಕಟ್ಟಿಕೊಳ್ಳಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಸಾರ್ವಜನಿಕ ಕುಂದುಕೊರತೆಗೆ ಪ್ರತ್ಯೇಕ ಸಚಿವಾಲಯ, ಗ್ಯಾರಂಟಿ ಯೋಜನೆ ಸೋರಿಕೆ ತಡೆಗೆ ಕ್ರಮ

**ಬೆಂಗಳೂರು, ಜೂ.4:** ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಣೆ ಮಾಡುವುದಿಲ್ಲ. ಆದರೆ ಸೋರಿಕೆ ತಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಉನ್ನತ ಅಧಿಕಾರಿಗಳ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಫಲಾನುಭವಿಗಳ ಮಾಹಿತಿ ಸಂಗ್ರಹಿಸುತ್ತಿರುವುದಾಗಿ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಯಾವಾಗ ಎಂದು ಕೇಳಿದಾಗ, ನಾವು ಪರಿಷ್ಕರಣೆ ಮಾಡುತ್ತಿಲ್ಲ. ಫಲಾನುಭವಿಗಳ ಮೊಬೈಲ್ ಸಂಖ್ಯೆ ಹಾಗೂ ವಿವರಗಳಲ್ಲಿ ವ್ಯತ್ಯಾಸವಿದೆ. ಗೃಹಜ್ಯೋತಿ ಯೋಜನೆಯಲ್ಲಿ ಮನೆಗೆ 200 ಯೂನಿಟ್ ವಿದ್ಯುತ್ ಉಚಿತ ಎಂದು ಪಡೆದು, ಅದನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಲಾಗುತ್ತಿದೆ. ಈ ಯೋಜನೆಯಲ್ಲಿ 1.64 ಕೋಟಿ



ಫಲಾನುಭವಿಗಳಿದ್ದು, ಯಾರು ಅರ್ಹರಿದ್ದಾರೋ ಅವರು ಉಚಿತ ವಿದ್ಯುತ್ ಪಡೆದರೆ ನಮ್ಮ ಅಭ್ಯಂತರವಿಲ್ಲ ಎಂದರು.

ಯಾರೆಲ್ಲಾ ಫಲಾನುಭವಿಗಳಿದ್ದಾರೆ ಎಂಬ ಮಾಹಿತಿ ನಮ್ಮ ಬಳಿ ಇರಬೇಕಲ್ಲವೇ? ಒಬ್ಬರ ಹೆಸರಲ್ಲೇ ಐದಾರು ಮೀಟರ್ ಗಳಿದ್ದು, ಇವರಲ್ಲಿ ನಮ್ಮ ರಾಜ್ಯದವರು ಇದ್ದಾರೋ, ಬೇರೆ ರಾಜ್ಯದವರು ಇದ್ದಾರೋ ಎಂಬ ಮಾಹಿತಿ ಸರ್ಕಾರಕ್ಕೆ ಇರಬೇಕಲ್ಲವೇ

## ಅಧಿಕಾರಿಗಳ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

## ಅನಿವಾಸಿ ಭಾರತೀಯರಿಗೂ ಪ್ರತ್ಯೇಕ ಸಚಿವಾಲಯ

ಆ ಮಾಹಿತಿ ಪಡೆಯುತ್ತಿದ್ದೇವೆ. ಮೃತರ ಹೆಸರಿನಲ್ಲಿ ಗೃಹಲಕ್ಷ್ಮಿ ಹಣ ಪಡೆಯಲಾಗಿದೆ. ಇದರಿಂದ 120 ಕೋಟಿ ವ್ಯತ್ಯಾಸವಾಗಿದೆ. ಇದಕ್ಕೆ ನಿಖರ ಮಾಹಿತಿ ಇರಬೇಕಲ್ಲವೇ ಎಂದು ತಿಳಿಸಿದರು.

ನಮ್ಮ ಸರ್ಕಾರದಲ್ಲಿ ಸಾರ್ವಜನಿಕರ ಕುಂದುಕೊರತೆ ಆಲಿಸಿ, ಸ್ಪಂದಿಸಲು ಹಾಗೂ ಅನಿವಾಸಿ ಭಾರತೀಯರಿಗಾಗಿ ಎರಡು ಪ್ರತ್ಯೇಕ ಸಚಿವಾಲಯಗಳನ್ನು ಆರಂಭಿಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ಪ್ರಕಟಿಸಿದರು.

ನಮ್ಮ ಸರ್ಕಾರದಲ್ಲಿ ಅನಿವಾಸಿ ಭಾರತೀಯರ (ಎನ್‌ಆರ್ ಐ) ಸಚಿವಾಲಯ ತೆರೆಯಲು ಸರ್ಕಾರ ಮುಂದಾಗಿದೆ. ನಮ್ಮ ರಾಜ್ಯದಲ್ಲಿ ಎನ್‌ಆರ್ ಐಗಳು ಬಂಡವಾಳ ಹೂಡಿಕೆಗೆ ಆಸಕ್ತಿ ಹೊಂದಿದ್ದರೆ ಅವರಿಗೆ ಸೂಕ್ತ ಸೌಲಭ್ಯ ಕಲ್ಪಿಸಲು ಈ ಸಚಿವಾಲಯ ಸಹಾಯವಾಗುತ್ತದೆ. ಇದಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸೂಚಿಸಿರುವೆ. ಸಾರ್ವಜನಿಕರ ಕುಂದುಕೊರತೆಯ ಸಚಿವಾಲಯ ಆರಂಭಿಸಿ, ಜನರ ಅರ್ಜಿ, ವಿಚಾರಧಾರೆ, ಸಮಸ್ಯೆ ಆಲಿಸಲು ಪ್ರತ್ಯೇಕ ಸಚಿವರ ನೇಮಕ ಮಾಡಲಾಗುವುದು. ಪ್ರತಿನಿತ್ಯ ವಿವಿಧ ತಂಡಗಳು ಪ್ರತಿಭಟನೆ ನಡೆಸುತ್ತಿದ್ದು, ಅವರ ವಿಚಾರ ಆಲಿಸಿ, ಸ್ಪಂದಿಸಲು ಸರ್ಕಾರ ಮುಂದಾಗಿದೆ ಎಂದು ವಿವರಿಸಿದರು.

## ಮೇಕೆದಾಟು ವಿಚಾರದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ಗೌರವ: ಸಿಎಂ ಡಿಕೆಶಿ



ತಮಿಳುನಾಡಿನಲ್ಲಿ ಕಾಂಗ್ರೆಸ್ ಮೈತ್ರಿಯಿದೆ ಈಗ ಮೇಕೆದಾಟು ವಿಚಾರವಾಗಿ ಕರ್ನಾಟಕದ ನಿಲುವು ಏನು ಎಂದು ಕೇಳಿದಾಗ, "ಅವರು ಕಳೆದ ಮೂವತ್ತು, ನಲವತ್ತು ವರ್ಷಗಳಿಂದ ವಿರೋಧಿಸುತ್ತಿದ್ದಾರೆ. ಈಗಾಗಲೇ ಈ ವಿಷಯವಾಗಿ ನ್ಯಾಯಾಲಯ ತನ್ನ ತೀರ್ಮಾನ ಹೇಳಿದೆ. ಕೇಂದ್ರ ಸರ್ಕಾರಕ್ಕೆ ನಾವು ಈಗಾಗಲೇ ನಮ್ಮ ಡಿಪಿಆರ್ ಸಲ್ಲಿಕೆ ಮಾಡಿದ್ದೇವೆ. ಅವರು ಅದನ್ನು ಪರಿಶೀಲಿಸುತ್ತಾರೆ. ಈ ವಿಚಾರ ಕೇಂದ್ರ ಸರ್ಕಾರದ ಮುಂದಿದೆ. ತಮಿಳುನಾಡಿನವರು ಪಕ್ಷಬೇಧ ಲೆಕ್ಕಿಸದೆ ರಾಜಕೀಯ ಮಾಡುತ್ತಾರೆ. ಈಗಾಗಲೇ ಅವರು ಸುಪ್ರೀಂ ಕೋರ್ಟ್‌ಗೆ ಹೋಗಿದ್ದಾರೆ. ಸುಪ್ರೀಂ ಕೋರ್ಟ್ ತನ್ನ ತೀರ್ಪನ್ನು ಪರಿಶೀಲನೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ನ್ಯಾಯಾಲಯ ಈಗಾಗಲೇ ನಿರ್ಧಾರ ತೆಗೆದುಕೊಂಡಿದೆ ಎಂದು ನಾನು ಭಾವಿಸುತ್ತೇನೆ. ನಾವು ಅವರ ಅಭಿಪ್ರಾಯವನ್ನು ಗೌರವಿಸುತ್ತೇವೆ ಮತ್ತು ನಾವು ನಮ್ಮ ಕೆಲಸವನ್ನು ಮಾಡುತ್ತೇವೆ. ಜನರು ನಿರ್ಣಯಿಸಲಿ" ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

# ಎನ್‌ಎಚ್‌ಪಿಸಿ, ಬಿಎಚ್‌ಇಎಲ್ ಕೋಲ್ ಇಂಡಿಯಾ ಷೇರು ಮಾರಾಟಕ್ಕೆ ಮುಂದಾದ ಮೋದಿ ಸರ್ಕಾರ

**ನವದೆಹಲಿ, ಜೂ. 4:** ದೇಶದ ಆರ್ಥಿಕತೆಯು ತೀವ್ರ ಬಿಕ್ಕಟ್ಟನ್ನು ಎದುರಿಸುತ್ತಿರುವ ಸಂದರ್ಭದಲ್ಲಿ, ಕೇಂದ್ರದ ನರೇಂದ್ರ ಮೋದಿ ಸರ್ಕಾರವು ಬೊಕ್ಕಸ ತುಂಬಿಸಿಕೊಳ್ಳಲು ಸಾರ್ವಜನಿಕ ವಲಯದ ಪ್ರಮುಖ ಲಾಭದಾಯಕ ಉದ್ದಿಮೆಗಳ ಷೇರುಗಳನ್ನು ಮಾರಾಟ ಮಾಡುವ ವಿವಾದಾತ್ಮಕ ಹೆಜ್ಜೆ ಇಟ್ಟಿದೆ. ರಾಷ್ಟ್ರದ ಹೆಮ್ಮೆಯ ಸಂಸ್ಥೆಗಳಾದ ಎನ್‌ಎಚ್‌ಪಿಸಿ, ಬಿಎಚ್‌ಇಎಲ್ ಹಾಗೂ ಕೋಲ್ ಇಂಡಿಯಾ ಕಂಪನಿಗಳ ಒಟ್ಟು ಅಂದಾಜು 12,000 ಕೋಟಿ ರೂ.ಗಳಷ್ಟು ಮೌಲ್ಯದ ಷೇರುಗಳನ್ನು ವಿಕ್ರಯಿಸಲು ಸರ್ಕಾರ ಮುಂದಾಗಿದ್ದು, ಇದು ದೇಶದ ದೀರ್ಘಕಾಲೀನ ಆರ್ಥಿಕ ಭದ್ರತೆಯ ದೃಷ್ಟಿಯಿಂದ ತೀವ್ರ ಕಳವಳ ಹುಟ್ಟುಹಾಕಿದೆ.




ಕಳೆದ ಕೆಲವು ವರ್ಷಗಳಿಂದ ಆರ್ಥಿಕ ನಿರ್ವಹಣೆಯಲ್ಲಿ ಎಡವುತ್ತಿರುವ ಕೇಂದ್ರ ಸರ್ಕಾರವು, ವಿತ್ತೀಯ ಕೊರತೆಯನ್ನು ಸರಿದೂಗಿಸಲು ದೇಶದ ಆಸ್ತಿಯಾಗಿರುವ ಸಾರ್ವಜನಿಕ ಉದ್ದಿಮೆಗಳನ್ನು ಬಲಿಪಶು ಮಾಡುತ್ತಿದೆ ಎಂಬ ಟೀಕೆಗಳು ಆರ್ಥಿಕ ವಲಯದಲ್ಲಿ ವ್ಯಾಪಕವಾಗಿ ಕೇಳಿಬರುತ್ತಿವೆ. ಪ್ರತಿ ವರ್ಷವೂ ಬಂಡವಾಳ ಹಿಂತೆಗೆತದ ಗುರಿ ತಲುಪಲು ಹೆಣಗಾಡುತ್ತಿರುವ ಮೋದಿ ಸರ್ಕಾರವು, ಇದೀಗ ದೇಶಕ್ಕೆ ಅಪಾರ ಆದಾಯ ತರುವ ಹಾಗೂ ಲಕ್ಷಾಂತರ ಯುವಜನರಿಗೆ ಉದ್ಯೋಗ ಭದ್ರತೆ ಒದಗಿಸುವ ಕೋಲ್ ಇಂಡಿಯಾ ಮತ್ತು ಬಿಎಚ್‌ಇಎಲ್‌ನಂತಹ ಮಹತ್ವದ ಸಂಸ್ಥೆಗಳ ಷೇರುಗಳನ್ನು ಖಾಸಗಿಯವರ ಪಾಲು ಮಾಡುತ್ತಿದೆ.

ಇದು ಸರ್ಕಾರದ ಹತಾಶ ಆರ್ಥಿಕ ಸ್ಥಿತಿ ಹಾಗೂ ದಿಕ್ಸೂಚಿಯಿಲ್ಲದ ಆರ್ಥಿಕ ನೀತಿಗಳನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ. ಕೇವಲ ತಾತ್ಕಾಲಿಕ ಆರ್ಥಿಕ ಸಂಕಷ್ಟದಿಂದ ಪಾರಾಗಲು 12 ಸಾವಿರ ಕೋಟಿ ರೂ.ಗಳ ಷೇರುಗಳನ್ನು ಮಾರುಕಟ್ಟೆಯಲ್ಲಿ ವಿಲೇವಾರಿ ಮಾಡುವುದು, ಮನೆಯ ಚಿನ್ನವನ್ನು ಮಾರಿ ಊಟ ಮಾಡಿದಂತೆ ಎಂದು ಆರ್ಥಿಕ ತಜ್ಞರು ಎಚ್ಚರಿಸಿದ್ದಾರೆ.ಈಗಾಗಲೇ ದೇಶದಲ್ಲಿ ಗಗನಕ್ಕೇರಿರುವ ಬೆಲೆ ಏರಿಕೆ, ಉಲ್ಬಣಿಸಿರುವ ನಿರುದ್ಯೋಗ ಸಮಸ್ಯೆ ಮತ್ತು ಏರುತ್ತಿರುವ ಹಣದುಬ್ಬರದಿಂದ ಜನಸಾಮಾನ್ಯರು ಹೈರಾಣಾಗಿದ್ದಾರೆ. ಇಂತಹ ಹೊತ್ತಿನಲ್ಲಿ, ನಷ್ಟದಲ್ಲಿರುವ ಸಂಸ್ಥೆಗಳನ್ನು ಸರಿಪಡಿಸುವ ಬದಲು, ಸತತವಾಗಿ ಲಾಭದಲ್ಲಿರುವ ಸರ್ಕಾರಿ ಸ್ವಾಮ್ಯದ ನವರತ್ನಗಳನ್ನು ಕೇವಲ ಹಣ ಕ್ರೋಢೀಕರಣದ ಏಕೈಕ ಉದ್ದೇಶದಿಂದ ಖಾಸಗಿ ವಲಯಕ್ಕೆ ಬಿಟ್ಟುಕೊಡುತ್ತಿರುವುದು ದುರದೃಷ್ಟಕರ. ಸರ್ಕಾರದ ಈ ತರಾತುರಿಯ ನಿರ್ಧಾರದಿಂದಾಗಿ ಈ ಪಿಎಸ್ಯುಗಳ ಲಕ್ಷಾಂತರ ನೌಕರರಲ್ಲಿ ಉದ್ಯೋಗದ ಅಭದ್ರತೆ ಕಾಡತೊಡಗಿದೆ. ಭವಿಷ್ಯದಲ್ಲಿ ಈ ಬೃಹತ್ ಸಂಸ್ಥೆಗಳು ಸಂಪೂರ್ಣವಾಗಿ ಖಾಸಗೀಕರಣಗೊಂಡು, ಬಂಡವಾಳಶಾಹಿಗಳ ಏಕಸ್ವಾಮ್ಯಕ್ಕೆ ಸಿಲುಕುವ ಆತಂಕ ಎದುರಾಗಿದೆ.

ಸೂಕ್ತ ಆರ್ಥಿಕ ಸುಧಾರಣೆಗಳನ್ನು ತರುವಲ್ಲಿ ವಿಫಲವಾಗಿರುವ ಮೋದಿ ಸರ್ಕಾರ, ಆರ್ಥಿಕ ಬಿಕ್ಕಟ್ಟಿನ ನೆಪವೊಡ್ಡಿ ಭವಿಷ್ಯದ ತಲೆಮಾರುಗಳ ಸಂಪತ್ತಾಗಿರುವ ರಾಷ್ಟ್ರೀಯ ಉದ್ದಿಮೆಗಳನ್ನು ಮಾರಾಟ ಮಾಡುತ್ತಿರುವ ನಡೆ ತೀವ್ರ ಖಂಡನೆಗೆ ಗುರಿಯಾಗಿದೆ. ಈ ಕ್ರಮವು ಕೇವಲ ಕೆಲವೇ ಕೆಲವು ಕಾರ್ಪೊರೇಟ್ ಕುಳಗಳ ಹಿತಾಸಕ್ತಿ ಕಾಯುವಂತಿದೆ ಎಂಬ ಆರೋಪಗಳು ದಟ್ಟವಾಗಿವೆ.

# ನೆಹರು ದಾಖಲೆ ಮುರಿದು ಹೊಸ ಇತಿಹಾಸ ಸೃಷ್ಟಿಸಿದ ಪ್ರಧಾನಿ ಮೋದಿ

**ನವದೆಹಲಿ, ಜೂ.4:** ಜೂನ್ 10ರಂದು ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಅತಿ ಹೆಚ್ಚು ಕಾಲ ನಿರಂತರ ಅಧಿಕಾರ ನಡೆಸಿದ ಪ್ರಧಾನಿ ಎಂಬ ಹೊಸ ದಾಖಲೆ ಬರೆಯಲಿದ್ದಾರೆ. ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರ 4,398 ದಿನಗಳ ದಾಖಲೆಯನ್ನು ಮುರಿದು 4,399 ದಿನಗಳ ನಿರಂತರ ಸೇವೆಯ ಮೈಲುಗಲ್ಲು ತಲುಪಲಿದ್ದಾರೆ.

ಮೇ 26, 2014ರಂದು ಮೊದಲ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮೋದಿ ಅವರು, ಜೂನ್ 10, 2026ರಂದು 4,399 ದಿನಗಳ ನಿರಂತರ ಅಧಿಕಾರಾವಧಿಯನ್ನು ಪೂರೈಸಲಿದ್ದಾರೆ. ಇದರೊಂದಿಗೆ ಅವರು ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಅತ್ಯಂತ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಿಯಾಗಲಿದ್ದಾರೆ.

ನೆಹರು ಅವರು ಮೇ 13, 1952ರಂದು ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿ, ಮೇ 27, 1964ರವರೆಗೆ ಒಟ್ಟು 4,398 ದಿನಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ್ದರು. ಈ ದಾಖಲೆಯು ಕಳೆದ 64 ವರ್ಷಗಳಿಂದಲೂ ಅಚ್ಚಳಿಯದೆ ಉಳಿದಿತ್ತು.



ಇದಕ್ಕೂ ಮುನ್ನ ಮೋದಿ ಅವರು ಜುಲೈ 25, 2025ರಂದು ಮತ್ತೊಂದು ಮೈಲುಗಲ್ಲು ದಾಟಿದ್ದರು. ಆ ದಿನ ಅವರು 4,077 ದಿನಗಳೊಂದಿಗೆ ಮೂರನೇ ಅತ್ಯಂತ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಿ ಇಂದಿರಾಗಾಂಧಿ ಅವರ ದಾಖಲೆಯನ್ನು ಹಿಂದಿಕ್ಕಿದ್ದರು. ಇಂದಿರಾ ಗಾಂಧಿ ಅವರು ಜನವರಿ 24, 1966ರಿಂದ ಮಾರ್ಚ್ 24, 1977ರವರೆಗೆ ಸುಮಾರು 11 ವರ್ಷ 2 ತಿಂಗಳ ಕಾಲ (4,077 ದಿನ) ನಿರಂತರ ಅಧಿಕಾರ ನಡೆಸಿದ್ದರು.



ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ. ಕಿಶನ್‌ರೆಡ್ಡಿ ಮತ್ತು ಬ್ರಿಟನ್‌ನ ವಿದೇಶಾಂಗ ಕಾರ್ಯದರ್ಶಿ ಆರ್ ಟಿ ಹಾನ್ ಯೆವೆಟ್ ಕೂಪರ್ ಸಂಸದರು ಗುರುವಾರ ನವದೆಹಲಿಯಲ್ಲಿ ಭಾರತ–ಯುಕೆ ಕ್ರಿಟಿಕಲ್ ಮಿನರಲ್ಸ್ ಜಾಗತಿಕ ಸರಪಳಿ ಪೂರೈಕೆ ಮೇಲ್ವಿಚಾರಣೆಗೆ ಚಾಲನೆ ನೀಡಿದರು.

# ಭಯೋತ್ಪಾದಕ ಸಂಚು ವಿಫಲಗೊಳಿಸಿದ ಪಂಜಾಬ್ ಪೊಲೀಸ್

**ಮೊಹಾಲಿ,ಜೂ.4:** ಪಂಜಾಬ್ ಪೊಲೀಸ್ ಮತ್ತು ರಾಜ್ಯ ವಿಶೇಷ ಕಾರ್ಯಾಚರಣೆ ವಿಭಾಗ ತಂಡಗಳು ಮಹತ್ವದ ಕಾರ್ಯಾಚರಣೆ ನಡೆಸಿ, ವಿದೇಶಿ ಮೂಲದ ಭಯೋತ್ಪಾದಕ ಗುಂಪಿನ ಇಬ್ಬರು ಸದಸ್ಯರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಕಾರ್ಯಾಚರಣೆ ವೇಳೆ ಸುಧಾರಿತ ಸ್ಫೋಟಕ ಸಾಧನವನ್ನು ಪತ್ತೆ ಹಚ್ಚಲಾಗಿದೆ. ಇದರೊಂದಿಗೆ ಪ್ರಮುಖ ಸಾರ್ವಜನಿಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ರೂಪಿಸಲಾಗಿದ್ದ ಬಾಂಬ್ ಸ್ಫೋಟ ಸಂಚು ವಿಫಲಗೊಂಡಿದೆ.

ಪಂಜಾಬ್ ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, ಗಡಿಯಾಚೆಗಿನ ಭಯೋತ್ಪಾದಕ ಜಾಲಗಳ ವಿರುದ್ಧ ಪ್ರಮುಖ ಯಶಸ್ಸು ಸಿಕ್ಕಿದೆ. ಮೊಹಾಲಿಯಲ್ಲಿ ವಿದೇಶಿ ಮೂಲದ ಭಯೋತ್ಪಾದಕ ಕಾರ್ಯಕರ್ತನ ಇಬ್ಬರು ಸಹಚರರನ್ನು ಬಂಧಿಸಲಾಗಿದೆ. ಕಾರ್ಯಾಚರಣೆಯಲ್ಲಿ ಐಇಡಿ ಪತ್ತೆಯಾಗಿದೆ ಎಂದು ತಿಳಿಸಿದ್ದಾರೆ.

ಬಂಧಿತ ಆರೋಪಿ ಸಾಹಿಬ್ಜಾದಾ ಅಜಿತ್ ಸಿಂಗ್ ನಗರದ ಪ್ರಮುಖ ಸಾರ್ವಜನಿಕ ಸ್ಥಳಗಳನ್ನು ಗುರಿಯಾಗಿಸಿಕೊಂಡಿದ್ದ ದುಷ್ಕೃತ್ಯದ ಸಂಚು ಈ ಕಾರ್ಯಾಚರಣೆಯಿಂದ ವಿಫಲಗೊಂಡಿದೆ. ತ್ವರಿತ ಕ್ರಮದಿಂದ ಸಾರ್ವಜನಿಕ ಸುರಕ್ಷತೆಗೆ ಎದುರಾಗಿದ್ದ ದೊಡ್ಡ ಬೆದರಿಕೆಯನ್ನು ತಪ್ಪಿಸಲಾಗಿದೆ ಎಂದು ಡಿಜಿಪಿ ಗೌರವ್ ಯಾದವ್ ಹೇಳಿದ್ದಾರೆ.

ಬಂಧಿತರ ಸಂಪರ್ಕಗಳು, ಪಿತೂರಿಯಲ್ಲಿ ಒಳಗೊಂಡಿರುವ ಎಲ್ಲಾ ವ್ಯಕ್ತಿಗಳು ಮತ್ತು ಭಯೋತ್ಪಾದಕ ಜಾಲದ ಸಂಪೂರ್ಣ ವಿವರಗಳನ್ನು ಬಯಲಿಗೆಳೆಯಲು ಹೆಚ್ಚಿನ ತನಿಖೆ ನಡೆಯುತ್ತಿದೆ. ಪಂಜಾಬ್ ಪೊಲೀಸರು ರಾಜ್ಯಾದ್ಯಂತ ಭಯೋತ್ಪಾದಕ ಜಾಲಗಳನ್ನು ನಾಶಪಡಿಸುವುದು, ಸಂಘಟಿತ ಅಪರಾಧಗಳನ್ನು ತೊಡೆದುಹಾಕುವುದು ಮತ್ತು ಜನರ ಶಾಂತಿ–ಸುರಕ್ಷತೆಗೆ ಆದ್ಯತೆ ನೀಡುವುದಾಗಿ ಡಿಜಿಪಿ ಭರವಸೆ ನೀಡಿದ್ದಾರೆ.

ಇತ್ತೀಚೆಗೆ, ಉತ್ತರ ಪ್ರದೇಶದ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್) ಪೊಲೀಸರು ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್ಐ ಮತ್ತು ಪಾಕಿಸ್ತಾನದ ಗ್ಯಾಂಗ್ಸ್ಟರ್ ಶಹಜಾದ್ ಭಟ್ಟಿ ಜೊತೆ ಸಂಪರ್ಕ ಹೊಂದಿರುವ ಭಯೋತ್ಪಾದಕ ಜಾಲದ ಪರ ಕೆಲಸ ಮಾಡುತ್ತಿದ್ದ ಆರೋಪದ ಮೇಲೆ ಅಜಮ್ಗಢ ಜಿಲ್ಲೆಯ ವ್ಯಕ್ತಿಯೊಬ್ಬನನ್ನು ಬಂಧಿಸಿದ್ದರು.

# ಕ್ಷೇತ್ರ ಮರುವಿಂಗಡಣೆ ಮಸೂದೆ 2.0: ಮುಂಗಾರು ಅಧಿವೇಶನದಲ್ಲಿ ಮತ್ತೆ ಮಂಡನೆ ಸಾಧ್ಯತೆ

**ನವದೆಹಲಿ, ಜೂ.4:** ಲೋಕಸಭೆಯಲ್ಲಿ ಈ ಹಿಂದೆ ತಿರಸ್ಕೃತಗೊಂಡಿದ್ದ ಕ್ಷೇತ್ರ ಮರುವಿಂಗಡಣೆ ಬಿಲ್ ಅನ್ನು ಮುಂಗಾರು ಅಧಿವೇಶನದಲ್ಲಿ ಮತ್ತೆ ಪ್ರಸ್ತುತಪಡಿಸಲು ಕೇಂದ್ರ ಸರ್ಕಾರ ಸಿದ್ಧತೆ ಮಾಡಿಕೊಳ್ಳುತ್ತಿದ್ದು ಇದಕ್ಕಾಗಿ ಪ್ರಮುಖ ಪ್ರಾದೇಶಿಕ ಪಕ್ಷಗಳಾದ ಡಿಎಂಕೆ ಮತ್ತು ಟಿಎಂಸಿ ನಾಯಕರೊಂದಿಗೆ ಚರ್ಚೆಗಳನ್ನು ಆರಂಭಿಸಿದೆ.

ಮೋದಿ ಸರ್ಕಾರವು ಡಿಎಂಕೆ ಮತ್ತು ಟಿಎಂಸಿ ಸಂಸದರೊಂದಿಗೆ ಸಂಪರ್ಕ ಸಾಧಿಸಿದೆ. ಟಿಎಂಸಿ ಸಂಸದರು ಸರ್ಕಾರದ ಪ್ರಸ್ತಾಪಕ್ಕೆ ಸಕಾರಾತ್ಮಕ ಪ್ರತಿಕ್ರಿಯೆ ನೀಡಿದ್ದು, ಕ್ಷೇತ್ರ ಮರುವಿಂಗಡಣೆ ವಿಷಯದಲ್ಲಿ ಚರ್ಚೆಗೆ ತಯಾರಿದ್ದಾರೆ ಎಂದು ಮೂಲಗಳು ಹೇಳಿವೆ. ಡೆಲಿಮಿಟೇಶನ್ ವಿಚಾರದಲ್ಲಿ ತೀವ್ರ ಆತಂಕ ವ್ಯಕ್ತಪಡಿಸುತ್ತಿದ್ದ ಡಿಎಂಕೆ ಕೂಡ ಈ ಬಾರಿ ವಿರೋಧಿ ನಿಲುವು ತೋರಿಸದೆ, ಸರ್ಕಾರದ ಪರಿಷ್ಕೃತ ಮುದ್ರಣಕ್ಕೆ ಕಾಯುತ್ತಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ಏಪ್ರಿಲ್ 16 ರಿಂದ 18 ರವರೆಗೆ ನಡೆದ ವಿಶೇಷ ಅಧಿವೇಶನದಲ್ಲಿ ಮಹಿಳಾ ಮೀಸಲಾತಿ ಕಾನೂನು ನಾರಿ ಶಕ್ತಿ ವಂದನ ಅಧಿನಿಯಮ ಅನ್ನು 2029 ರೊಳಗೆ ಜಾರಿಗೆ ತರುವ ಗುರಿಯೊಂದಿಗೆ ಬಿಲ್ ಮಂಡಿಸಲಾಗಿತ್ತು. ಇದರಲ್ಲಿ ಡೀಲಿಮಿಟೇಶನ್ ಅಂದರೆ ಜನಸಂಖ್ಯೆ ಬದಲಾವಣೆಗೆ ಅನುಗುಣವಾಗಿ ಮತಕ್ಷೇತ್ರಗಳ ಮರುರಚನೆಯನ್ನು ಹೊಸ ಜನಗಣತಿ ಇಲ್ಲದೆಯೇ ಕೈಗೊಳ್ಳುವ ಪ್ರಸ್ತಾಪವೂ ಇತ್ತು.

ಆದರೆ ಬಿಲ್ 2/3 ಬಹುಮತ ಪಡೆಯಲು ವಿಫಲವಾಗಿತ್ತು. 528 ಸದಸ್ಯರು ಭಾಗವಹಿಸಿದ್ದ ಈ ಮತದಾನದಲ್ಲಿ 298 ಮಂದಿ ಬೆಂಬಲ ವ್ಯಕ್ತಪಡಿಸಿದ್ದರೆ, 230 ಮಂದಿ ವಿರೋಧಿಸಿದ್ದರು. ಎನ್‌ಡಿಎಗೆ ಅಗತ್ಯವಿದ್ದ 352 ಮತಗಳ ಕೊರತೆಯಿಂದ ಬಿಲ್ ಸೋಲು ಕಂಡಿತು. ಮಸೂದೆ ವಿಫಲವಾದ ಬಳಿಕ ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಸ್ಪೀಕರ್ ಓಂ ಬಿರ್ಲಾ ಅವರಿಗೆ ಇತರ ಎರಡು ಮಸೂದೆಗಳಾದ ಕ್ಷೇತ್ರ ಮರುವಿಂಗಡಣೆ 2026 ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾಯ್ದೆ ತಿದ್ದುಪಡಿ ಮಸೂದೆ ಯನ್ನು ಮುಂದುವರಿಸದಂತೆ ಮನವಿ ಮಾಡಿದ್ದರು.

# ಭಾರತಕ್ಕೆ ಬಂತು ಮತ್ತೊಂದು ಸುದರ್ಶನ ಚಕ್ರ

**ನವದೆಹಲಿ, ಜೂ.4:** ಆಪರೇಷನ್ ಸಿಂಧೂರದ ವೇಳೆ ಪಾಕಿಸ್ತಾನದ ಕ್ಷಿಪಣಿ, ಡ್ರೋನ್‌ಗಳನ್ನು ಹೊಡೆದುರುಳಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದ, ರಷ್ಯಾ ನಿರ್ಮಿತ ಅತ್ಯಂತ ಶಕ್ತಿಶಾಲಿ ಎಸ್–400 ವಾಯು ರಕ್ಷಣಾ ಕ್ಷಿಪಣಿ ವ್ಯವಸ್ಥೆಯ 4ನೇ ಘಟಕ ಜೂನ್ 3ರಂದು ಯಶಸ್ವಿಯಾಗಿ ಭಾರತಕ್ಕೆ ತಲುಪಿದೆ. ಇದರೊಂದಿಗೆ ಭಾರತದ ವಾಯು ರಕ್ಷಣಾ ಪಡೆ ಈಗ ಒಟ್ಟು ನಾಲ್ಕು ಎಸ್–400 ಅತ್ಯಾಧುನಿಕ ಕ್ಷಿಪಣಿ ವ್ಯವಸ್ಥೆಗಳನ್ನು ಹೊಂದಿದಂತಾಗಿದೆ.

ಕಳೆದ ತಿಂಗಳಷ್ಟೇ ಭಾರತೀಯ ವಾಯುಪಡೆಯ ಉನ್ನತ ಅಧಿಕಾರಿಗಳ ತಂಡ ರಷ್ಯಾಕ್ಕೆ ಭೇಟಿ ನೀಡಿ ಈ ವ್ಯವಸ್ಥೆಯ ತಾಂತ್ರಿಕ ತಪಾಸಣೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿತ್ತು. ರಕ್ಷಣಾ ಇಲಾಖೆಯ ಮೂಲಗಳ ಪ್ರಕಾರ, ಈ 4ನೇ ಘಟಕದ ಉಳಿದ ಉಪಕರಣಗಳು ಮುಂದಿನ ಕೆಲವು ದಿನಗಳಲ್ಲಿ ವಿವಿಧ ಬಂದರುಗಳ ಮೂಲಕ ಭಾರತವನ್ನು ತಲುಪಲಿವೆ. ಜೂನ್ ತಿಂಗಳ ಅಂತ್ಯದ ವೇಳೆಗೆ ಇದನ್ನು ಸಂಪೂರ್ಣವಾಗಿ ಕಾರ್ಯರೂಪಕ್ಕೆ ತರಲು ಸೇನೆ ಸಜ್ಜಾಗಿದೆ.



ಈ ನೂತನ ಎಸ್–400 ಕ್ಷಿಪಣಿ ವ್ಯವಸ್ಥೆಯನ್ನು ಭಾರತದ ಪಶ್ಚಿಮ ಗಡಿಯಲ್ಲಿ, ಅಂದರೆ ಪಾಕಿಸ್ತಾನದ ಗಡಿಗೆ ತೀರಾ ಹತ್ತಿರದಲ್ಲಿ ನಿಯೋಜಿಸುವ ಸಾಧ್ಯತೆಯಿದೆ. ಇದು ಶತ್ರು ರಾಷ್ಟ್ರಗಳ ಕಡೆಯಿಂದ ನುಗ್ಗಿಬರುವ ಯಾವುದೇ ರೀತಿಯ ಡ್ರೋನ್, ಯುದ್ಧ ವಿಮಾನ ಅಥವಾ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಗಡಿಯ ಆಚೆಗೇ ಪತ್ತೆಹಚ್ಚಿ, ಕ್ಷಣಮಾತ್ರದಲ್ಲಿ ಹೊಡೆದುರುಳಿಸುವ ಸಾಮರ್ಥ್ಯ ಹೊಂದಿದೆ.

**ಏನಿದು ಎಸ್–400**

ವಿಶ್ವದ ಅತ್ಯಂತ ಸುಧಾರಿತ ವಾಯು ರಕ್ಷಣಾ ವ್ಯವಸ್ಥೆಗಳಲ್ಲಿ ಒಂದಾದ ಎಸ್–400 ಅನ್ನು ಭಾರತೀಯ ಸೇನೆಯಲ್ಲಿ ಪ್ರೀತಿಯಿಂದ ಸುದರ್ಶನ ಚಕ್ರ ಎಂದು ಕರೆಯಲಾಗುತ್ತದೆ. ಇದು ಬರೋಬ್ಬರಿ 400 ಕಿಲೋಮೀಟರ್ ವ್ಯಾಪ್ತಿಯಲ್ಲಿ ಏಕಕಾಲಕ್ಕೆ ನೂರಾರು ಶತ್ರು ಯುದ್ಧ ವಿಮಾನಗಳು, ಡ್ರೋನ್ಗಳು ಮತ್ತು ಕ್ಷಿಪಣಿಗಳನ್ನು ಪತ್ತೆಹಚ್ಚಬಲ್ಲದು.

ಭಾರತವು 2018ರ ಅಕ್ಟೋಬರ್‌ನಲ್ಲಿ ರಷ್ಯಾದೊಂದಿಗೆ 5.42 ಶತಕೋಟಿ ಡಾಲರ್ ವೆಚ್ಚದಲ್ಲಿ ಒಟ್ಟು 5 ಘಟಕಗಳ ಖರೀದಿಗೆ ಒಪ್ಪಂದ ಮಾಡಿಕೊಂಡಿತ್ತು. ಈಗಾಗಲೇ 3 ಘಟಕಗಳು ಭಾರತದ ಪೂರ್ವ ಮತ್ತು ಉತ್ತರ ಗಡಿಭಾಗಗಳಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ.

ರಷ್ಯಾ–ಉಕ್ರೇನ್ ಯುದ್ಧದ ಕಾರಣದಿಂದಾಗಿ 2023ರಲ್ಲೇ ಮುಗಿಯಬೇಕಿದ್ದ ಈ ಪೂರೈಕೆ ಪ್ರಕ್ರಿಯೆ ತಡವಾಗಿತ್ತು. ಇದೀಗ 5ನೇ ಘಟಕವು 2026ರ ಅಂತ್ಯದೊಳಗೆ ಭಾರತಕ್ಕೆ ತಲುಪಲಿದ್ದು, ಒಪ್ಪಂದ ಪೂರ್ಣಗೊಳ್ಳಲಿದೆ ಎಂದು ರಷ್ಯಾ ಭರವಸೆ ನೀಡಿದೆ.

**ಎಲ್ಲಿ ನಿಯೋಜಿಸಲಾಗಿದೆ?**

**ಪಂಜಾಬ್ ವಲಯ (ಪಠಾಣ್ಕೋಟ್ ಪ್ರದೇಶ):** ಮೊದಲ ಸ್ಕ್ವಾಡ್ರನ್ ಅನ್ನು ಇಲ್ಲಿ ನಿಯೋಜಿಸಲಾಗಿದ್ದು, ಇದು ಪಾಕಿಸ್ತಾನದ ಗಡಿ ಹಾಗೂ ಜಮ್ಮು–ಕಾಶ್ಮೀರ ವಲಯದ ಮೇಲೆ ನಿಗಾ ಇಡುತ್ತದೆ.

ರಾಜಸ್ಥಾನ ಗಡಿ ವಲಯ: ಪಶ್ಚಿಮ ಭಾರತವನ್ನು ಭದ್ರಪಡಿಸಲು ಮತ್ತೊಂದು ಸ್ಕ್ವಾಡ್ರನ್ ಅನ್ನು ಇಲ್ಲಿ ಸನ್ನದ್ಧಗೊಳಿಸಲಾಗಿದೆ. ಇತ್ತೀಚೆಗೆ ಭಾರತಕ್ಕೆ ತಲುಪಿರುವ ನಾಲ್ಕನೇ ಹೊಸ ಎಸ್–400 ಸ್ಕ್ವಾಡ್ರನ್ ಅನ್ನು ಸಹ ಇದೇ ರಾಜಸ್ಥಾನ ವಲಯದಲ್ಲೇ ನಿಯೋಜಿಸಲು ಸಿದ್ಧತೆಗಳು ನಡೆಯುತ್ತಿವೆ.

**ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂ ವಲಯ (ಸಿಲಿಗುರಿ ಕಾರಿಡಾರ್):** ಚೀನಾ ಗಡಿಗೆ ಹೊಂದಿಕೊಂಡಿರುವ ಆಯಕಟ್ಟಿನ ಚಿಕನ್ಸ್ ನೆಕ್ ಕಾರಿಡಾರ್ ಹಾಗೂ ಈಶಾನ್ಯ ಭಾರತದ ರಕ್ಷಣೆಗಾಗಿ ಇಲ್ಲಿ ಒಂದು ತುಕಡಿಯನ್ನು ನಿಯೋಜಿಸಲಾಗಿದೆ.

# ಚಿತ್ರಾಪುರದ ವಿದ್ಯೇಂದ್ರತೀರ್ಥ ಶ್ರೀಪಾದರ ಧರ್ಮಸ್ಥಳ ಭೇಟಿ



ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆಯವರನ್ನು ವಿದ್ಯೇಂದ್ರತೀರ್ಥ ಶ್ರೀಪಾದರು ಗುರುವಾರ ಭೇಟಿಯಾಗಿದ್ದರು.

**ಮುಂಬಯಿ, ಜೂ.4:** ಮಂಗಳೂರು ಕುಳಾಯಿ ಚಿತ್ರಾಪುರ ಅಲ್ಲಿರುವ ವಿಜಯಧ್ವಜತೀರ್ಥ ಪೀಠದ ಪೂಜ್ಯ ವಿದ್ಯೇಂದ್ರತೀರ್ಥ ಶ್ರೀಪಾದರು ಗುರುವಾರ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಅವರನ್ನು ಭವ್ಯ ಮೆರವಣಿಗೆಯ ಮೂಲಕ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಬಳಿಕ ಧರ್ಮಾಧಿಕಾರಿಗಳ ನಿವಾಸವಾದ ಬೀಡಿನಲ್ಲಿ ಸ್ವಾಮೀಜಿಯವರ ಪಾದಪೂಜೆ ನೆರವೇರಿಸಲಾಯಿತು. ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ। ಡಿ.ವೀರೇಂದ್ರ ಹೆಗ್ಗಡೆಯವರು ಕ್ಷೇತ್ರದ ಪರವಾಗಿ ಪೂಜ್ಯ ಶ್ರೀಪಾದರನ್ನು ಶಾಲು ಹೊದಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಹೇಮಾವತಿ ವಿ. ಹೆಗ್ಗಡೆಯವರು, ಡಿ.ಹರ್ಷೇಂದ್ರ ಕುಮಾರ್ ಹಾಗೂ ಸುಪ್ರಿಯಾ ಹರ್ಷೇಂದ್ರ ಕುಮಾರ್ ಉಪಸ್ಥಿತರಿದ್ದರು.

ಅನಂತರ ಪೂಜ್ಯ ವಿದ್ಯೇಂದ್ರತೀರ್ಥ ಶ್ರೀಪಾದರು ಶ್ರೀಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಅಲ್ಲದೆ, ಅನ್ನಪೂರ್ಣ ಭೋಜನಾಲಯ ಹಾಗೂ ಸರದಿ ಸಾಲು ವ್ಯವಸ್ಥೆಯಾದ ಶ್ರೀ ಸಾನ್ನಿಧ್ಯವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

# ಪ್ರಶ್ನೆಪತ್ರಿಕೆ ಸೋರಿಕೆಯಿಂದ ನೊಂದು ನೀಟ್ ಆಕಾಂಕ್ಷಿ ಆತ್ಮಹತ್ಯೆ

**ಭೂಪಾಲ್, ಜೂ. 4:** ಪ್ರಶ್ನೆಪತ್ರಿಕೆ ಸೋರಿಕೆ ಬಳಿಕ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಲಾಗಿದೆ. ಇದರಿಂದ ಮನನೊಂದ ವಿದ್ಯಾರ್ಥಿಯೊಬ್ಬರು ಮತ್ತೆ ಪರೀಕ್ಷೆ ಬರೆಯಲು ಸಾಧ್ಯವಿಲ್ಲ ಎಂದು ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಧ್ಯಪ್ರದೇಶದ ಮೌಗಂಜ್ ಜಿಲ್ಲೆಯಲ್ಲಿ ನಡೆದಿದೆ.

ಮೇ 3ರಂದು ನೀಟ್ ನೀಟ್–ಯುಜಿ ಪರೀಕ್ಷೆ ನಡೆದಿದ್ದು, ಈ ಪರೀಕ್ಷೆಗೆ ಹಾಜರಾದ ಲಕ್ಷಾಂತರ ವಿದ್ಯಾರ್ಥಿಗಳಲ್ಲಿ ಆಕಾಂಕ್ಷಾ ಚತುರ್ವೇದಿ ಕೂಡಾ ಒಬ್ಬರು. ಪ್ರಶ್ನೆ ಪತ್ರಿಕೆ ಸೋರಿಕೆ ಕಾರಣ ಸಂಪೂರ್ಣ ಪರೀಕ್ಷೆಯನ್ನೇ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಮೇ 12ರಂದು ರದ್ದುಗೊಳಿಸಿದೆ. ಜೂನ್ 21ರಂದು ಮರು ಪರೀಕ್ಷೆ ನಡೆಯಲಿದೆ. ಈ ಬೆಳವಣಿಗೆಯಿಂದ ಮಾನಸಿಕ ಒತ್ತಡಕ್ಕೆ ಒಳಗಾದ ಆಕಾಂಕ್ಷಾ ಚತುರ್ವೇದಿ ಮತ್ತೆ ಪರೀಕ್ಷೆ ಬರೆಯಲು ಧೈರ್ಯವಿಲ್ಲ ಎಂದು ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಇನ್ನು ಕುಟುಂಬಸ್ಥರು ಹೇಳುವ ಪ್ರಕಾರ ಆಕಾಂಕ್ಷಾ ನೀಟ್ ಪರೀಕ್ಷೆಯಲ್ಲಿ ಸುಮಾರು 650 ಅಂಕಗಳನ್ನು ಪಡೆಯುವ ನಿರೀಕ್ಷೆಯಲ್ಲಿದ್ದರು. ಆದರೆ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿವಾದ ಬೆಳಕಿಗೆ ಬಂದ ಬಳಿಕ ಆಕಾಂಕ್ಷಾ ತೀವ್ರವಾಗಿ ನೊಂದಿದ್ದರು. ಆಕಾಂಕ್ಷಾಳ ಹೆತ್ತವರು ವೈದ್ಯೆಯಾಗುವ ಕನಸು ಸಾಕಾರಗೊಳಿಸಲು ಸಾಕಷ್ಟು ಸಾಲವನ್ನೂ ಮಾಡಿದ್ದರು ಎಂದು ಹೇಳಲಾಗಿದೆ.

ನಾಗ್ಪುರದಲ್ಲಿ ಈ ವಿದ್ಯಾರ್ಥಿನಿಯ ಕೋಚಿಂಗ್ಗಾಗಿ ಕುಟುಂಬವು ಕಿಸಾನ್ ಕ್ರೆಡಿಟ್ ಕಾರ್ಡ್ ಮೂಲಕ 3 ಲಕ್ಷ ರೂ. ಸಾಲವನ್ನು ತೆಗೆದುಕೊಂಡಿದೆ. ವೃತ್ತಿಯಲ್ಲಿ ರೈತರಾಗಿದ್ದ ಆಕೆಯ ತಂದೆ ಕೃಷ್ಣ ಕುಮಾರ್ ಚತುರ್ವೇದಿ ಕೂಡ ನಾಗಪುರದಲ್ಲಿ ಅಡುಗೆಯವರಾಗಿ ಕೆಲಸ ಮಾಡಿದ್ದರು. ಅಲ್ಲಿಯೇ ಮಗಳು ಪರೀಕ್ಷೆಗಾಗಿ ತಯಾರಿ ನಡೆಸುತ್ತಿದ್ದರು ಎಂದು ವರದಿಯಾಗಿದೆ.

ಜಾರ್ಖಂಡ್ನಲ್ಲಿ ಇದೇ ರೀತಿ ನಡೆದಿದೆ. ನೀಟ್ ವಿವಾದದಿಂದಾಗಿ ಖಿನ್ನತೆಗೆ ಒಳಗಾಗಿ 16 ವರ್ಷದ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿದ್ದಳು. ರಾಜಸ್ಥಾನದ ಸಿಕಾರ್ನಲ್ಲಿ ನೀಟ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದ 23 ವರ್ಷದ ಪ್ರದೀಪ್ ಮಹಿಚ್ (ಮೇಘವಾಲ್) ಎಂಬ ವಿದ್ಯಾರ್ಥಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

# ಬದರಿನಾಥ, ಕೇದಾರ್‌ನಾಥದಲ್ಲಿ ದರ್ಶನಕ್ಕೆ ಸಾಲು

**ರುದ್ರ ಪ್ರಯಾಗ್,ಜೂ.4:** ಯಮುನೋತ್ರಿ, ಗಂಗೋತ್ರಿ, ಕೇದಾರನಾಥ, ಬದರಿನಾಥ ಒಳಗೊಂಡಿರುವ ಚಾರ್ಧಾಮ್ ಯಾತ್ರೆಯಲ್ಲಿ ಭಕ್ತರ ಉತ್ಸಾಹ ಕಂಡುಬಂದಿದೆ. ವರ್ಷದಿಂದ ವರ್ಷಕ್ಕೆ ಚಾರ್ಧಾಮ್ ಯಾತ್ರಿಕರ ಸಂಖ್ಯೆಯಲ್ಲಿ ಹೆಚ್ಚಳ ಕಾಣುತ್ತಿದ್ದು, ಈ ಬಾರಿ ಭದ್ರಿನಾಥ್ ಮತ್ತು ಕೇದಾರನಾಥ ಧಾಮದಲ್ಲಿ ದೇವರ ದರ್ಶನಕ್ಕೆ ಉದ್ದುದ್ದ ಸರತಿ ಸಾಲುಗಳು ಕಂಡಿದೆ.

ಉತ್ತರಾಖಂಡದಲ್ಲಿರುವ ವಿಶ್ವಪ್ರಸಿದ್ಧ ಬದರಿನಾಥ ಮತ್ತು ಕೇದಾರನಾಥ ಯಾತ್ರೆಗೆ ಯಾತ್ರಿಕರ ಸಂಖ್ಯೆಯಲ್ಲಿ ಭಾರಿ ಹೆಚ್ಚಳ ಕಂಡಿದೆ. ಪ್ರತಿನಿತ್ಯ ಸಾವಿರಾರು ಭಕ್ತರು ಹರಿದು ಬರುತ್ತಿದ್ದು, ದೇವರ ದರ್ಶನಕ್ಕೆ ತಾಳ್ಮೆಯಿಂದ ಸಾಲಿನಲ್ಲಿ ನಿಂತು ಕಾಯುತ್ತಿರುವ ದೃಶ್ಯಗಳು ಕಂಡುಬಂದಿವೆ.

ಇತ್ತೀಚಿನ ಅಂಕಿಅಂಶಗಳ ಪ್ರಕಾರ, ಇದುವರೆಗೆ 1,050,670 ಭಕ್ತರು ಕೇದಾರನಾಥ ಧಾಮಕ್ಕೆ ಭೇಟಿ ನೀಡಿ ಬಾಬಾ ಕೇದಾರನಿಗೆ ಪ್ರಾರ್ಥನೆ ಸಲ್ಲಿಸಿದ್ದಾರೆ. ಅದೇ ರೀತಿ, 832,903 ಯಾತ್ರಿಕರು ಬದರಿನಾಥ ಧಾಮದಲ್ಲಿ ನಮನ ಸಲ್ಲಿಸಿದ್ದಾರೆ.

ಈ ನಡುವೆ ಮಳೆಗಾಲ ಸಮೀಪಿಸುತ್ತಿದ್ದು, ಯಾತ್ರೆಯನ್ನು ಕೈಗೊಳ್ಳುವ ಮೊದಲು ಯಾತ್ರಿಕರು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಮಂಡಳಿ ಒತ್ತಾಯಿಸಿದೆ. ಭಕ್ತರು ತಮ್ಮ ನೋಂದಣಿಯನ್ನು ಮುಂಚಿತವಾಗಿ ಸಾಕಷ್ಟು ಸಿದ್ಧತೆ ನಡೆಸಿ, ಬೆಚ್ಚಗಿನ ಬಟ್ಟೆಗಳನ್ನು ತೆಗೆದುಕೊಂಡು ಹೊರಡಿ. ಮುಂಚಿತವಾಗಿ ವಸತಿ ವ್ಯವಸ್ಥೆ ಮಾಡಿ ಮತ್ತು ಯಾತ್ರೆಯನ್ನು ಪ್ರಾರಂಭಿಸುವ ಮೊದಲು ಹವಾಮಾನ ಪರಿಸ್ಥಿತಿಗಳನ್ನು ಪರಿಶೀಲಿಸಲು ಸಮಿತಿ ಸಲಹೆ ನೀಡಿದೆ.

ಪ್ರಯಾಣ ಆರಂಭಿಸುವ ಮೊದಲು ತಮ್ಮ ನೋಂದಣಿಯನ್ನು ಪೂರ್ಣಗೊಳಿಸಲು ಬಿಕೆಟಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಸೋಹನ್ ಸಿಂಗ್ ಸಂದರ್ಶಕರನ್ನು ಒತ್ತಾಯಿಸಿದರು.



ಈ ಪ್ರದೇಶದಲ್ಲಿ ಚಾಲ್ತಿಯಲ್ಲಿರುವ ಶೀತ ವಾತಾವರಣ ಇರುವ ಹಿನ್ನೆಲೆ ಭಕ್ತರು ಈ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಮುಂಗಾರು ಋತು ಕ್ರಮೇಣ ಸಮೀಪಿಸುತ್ತಿದೆ. ಪ್ರವಾಸಿಗರ ಸಂಖ್ಯೆಯಲ್ಲಿ ಗಮನಾರ್ಹ ಏರಿಕೆ ಕಾಣಲಿದೆ. ಜೋಶಿಮಠದಲ್ಲಿ ಏಕಮುಖ ಸಂಚಾರ ವ್ಯವಸ್ಥೆಯನ್ನು ಜಾರಿಗೆ ತಂದಿರುವುದರಿಂದ, ಪ್ರಯಾಣ ಕೈಗೊಳ್ಳುವ ಮೊದಲು ಭಕ್ತರು ತಮ್ಮ ನೋಂದಣಿಯನ್ನು ಪೂರ್ಣಗೊಳಿಸಬೇಕೆಂದು ಒತ್ತಾಯಿಸುತ್ತೇವೆ. ನೋಂದಣಿ ಮಾಡುವುದರಿಂದ ನಿಮ್ಮ ಭೇಟಿಯ ದಾಖಲೆ ನಮ್ಮಲ್ಲಿ ಇರಲಿದೆ. ಇದು ನಮ್ಮ ಕಾರ್ಯಾಚರಣೆಗಳಿಗೆ ಅತ್ಯಗತ್ಯ. ಇಲ್ಲಿ ಹವಾಮಾನವು ತಂಪಾಗಿರುವುದರಿಂದ, ದಯವಿಟ್ಟು ಸಾಕಷ್ಟು ಬೆಚ್ಚಗಿನ ಬಟ್ಟೆಗಳನ್ನು ತರಲು ಮರೆಯದಂತೆ ಮನವಿ ಮಾಡಿದ್ದಾರೆ.

ವಸತಿಗೆ ಅಗತ್ಯವಿರುವ ಎಲ್ಲಾ ವ್ಯವಸ್ಥೆಗಳನ್ನು ಮುಂಚಿತವಾಗಿ ಮಾಡಿಕೊಳ್ಳುವುದು ಮುಖ್ಯ. ಈ ಬಾರಿ ಯಾತ್ರಿಕರ ಸಂಖ್ಯೆ ಹೆಚ್ಚಿರುವುದರಿಂದ ದೊಡ್ಡ ಜನಸಂದಣಿ ಮತ್ತು ದೀರ್ಘ ಸರತಿ ಸಾಲುಗಳಂತಹ ಕೆಲವು ಸಣ್ಣ ಅನಾನುಕೂಲತೆಗಳಿಗೆ ಸಿದ್ಧರಾಗಿರುವಂತೆ ಕೂಡ ತಿಳಿಸಿದ್ದಾರೆ.

# ಸರ್ಕಾರದ ಯೋಜನೆಗಳನ್ನು ತಲುಪಿಸಲು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಿ: ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್

**ಬೆಂಗಳೂರು, ಜೂ.4:** ಒಳ್ಳೆಯ ಆಡಳಿತ ನೀಡುವುದಾಗಿ ರಾಜ್ಯದ ಜನತೆಗೆ ಭರವಸೆ ನೀಡಿದ್ದೇವೆ. ಸರ್ಕಾರದ ಯೋಜನೆಗಳು ನಿಗದಿತ ಸಮಯದೊಳಗೆ ಜನರಿಗೆ ತಲುಪಿಸುವ ಜವಾಬ್ದಾರಿ ಮತ್ತು ಪಾರದರ್ಶಕವಾಗಿ ಕೆಲಸ ಮಾಡಬೇಕು ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಅವರು ಹೇಳಿದರು.



ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮುಖ್ಯಮಂತಿ ಜೊತೆ ಪಾಲ್ಗೊಂಡು, ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕಳೆದ ಮೂರು ವರ್ಷಗಳಲ್ಲಿ ಎಲ್ಲ ಅಧಿಕಾರಿಗಳು ಬದ್ಧತೆಯಿಂದ ಕೆಲಸ ಮಾಡಿ, ಸರ್ಕಾರಕ್ಕೆ ಒಳ್ಳೆಯ ಹೆಸರು ತಂದಿದ್ದೀರಿ. ಅನೇಕ ಭರವಸೆಗಳನ್ನು ಈಡೇರಿಸಲಾಗಿದೆ. ನೂತನ ಮುಖ್ಯಮಂತ್ರಿಗಳ ನೇತೃತ್ವದ ಸರ್ಕಾರವೂ ಅಪಾರ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಜನಸಮುದಾಯಕ್ಕೆ ಹತ್ತಿರವಾಗಿ ಕೆಲಸ ಮಾಡಬೇಕು. ನಿಮ್ಮ ಸೇವೆ ಜನಸಮುದಾಯಕ್ಕೆ ಅನುಕೂಲವಾಗಬೇಕು ಎಂದು ಅವರು ಹೇಳಿದರು.

ಯುವ ಸಮುದಾಯ ಸೂಕ್ಷ್ಮವಾಗಿ ನೋಡುತ್ತಿದೆ. ಯುವಕರ ಆಪೇಕ್ಷೆಯಂತೆ ಆಡಳಿತ ನೀಡಬೇಕು ಎಂಬುದು ಸರ್ಕಾರದ ದೃಷ್ಟಿಕೋನವಾಗಿದೆ. ಬರೀ ಭರವಸೆಗಳನ್ನು ಪೂರ್ಣಗೊಳಿಸುವುದಷ್ಟೆ ಅಲ್ಲ. ರಾಜ್ಯದ ಅಭಿವೃದ್ಧಿಗೆ ದೃಷ್ಟಿಕೋನ ನೀಡಬೇಕಿದೆ. ಕರ್ನಾಟಕ ಪ್ರಗತಿಪರ ರಾಜ್ಯ. ಎಲ್ಲರೂ ಕರ್ನಾಟಕದತ್ತ ಗಮನ ಹರಿಸುತ್ತಾರೆ. ಇದನ್ನು ನಾವು ಯಾವ ರೀತಿ ಸಾಕಾರಗೊಳಿಸಬೇಕು ಎಂಬುದು ಸಭೆಯ ಮೂಲ ಉದ್ದೇಶವಾಗಿದೆ ಎಂದರು.

ಅನೇಕ ಸಂದರ್ಭಗಳಲ್ಲಿ ಅಭಿವೃದ್ಧಿಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ ಎಂದು ಗುರುತಿಸಲಾಗಿದೆ. ಆ ಅವಕಾಶ ಮತ್ತೆ ಬಂದಿದೆ. ಎಲ್ಲ ಮಾನದಂಡಗಳಲ್ಲಿಯೂ ನಮ್ಮ ರಾಜ್ಯ ಅಗ್ರಸ್ಥಾನದಲ್ಲಿರಬೇಕು ಎಂದು ಪರಮೇಶ್ವರ್ ತಿಳಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ, ಈಶ್ವರ್ ಖಂಡ್ರೆ, ಯು.ಟಿ.ಖಾದರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ. ಎಂ.ಎ.ಸಲೀಂ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಇದ್ದರು.

### ಅಧಿಕಾರಿಗಳ ಯೋಚನೆ ಬದಲಾಗಬೇಕು

ಸಾಮಾನ್ಯ ರೈತ ತಹಶೀಲ್ದಾರ್ ಕಚೇರಿಗೆ ಹೋಗಿ, ತನ್ನ ಕೆಲಸ ಮುಗಿಸಿಕೊಂಡು ಸಂತೋಷದಿಂದ ಹೊರಬರಬೇಕು. ತನಗಾದ ಅನ್ಯಾಯಕ್ಕಾಗಿ ಪೊಲೀಸ್ ಠಾಣೆಗೆ ದೂರು ಕೊಡುವ ವ್ಯಕ್ತಿಗೆ ನ್ಯಾಯ ಸಿಗುತ್ತದೆ ಎಂಬ ಭರವಸೆಯಿಂದ ಸಮಾಧಾನವಾಗಬೇಕು. ಈ ಕೆಲಸ ಅನೇಕ ಸಂದರ್ಭಗಳಲ್ಲಿ ಅಗುತ್ತಿಲ್ಲ. ಅಧಿಕಾರಿಗಳು ಹೆಚ್ಚು ಗಮನ ಹರಿಸಬೇಕು. ಕಡತ ವಿಲೇವಾರಿ ಆದರೆ ಸಾಕು, ಕೆಲಸ ಮುಗಿಯಿತು ಎಂಬ ಮನಸ್ಥಿತಿ ನಮ್ಮ ಅಧಿಕಾರಿಗಳಿಗೆ ಇದೆ. ಈ ರೀತಿಯ ಯೋಚನೆ ಬದಲಾಗಬೇಕು ಎಂದು ಹೇಳಿದರು.



ಬೆಂಗಳೂರಿನ ವಿಧಾನಸೌಧದಲ್ಲಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಸಲೀಂ ಹಾಗೂ ಸರ್ಕಾರದ ಕಾರ್ಯದರ್ಶಿ ಶಾಲಿನಿ ರಜನೀಶ್ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಅಭಿನಂದನೆ ಸಲ್ಲಿಸಿದರು.

# ಶ್ರೀ ಸಿದ್ಧಲಿಂಗ ಸ್ವಾಮೀಜಿ ಆಶೀರ್ವಾದ ಪಡೆದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಪರಮೇಶ್ವರ್

**ಬೆಂಗಳೂರು, ಜೂ. 4:** ಸಿದ್ಧಗಂಗಾ ಮಠದ ಪೀಠಾಧ್ಯಕ್ಷರಾದ ಡಾ.ಶ್ರೀ ಸಿದ್ಧಲಿಂಗ ಸ್ವಾಮೀಜಿ ಅವರು ಇಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರ ಮನೆಗೆ ಭೇಟಿ ನೀಡಿ ಶುಭ ಹಾರೈಸಿದ್ದಾರೆ.

ತುಮಕೂರು ಜಿಲ್ಲೆಯವರಾದ ಪರಮೇಶ್ವರ್ ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷಿಯಾಗಿದ್ದರು. ಕಾಂಗ್ರೆಸ್ ಹೈಕಮಾಂಡ್ ಅವರನ್ನು ಉಪಮುಖ್ಯಮಂತ್ರಿಯನ್ನಾಗಿ ಮಾಡಿದೆ. ತುಮಕೂರಿನ ಸಿದ್ದಗಂಗ ಮಠದ ಶ್ರೀಗಳು ಗುರುವಾರ ಬೆಂಗಳೂರಿಗೆ ಆಗಮಿಸಿ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿದರು.



ಪರಮೇಶ್ವರ್ ಅವರ ಮನೆಯ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ಧಲಿಂಗ ಸ್ವಾಮೀಜಿಯವರು, ಪರಮೇಶ್ವರ್ ಹಿರಿಯ ವ್ಯಕ್ತಿ. ಪಕ್ಷವನ್ನು ಸಮರ್ಥವಾಗಿ ಮುನ್ನಡೆಸಿದ್ದರು. ಸಚಿವರಾಗಿ ಹಲವು ಖಾತೆಗಳನ್ನು ನಿಭಾಯಿಸಿದ್ದಾರೆ. ಯಾವುದೇ ಜವಾಬ್ದಾರಿ ಕೊಟ್ಟರೂ ಅದನ್ನು ಸಮರ್ಥವಾಗಿ ನಿರ್ವಹಣೆ ಮಾಡುತ್ತಾರೆ ಎಂದರು.

ಪರಮೇಶ್ವರ್ ಅವರನ್ನು ಉಪ ಮುಖ್ಯಮಂತ್ರಿಯನ್ನಾಗಿ ಮಾಡಿರುವುದು ಸಂತೋಷದ ವಿಚಾರ. ಅವರು ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಯಾಗಿದ್ದರು. ಹಲವು ಬಾರಿ ಅವಕಾಶ ತಪ್ಪಿಹೋಗಿದೆ. ಬಹುಶಃ ಅದಕ್ಕಾಗಿಯೇ ಈಗ ಉಪ ಮುಖ್ಯಮಂತ್ರಿ ಮಾಡಿರಬಹುದು ಎಂದು ಸ್ವಾಮೀಜಿ ಹೇಳಿದರು.

ತಾವು ಭೇಟಿಮಾಡಿದ ವೇಳೆಯಲ್ಲಿ ಮಠದ ವತಿಯಿಂದ ಆಶೀರ್ವದಿಸಿರುವುದಾಗಿ ಹೇಳಿದರು. ಪರಮೇಶ್ವರ್ ಅವರ ಮನೆಗೆ ಇಂದು ಸಚಿವರಾದ ಯು.ಟಿ.ಖಾದರ್, ಮಾಜಿ ಸಚಿವ ಸಂತೋಷ್ ಲಾಡ್, ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಸೇರಿದಂತೆ ಹಲವರು ಭೇಟಿ ನೀಡಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸಂಪುಟದಲ್ಲಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿರಿಯ ಕಾಂಗ್ರೆಸ್ ನಾಯಕ ಎಂ.ಬಿ.ಪಾಟೀಲರ ಇಲ್ಲಿನ ಸದಾಶಿವ ನಗರದ ನಿವಾಸಕ್ಕೆ ತುಮಕೂರು ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮೀಜಿ ಅವರು ಆಗಮಿಸಿ, ಸಚಿವರ ಕುಟುಂಬ ಪರಿವಾರಕ್ಕೆ ಆಶೀರ್ವಚನ ಮಾಡಿ, ಹರಸಿದರು.

ಬೆಳಗ್ಗೆಯಿಂದಲೇ ಶಾಸಕರು, ಕಾರ್ಯಕರ್ತರು, ಅಧಿಕಾರಿಗಳ ಆಗಮನ ಮತ್ತು ಅಭಿಮಾನಿಗಳ ಕಲರವದಿಂದ ತುಂಬಿದ್ದ ಸಚಿವರ ಸ್ವಂತ ನಿವಾಸಕ್ಕೆ ಆಗಮಿಸಿದ ಶ್ರೀಗಳನ್ನು ಸಚಿವರ ಕುಟುಂಬ ಪರಿವಾರ ಗೌರವದಿಂದ ಬರಮಾಡಿಕೊಂಡಿತು. ನಂತರ ಎಂ.ಬಿ.ಪಾಟೀಲ, ಅವರ ಪತ್ನಿ ಆಶಾ ಪಾಟೀಲ, ಮಕ್ಕಳಾದ ಬಸಂತ್ ಮತ್ತು ಧ್ರುವ ಪಾಟೀಲ ಎಲ್ಲರೂ ಸ್ವಾಮೀಜಿಗಳ ಪಾದಪೂಜೆ ನೆರವೇರಿಸಿದರು. ಅವರೆಲ್ಲರ ಭಕ್ತಿಯನ್ನು ಸ್ವೀಕರಿಸಿದ ಸಿದ್ಧಲಿಂಗ ಸ್ವಾಮೀಜಿ ಕೆಲ ಹೊತ್ತು ಲೋಕಾಭಿರಾಮವಾಗಿ ಮಾತನಾಡಿ, ಬಳಿಕ ಆಶೀರ್ವಚನಗೈದು, ಒಳಿತನ್ನು ಹಾರೈಸಿದರು.

ಈ ಸಂದರ್ಭದಲ್ಲಿ ಸಚಿವ ಪಾಟೀಲರು ಕೂಡ ತಮ್ಮ ಇದುವರೆಗಿನ ಸಾಧನೆಗಳ ನೆನಪಿನೊಂದಿಗೆ, ಇನ್ನು ಮುಂದೆಯೂ ಶ್ರೀಗಳ ಸಲಹೆ, ಮಾರ್ಗದರ್ಶನ ತಮಗೆ ಇರಬೇಕೆಂದು ಕೋರಿದರು.

ರಾಜ್ಯದ ಸ್ಥಿತಿಗತಿ, ಮಳೆ–ಬೆಳೆ ಇತ್ಯಾದಿಗಳ ಬಗ್ಗೆ ಅಭಿಪ್ರಾಯ ವಿನಿಮಯ ಮಾಡಿಕೊಂಡ ಶ್ರೀಗಳು, ತಾವು ಸಕುಟುಂಬ ಪರಿವಾರ ಸಮೇತರಾಗಿ ಸಿದ್ಧಗಂಗೆಯ ಶ್ರೀಮಠಕ್ಕೆ ಆಗಮಿಸಬೇಕೆಂದು ಆಹ್ವಾನ ನೀಡಿದರು. ಇದಕ್ಕೆ ಸಚಿವರು ಸಕಾರಾತಕವಾಗಿ ಸ್ಪಂದಿಸಿದರು.

ಇದೇ ಸಂದರ್ಭದಲ್ಲಿ ಶ್ರೀಗಳು ಸಚಿವರ ಪುತ್ರ, ವನ್ಯಜೀವಿ ಮಂಡಳಿ ಸದಸ್ಯ ಧ್ರುವ ಪಾಟೀಲ ತೆಗೆದಿರುವ ವನ್ಯಜೀವಿಗಳ ಛಾಯಾಚಿತ್ರಗಳನ್ನು ನೋಡಿ ಮೆಚ್ಚುಗೆ ವ್ಯಕ್ತಪಡಿಸಿದರು. ಅವರ ಪರಿಸರ ಕಾಳಜಿ ಕೇಳಿಯೂ ಹರ್ಷ ವ್ಯಕ್ತಪಡಿಸಿದರು. ವೀರಶೈವ ಲಿಂಗಾಯತ ಸಮುದಾಯದ ಹಿರಿಯ ನಾಯಕರಲ್ಲಿ ಒಬ್ಬರಾಗಿರುವ ಎಂ.ಬಿ.ಪಾಟೀಲ ಅವರು ಮೊದಲಿನಿಂದಲೂ ಶ್ರೀಮಠದೊಂದಿಗೆ ನಿಕಟ ಬಾಂಧವ್ಯ ಇಟ್ಟುಕೊಂಡು ಬಂದಿದ್ದಾರೆ. ವಿಶೇಷವಾಗಿ ಮಠದ ಕಾಯಕ ಪರಂಪರೆ, ಶಿಕ್ಷಣ ಪ್ರಸಾರ ಮತ್ತು ಅನ್ನದಾಸೋಹಗಳನ್ನು ಸಚಿವರು ಮೆಚ್ಚಿಕೊಂಡಿರುವುದನ್ನು ಇಲ್ಲಿ ನೆನೆಯಬಹುದು.

ಏತನಧ್ಯೆ ಸಚಿವರ ನಿವಾಸಕ್ಕೆ ಸಾವಿರಾರು ಅಭಿಮಾನಿಗಳು ಲಗ್ಗೆ ಇಟ್ಟಿದ್ದರು. ಅದರಲ್ಲೂ ಸಚಿವರ ತವರುಜಿಲ್ಲೆ ವಿಜಯಪುರದಿಂದ ಹೆಚ್ಚಿನ ಸಂಖ್ಯೆಯ ಅಭಿಮಾನಿಗಳು ಬೆಂಗಳೂರಿಗೆ ಬಂದಿದ್ದರು.

ಸಚಿವರು ತಮ್ಮ ತವರಿನ ಜನರ ಜತೆ ಲವಲವಿಕೆಯಿಂದ ಓಡಾಡುತ್ತಾ, ಕೈ ಕುಲುಕುತ್ತಾ, ಅವರಿಗೆ ಆತಿಥ್ಯ ನೀಡುತ್ತಾ ಚಟುವಟಿಕೆಯಿಂದಿದ್ದರು. ಇನ್ನೊಂದು ಕಡೆಯಲ್ಲಿ ಅಧಿಕಾರಿಗಳು ಸಚಿವರನ್ನು ಅಭಿನಂದಿಸಿದರು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಬಿ.ಕೆ.ಹರಿಪ್ರಸಾದ್ ಅವರನ್ನು ಅವರ ಮನೆಯಲ್ಲಿ ಭೇಟಿ ಮಾಡಿ ಸಚಿವ ಎಂ.ಬಿ.ಪಾಟೀಲ ಅವರು ಅಭಿನಂದನೆ ಸಲ್ಲಿಸಿದರು.

### ಸರ್ಕಾರದ ಮೇಲೆ ರಾಹುಲ್‌ಗಾಂಧಿ-ಸಿದ್ದರಾಮಯ್ಯ ರಿಮೋಟ್ ಕಂಟ್ರೋಲ್

# ಡಿ.ಕೆ.ಶಿವಕುಮಾರ್‌ಗೆ ಸ್ವಾತಂತ್ರ್ಯವಿಲ್ಲ ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕೆ

**ಬೆಂಗಳೂರು, ಜೂ.4:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ರಚನೆಯಾದ ಹೊಸ ಸರ್ಕಾರ, ರಾಹುಲ್ ಗಾಂಧಿ ಮತ್ತು ಸಿದ್ದರಾಮಯ್ಯನವರ ರಿಮೋಟ್ ಕಂಟ್ರೋಲ್‌ನಿಂದ ನಡೆಯಲಿದೆ. ಇದರಿಂದ ಜನರಿಗೆ ಏನೂ ಹೊಸತು ಸಿಕ್ಕಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾಗಿರುವುದು ಹಳೆ ಸಿನಿಮಾದ ಪೋಸ್ಟರ್ ಬದಲಾದಂತಿದೆ. ಮುಖ್ಯಮಂತ್ರಿ ನಿವಾಸದ ಮುಂಭಾಗದ ಫಲಕದಲ್ಲಿ ಹೆಸರು ಬದಲಾಗಿದೆಯೇ ಹೊರತು ಜನರ ಕಷ್ಟಗಳು ನೀಗಿಲ್ಲ. ರಾಜ್ಯಕ್ಕೆ ಹೊಸ ಸಚಿವರು ಸಿಗುತ್ತಾರೆ ಎಂಬ ನಿರೀಕ್ಷೆ ಇದ್ದರೂ, ಹೊಸ ಮುಖಗಳು ಕಂಡಿಲ್ಲ. ಸಿದ್ದರಾಮಯ್ಯನವರ ಮಗ ಯತೀಂದ್ರ ಸಚಿವರಾಗಿ ಬಂದಿದ್ದಾರೆಯೇ ಹೊರತು ಹೊಸದೇನೂ ಇಲ್ಲ ಎಂದರು.



ಮಳೆಯಿಂದಾಗಿ ಬೆಳೆಹಾನಿಯಾಗಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, ಇದರಲ್ಲಿ ರಾಜ್ಯಕ್ಕೆ ಎರಡನೇ ಸ್ಥಾನ ಬಂದಿದೆ. ಐಪಿಎಲ್ ಸಂಭ್ರಮಾಚರಣೆ ಯಲ್ಲಿ ಹನ್ನೊಂದು ಅಮಾಯಕರ ಹತ್ಯೆ ಯಾಯಿತು. ಭ್ರಷ್ಟಾಚಾರದ ನೋವಿನಿಂದ ಅಧಿಕಾರಿಗಳ ಸಾವು, ಸರ್ಕಾರದ ನಿರ್ಲಕ್ಷ್ಯದಿಂದ ಬಾಣಂತಿಯರ ಸಾವು, ಮೈಕ್ರೋ ಫೈನಾನ್ಸ್ ಒತ್ತಡದಿಂದ ಜನರ ಸಾವು, ಸಂಬಳ ಸಿಗದೆ ನೌಕರರ ಸಾವು, ಆಸ್ಪತ್ರೆ ಗೋಡೆ ಕುಸಿದು ಬೀದಿಬದಿ ವ್ಯಾಪಾರಿಗಳ ಸಾವು, ಬೆಂಗಳೂರು ಸೇರಿದಂತೆ ಎಲ್ಲ ಕಡೆ ರಸ್ತೆಗಳಲ್ಲಿ ಗುಂಡಿಗಳ ಹಾವಳಿ ಹೀಗೆ ಅನೇಕ ಸಮಸ್ಯೆಗಳು ಇನ್ನೂ ಇದೆ. ಜನರು ಉತ್ತಮ ಆಡಳಿತ ಕೇಳಿದರೆ, ಕಾಂಗ್ರೆಸ್ ಪಕ್ಷ ಕುರ್ಚಿಯ ಬದಲಾವಣೆ ಮಾತ್ರ ಮಾಡಿದೆ ಎಂದರು.

ಬೆಂಗಳೂರಿನಲ್ಲಿ ನೂರಾರು ಕಟೌಟ್‌ಗಳನ್ನು ಅಳವಡಿಸಲಾಗಿದೆ. ಫಲಕ ಹಾಕಬೇಡಿ ಎಂದು ಹೇಳಿದರೂ ಅವುಗಳನ್ನು ಅಳವಡಿಸಲಾಗಿದೆ. ಅಂದರೆ ಮುಖ್ಯಮಂತ್ರಿ ಏನೇ ಹೇಳಿದರೂ ಅದು ಅನುಷ್ಠಾನವಾಗುವುದಿಲ್ಲ ಎಂಬುದು ಸಾಬೀತಾಗಿದೆ.

**ಮಹಿಳಾ ವಿರೋಧಿ ಕಾಂಗ್ರೆಸ್**

ಸಂಸತ್ತಿನಲ್ಲಿ ಮಹಿಳಾ ಮೀಸಲಾತಿಯನ್ನು ಕಾಂಗ್ರೆಸ್ ವಿರೋಧಿಸಿದೆ. ನಿನ್ನೆ ನಡೆದ ಪದಗ್ರಹಣ ಸಮಾರಂಭದಲ್ಲಿ ಒಬ್ಬರೇ ಒಬ್ಬ ಮಹಿಳೆಗೆ ಅವಕಾಶ ನೀಡಿಲ್ಲ. ಕಾಂಗ್ರೆಸ್ ಮಹಿಳೆಯರಿಗೆ ಮೋಸ ಮಾಡಿದೆ ಎಂದರು.

# ಎರಡನೇ ಪಟ್ಟಿಯಲ್ಲಿ ಅವಕಾಶ: ಲಾಡ್ ವಿಶ್ವಾಸ

**ಬೆಂಗಳೂರು, ಜೂ. 4:** ಸಚಿವ ಸಂಪುಟ ವಿಸ್ತರಣೆಯ ಎರಡನೇ ಪಟ್ಟಿಯಲ್ಲಿ ತಮಗೆ ಅವಕಾಶ ನೀಡುವ ಸಾಧ್ಯತೆ ಇದೆ ಎಂದು ಮಾಜಿ ಸಚಿವ ಸಂತೋಷ್ಲಾಡ್ ಹೇಳಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ.ಜಿ.ಪರ ಮೇಶ್ವರ್ ಅವರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೂತನ ಸಂಪುಟದ ಸಚಿವರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಮೊದಲ ಪಟ್ಟಿಯಲ್ಲಿ ತಮ ಹೆಸರಿಲ್ಲದೇ ಇರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸಾರ್ವಜನಿಕ ಜೀವನದಲ್ಲಿ ಇದೆಲ್ಲಾ ಸಹಜ. ರಾಜ್ಯದಲ್ಲಿ ಕೋಟ್ಯಂತರ ಜನರಿದ್ದಾರೆ. ಅವರ ಪೈಕಿ ನಮಗೆ ಸಚಿವರಾಗುವ ಅವಕಾಶ ಸಿಕ್ಕಿತ್ತು ಅದಕ್ಕೆ ಖುಷಿ ಪಡಬೇಕು, ಅವಕಾಶ ಸಿಕ್ಕಾಗ ಕೆಲಸ ಮಾಡಬೇಕು. ಸಿಗದೇ ಇದ್ದಾಗ ಕುಗ್ಗಬಾರದು ಎಂದು ಹೇಳಿದರು.

ಕಾರ್ಮಿಕ ಸಚಿವನಾಗಿ ಎಲ್ಲರಂತೆ ನಾನು ಸಕ್ರಿಯವಾಗಿ ಕೆಲಸ ಮಾಡಿದ್ದೇನೆ. ಎರಡನೇ ಹಂತದ ಸಂಪುಟ ವಿಸ್ತರಣೆಯಲ್ಲಿ ತಮಗೆ ಅವಕಾಶ ಸಿಗಲಿದೆ ಎಂಬ ವಿಶ್ವಾಸವಿದೆ. ಆದರೆ ಈ ಬಗ್ಗೆ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧ ಎಂದರು.



ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ತಮ ಹೆಸರು ಕೇಳಿಬಂದಿರುವುದಕ್ಕೆ ಹೆಮೆ ಇದೆ. ನನ್ನ ಹೆಸರು ಆ ಮಟ್ಟಕ್ಕೆ ಬೆಳೆದಿರುವ ಬಗ್ಗೆ ಸಂತೋಷದ ವಿಚಾರ. ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷರಾಗಿರುವುದು ವೈಯಕ್ತಿಕವಾಗಿ ನನಗೆ ಸಂತಸ ತಂದಿದೆ ಎಂದು ತಿಳಿಸಿದರು.

# ಒಬ್ಬರಿಗೆ ಒಂದೇ ಹುದ್ದೆ ಮಾನದಂಡದಂತೆ ಖಾತೆ ಹಂಚಿಕೆ: ಸತೀಶ್ ಜಾರಕಿಹೊಳಿ

**ಬೆಂಗಳೂರು, ಜೂ.4:** ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಹೈಕಮಾಂಡ್ ಬಿ.ಕೆ. ಹರಿಪ್ರಸಾದ್ ಅವರನ್ನು ನೇಮಕ ಮಾಡಿದ್ದು, ಈ ಸ್ಥಾನಕ್ಕೆ ಸಚಿವ ಸತೀಶ್ ಜಾರಕಿಹೊಳಿ ಕೂಡ ಪೈಪೋಟಿಯಲ್ಲಿದ್ದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಒಬ್ಬರಿಗೆ ಒಂದೇ ಹುದ್ದೆ ಎಂಬ ಮಾನದಂಡದ ಪ್ರಕಾರ ಎಲ್ಲರಿಗೂ ಖಾತೆ ನೀಡಲಾಗಿದೆ. ಹಾಗಾಗಿ ಕೆಪಿಸಿಸಿ ಸ್ಥಾನ ಕೈತಪ್ಪಿದ್ದಲ್ಲ



ಅದರ ಬಗ್ಗೆ ಎರಡು ತಿಂಗಳ ಮುನ್ನವೇ ತಿಳಿಸಿದ್ದರು. ನಮ್ಮ ಪಕ್ಷದಲ್ಲಿ ಒಬ್ಬರಿಗೆ ಒಂದು ಪೋಸ್ಟ್ ಅಂತಲೇ ಇದ್ದಿದ್ದು ಒಂದು ಪೋಸ್ಟ್ ಅಂತ ಬಂದಾಗ ಇಷ್ಟೆಲ್ಲ ಆಯ್ತು ಕೊನೆ ಗಳಿಗೆಯಲ್ಲಿ ಮಂತ್ರಿ ಸ್ಥಾನ ಇರಲಿಲ್ಲ. ಕೆಪಿಸಿಸಿ ಸ್ಥಾನ ಇತ್ತು ಹಾಗಾಗಿ ಕೆಪಿಸಿಸಿ ವಿಚಾರವಾಗಿ ಸುಮ್ಮನಾದೆ. ಸಿದ್ದರಾಮಯ್ಯ ಅಧ್ಯಕ್ಷರಾಗದೆ ಮುಖ್ಯಮಂತ್ರಿ ಆಗಿದ್ದರು. ಸಿಎಂ ಆಗಲು ಅಧ್ಯಕ್ಷ ಸ್ಥಾನ ಬೇಕು ಅಂತ ಏನು ಇಲ್ಲ ಎಂದು ಸತೀಶ್ ಜಾರಕಿಹೊಳಿ ತಿಳಿಸಿದರು.

# ಡಿ.ಕೆ.ಶಿವಕುಮಾರ್ ಸಂಪುಟ ಸಿದ್ದರಾಮಯ್ಯ ಕ್ಯಾಬಿನೆಟ್‌ನಂತಿದೆ: ವಿಜಯೇಂದ್ರ ವ್ಯಂಗ್ಯ

**ಮಂಡ್ಯ, ಜೂ.4:** ಡಿ.ಕೆ. ಶಿವಕುಮಾರ್ ಅವರ ಮಂತ್ರಿಮಂಡಲ ನೋಡಿದಾಗ ಸಿದ್ದರಾಮಯ್ಯನವರ ಕ್ಯಾಬಿನೆಟ್ ಅನ್ನುವುದು ಸ್ಪಷ್ಟವಾಗುತ್ತದೆ. ಕುರ್ಚಿಯಿಂದ ಇಳಿದು ಹೋಗುವಾಗ ಗೂಗ್ಲಿ ಎಸೆದು ಹೋಗಿದ್ದಾರೆ. ಹೀಗಾಗಿ ನೂತನ ಮುಖ್ಯಮಂತ್ರಿಗೆ ಹನಿಮೂನ್ ಪೀರಿಯಡ್ ಇರುವುದಿಲ್ಲ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವ್ಯಂಗ್ಯವಾಡಿದರು.



ಮಾಧ್ಯಮದವರೊಂದಿಗೆ, 'ಶಿವಕುಮಾರ್ ಅವರು ಸಿಎಂ ಆಗುವ ಆಸೆಯನ್ನು ಪೂರೈಸಿಕೊಂಡಿದ್ದಾರೆ. ಈಗ ಅವರ ಮುಂದೆ ಹಲವು ಸವಾಲುಗಳಿವೆ. ಸಿದ್ದರಾಮಯ್ಯನವರು ಕಡೇ ಕ್ಷಣದಲ್ಲಿ ಹಿಂದುಳಿದ ವರ್ಗಗಳ ವರದಿ ಸ್ವೀಕರಿಸಿ, ನೂತನ ಸಿಎಂ ಏನು ಮಾಡುತ್ತಾರೆ ಎಂಬ ಸವಾಲು ಬಿಟ್ಟು ಹೋಗಿದ್ದಾರೆ'. ಕಳೆದ 3 ವರ್ಷಗಳಲ್ಲಿ ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯ ಸರ್ಕಾರವು ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ. ಅಲ್ಪಸಂಖ್ಯಾತರನ್ನು ಓಲೈಸಿಕೊಂಡು ರಾಜಕಾರಣ ಮಾಡಿದ್ದಾರೆ. ಇದನ್ನೇ ಡಿಕೆಶಿ ಮುಂದುವರಿಸಿಕೊಂಡು ಹೋಗಬೇಕಾಗುತ್ತದೆ ವಿನಾ ಅಭಿವೃದ್ಧಿ ಕೆಲಸ ಮಾಡಲು ಸಾಧ್ಯವಾಗುವುದಿಲ್ಲ. ಎಲ್ಲರನ್ನೂ ಸಂಭಾಳಿಸಿಕೊಂಡು ಹೋಗುವುದೇ ಒಂದು ದೊಡ್ಡ ಸವಾಲು' ಎಂದರು.

ನಾವು ವಿರೋಧ ಪಕ್ಷವಾಗಿ ಆಡಳಿತ ಪಕ್ಷದ ವೈಫಲ್ಯವನ್ನು ಜನರ ಮುಂದೆ ಬಿಚ್ಚಿಡುವ ಕೆಲಸ ಮಾಡುತ್ತೇವೆ. ಸಿದ್ದರಾಮಯ್ಯನವರ ಸರ್ಕಾರ ಇದ್ದಾಗ 40 ಪರ್ಸೆಂಟ್ ಕಮಿಷನ್ ಇತ್ತು. ಈಗ ಶಿವಕುಮಾರ್ ಇದನ್ನೆಲ್ಲ ಸರಿಪಡಿಸುತ್ತಾರೆ ಕಾದು ನೋಡಬೇಕು' ಎಂದರು.

ಯತ್ನಾಳ್ ಅಪಪ್ರಚಾರದ ವಿಚಾರಕ್ಕೆ ಪ್ರತಿಕ್ರಿಯಿಸಿ, 'ಕೆಲವರಿಗೆ ನನ್ನ ಹೆಸರು ಹೇಳಿಕೊಂಡು ಪ್ರಚಾರ ಪಡೆಯುವ ಹುಚ್ಚು. ಅಂತಹವರ ಬಗ್ಗೆ ನಾನು ಮಾತನಾಡಲ್ಲ' ಎಂದರು.

ರಾಜ್ಯಸಭೆ ಟಿಕೆಟ್ ಅನ್ನು ದೇವೇಗೌಡರು ಅಥವಾ ಸುಮಲತಾ ಇಬ್ಬರಲ್ಲಿ ಯಾರಿಗೆ ಕೊಡುತ್ತಾರೆ ಎಂಬ ಮಾಧ್ಯಮದವರ ಪ್ರಶ್ನೆಗೆ, 'ಹೈಕಮಾಂಡ್ ತೀರ್ಮಾನಿಸುತ್ತದೆ' ಎಂದು ಚುಟುಕಾಗಿ ಉತ್ತರಿಸಿದರು.

### ದಯಾನಂದರೆಡ್ಡಿ ಅಪಹರಣ ಪ್ರಕರಣ: ನಾಲ್ವರ ಬಂಧನ

**ಬೆಂಗಳೂರು, ಜೂ.4:** ವಿಧಾನ ಪರಿಷತ್ ಮಾಜಿ ಸದಸ್ಯ ದಯಾನಂದ್ ರೆಡ್ಡಿ ಅವರನ್ನು ಅಪಹರಿಸಿ, ಹಣಕ್ಕಾಗಿ ಬೇಡಿಕೆ ಇಟ್ಟಿದ್ದ ಪ್ರಕರಣಕ್ಕೆ ಸಂಬಂಧಿಸಿ ದಂತೆ ಪೊಲೀಸರು ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.



ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅನೇಕಲ್ ತಾಲೂಕಿನ ಹುಸ್ಕೂರು ಬಳಿ ಈ ಘಟನೆ ನಡೆದಿತ್ತು. ತಡರಾತ್ರಿ ಗೋಲ್ಡ್ ಕಾಯಿನ್ ಕ್ಲಬ್‌ನಿಂದ ಹೊರಬರುತ್ತಿದ್ದ ದಯಾನಂದರೆಡ್ಡಿ ಅವರನ್ನು ದುಷ್ಕರ್ಮಿಗಳು ಅಡ್ಡಗಟ್ಟಿ, ಸಿನಿಮೀಯ ಶೈಲಿಯಲ್ಲಿ ಅಪಹರಣ ಮಾಡಿದ್ದರು. ಆರೋಪಿಗಳು ಉಡುಗೊರೆ (ಗಿಫ್ಟ್) ನೀಡುವುದಾಗಿ ನೆಪವೊಡ್ಡಿ ಕಾರಿನ ಬಳಿ ತೆರಳಿ, ಒಳಗೆ ನುಗ್ಗಿದ್ದಾರೆ. ನಂತರ ಗನ್ ತೋರಿಸಿ ಬೆದರಿಸಿ, ಅವರನ್ನು ಒತ್ತೆಯಾಳಾಗಿ ಇರಿಸಿಕೊಂಡಿದ್ದರು. ಆರೋಪಿಗಳು 3 ಕೋಟಿ ರೂಪಾಯಿಗೆ ಬೇಡಿಕೆಯಿಟ್ಟಿದ್ದರು. ಕುತ್ತಿಗೆಗೆ ಗನ್ ಇಟ್ಟು, ನಿನ್ನನ್ನು ಕೊಲ್ಲಲು 10 ಕೋಟಿ ಸುಫಾರಿ ನೀಡಿದ್ದಾರೆ ಎಂದು ಪ್ರಾಣ ಬೆದರಿಕೆ ಹಾಕಿದ್ದರು. ನಂತರದ ಮಾತುಕತೆಯಲ್ಲಿ ಹಣದ ಬೇಡಿಕೆಯನ್ನು 2 ಕೋಟಿಗೆ ಇಳಿಸಲಾಗಿತ್ತು. ಆರೋಪಿಗಳು ಮುಂಜಾನೆ 4 ಗಂಟೆ ಸುಮಾರಿಗೆ ದಯಾನಂದರೆಡ್ಡಿ ಅವರನ್ನು ಬಿಟ್ಟು ಕಳುಹಿಸಿದ್ದರು. ಕಾರ್ಯಾಚರಣೆ ನಡೆಸಿದ ಅತ್ತಿಬೆಲೆ ಪೊಲೀಸರು ತೀವ್ರ ಶೋಧ ನಡೆಸಿ, ಕೇರಳ ಮೂಲದ ರೋಮಿಯೋ, ಪ್ರವೀಣ್, ಆಶಿಕ್ ಸೇರಿದಂತೆ ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.

### ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಎಚ್ಚರಿಕೆ

# ಮಾನ್ಯತೆ ಇಲ್ಲದೆ ದಾಖಲಾತಿ ಆರಂಭಿಸಿದ ಶಾಲೆಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ

**ಬೆಂಗಳೂರು, ಜೂ.4;** ಸರ್ಕಾರದ ಅನುಮತಿ ಪಡೆಯದೇ, ನ್ಯಾಯಾಲಯದ ಆದೇಶಕ್ಕೂ ಗೌರವ ನೀಡದೇ ಥಣಿಸಂದ್ರದ ಜಾಮಿಯ ಮೊಹಮ್ಮದೀಯ ಮನ್ಸೂರ ಶಿಕ್ಷಣ ಸಂಸ್ಥೆಯಲ್ಲಿ 2026–27ನೇ ಸಾಲಿಗೆ ಆರಂಭಿಸಿರುವ 6ರಿಂದ 8 ನೇ ತರಗತಿ ದಾಖಲಾತಿ ಪ್ರಕ್ರಿಯೆ ಸ್ಥಗಿತಗೊಳಿಸದಿದ್ದರೆ ಕ್ರಿಮಿನಲ್ ಮೊಕದ್ದಮೆ ಹೂಡುವುದಾಗಿ ಶಾಲಾ ಶಿಕ್ಷಣ ಇಲಾಖೆ ಎಚ್ಚರಿಕೆ ನೀಡಿದೆ.

ಕರ್ನಾಟಕ ಸರ್ಕಾರ
ಶಾಲಾ ಶಿಕ್ಷಣ ಇಲಾಖೆ

ಈ ಕುರಿತು ಜಾಮೀಯ ಮೊಹಮ್ಮದೀಯ ಮನ್ಸೂರ ಶಿಕ್ಷಣ ಸಂಸ್ಥೆಗೆ ಶಾಲಾ ಶಿಕ್ಷಣ ಇಲಾಖೆ ಎರಡನೇ ಬಾರಿ ನೋಟೀಸ್ ಜಾರಿ ಮಾಡಿ ಎಚ್ಚರಿಸಿದೆ. ಪದೇ ಪದೇ ನಿಯಮ ಉಲ್ಲಂಘಿಸುತ್ತಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದು, ಕೂಡಲೇ ಶಾಲಾ ದಾಖಲಾತಿ ಪ್ರಕ್ರಿಯೆ ಸ್ಥಗಿತಗೊಳಿಸುವಂತೆ ಕಟ್ಟುನಿಟ್ಟಿನ ಆದೇಶ ನೀಡಿದೆ. ಆಡಳಿತ ಮಂಡಳಿ ವಿರುದ್ಧ ಅಬ್ದುಲ್ ರಹೀಮ್ ಎಂಬುವರು ಶಿಕ್ಷಣ ಇಲಾಖೆಗೆ ದೂರು ನೀಡಿದ್ದರು. ಅದರಂತೆ ಕೆ.ಆರ್.ಪುರಂನ ಕ್ಷೇತ್ರ ಶಿಕ್ಷಣಾಧಿಕಾರಿಗಳು ನೋಟೀಸ್ ನೀಡಿದ್ದಾರೆ.

ಮುಂಬಯಿ ಮಾಲೀಕತ್ವದ ದಿ ಅಲ್ ಜಾಮಿಯ ಮೊಹಮ್ಮದಿಯ ಎಜುಕೇಷನ್ ಸೊಸೈಟಿ ರಾಜ್ಯ ಪಠ್ಯಕ್ರಮ ಎಂದು ನಮೂದಿಸಿ 6 ರಿಂದ 8ನೇ ತರಗತಿಗೆ ದಾಖಲಾತಿ ಪ್ರವೇಶ ಎಂದು ಜಾಹಿರಾತು ನೀಡಿರುವುದು ನಿಯಮ ಬಾಹಿರವಾಗಿದೆ. ರಾಜ್ಯ ಪಠ್ಯಕ್ರಮದಲ್ಲಿ ಶಾಲೆ ನಡೆಸಲು ಶಿಕ್ಷಣ ಕಾಯ್ದೆ 30, 31 ರಂತೆ ನೋಂದಣಿ ಮತ್ತು ನಿಯಮ 36 ರಂತೆ ಮಾನ್ಯತೆ ಪಡೆದು ಶಾಲೆ ನಡೆಸಲು ಅವಕಾಶವಿದೆ. ಆದರೆ ಜಾಮಿಯ ಮಹಮ್ಮದಿಯ ಮನ್ಸೂರ ಹೆಸರಿನಲ್ಲಿ ಇಲಾಖೆಯಿಂದ ಶಿಕ್ಷಣ ಕಾಯ್ದೆ ನಿಯಮಾನುಸಾರ ಅನುಮತಿ ಪಡೆಯದೇ ಜೂನ್‌ನಿಂದ ದಾರ್ಮಿಕ ಶಿಕ್ಷಣ ಮತ್ತು ರಾಜ್ಯ ಪಠ್ಯಕ್ರಮ ಶಿಕ್ಷಣ ಎಂದು ಅನಧಿಕೃತವಾಗಿ ದಾಖಲಾತಿ ಪ್ರಕ್ರಿಯೆ ಆರಂಭಿಸಿರುವುದು ಕಂಡು ಬಂದಿದೆ. ಕೂಡಲೇ ಜಾಹಿರಾತು ರದ್ದುಪಡಿಸಬೇಕು. ಇಲ್ಲವಾದಲ್ಲಿ ಇದು ಅನಧಿಕೃತ ಶಾಲೆಯೆಂದು ಆಡಳಿತ ಮಂಡಳಿ ಮತ್ತು ಶಾಲಾ ಆಡಳಿತಾತ್ಮಕ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಿಮಿನಲ್ ಮೊಕದ್ದಮೆ ಹೂಡಲು ಕ್ರಮವಹಿಸಲಾಗುವುದು ಎಂದು ನೋಟೀಸ್‌ನಲ್ಲಿ ತಿಳಿಸಿದೆ.

### ಬಿಟ್‌ಕಾಯಿನ್ ಹಗರಣದ ಪ್ರಮುಖ ಆರೋಪಿ ಶ್ರೀಕಿ ವಿರುದ್ಧದ ಇ.ಡಿ. ತನಿಖೆಯಲ್ಲಿ ಬಹಿರಂಗ

# ಆರೋಪಿ ಸ್ಥಾನದಲ್ಲಿದ್ದರೂ ನಿಲ್ಲದ ಹ್ಯಾಕಿಂಗ್ ಚಟುವಟಿಕೆ

**ಬೆಂಗಳೂರು, ಜೂ.4:** ದೇಶಾದ್ಯಂತ ಭಾರಿ ಸಂಚಲನ ಸೃಷ್ಟಿಸಿರುವ ಬಹುಕೋಟಿ ಬಿಟ್‌ಕಾಯಿನ್ ಹಗರಣದ ಮುಖ್ಯ ಆರೋಪಿ, ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ, ತನ್ನ ವಿರುದ್ಧ ಹಲವು ಎಫ್‌ಐಆರ್ ಹಾಗೂ ಚಾರ್ಜ್‌ಶೀಟ್ ಗಳು ದಾಖಲಾಗಿದ್ದರೂ ಹ್ಯಾಕಿಂಗ್ ಚಟುವಟಿಕೆಗಳನ್ನು ನಿರಂತರವಾಗಿ ಮುಂದುವರಿಸಿರುವುದು ಜಾರಿ ನಿರ್ದೇಶನಾಲಯದ ತನಿಖೆಯಿಂದ ಬಹಿರಂಗವಾಗಿದೆ.

ವೆಬ್‌ಸೈಟ್ ಹ್ಯಾಕಿಂಗ್, ಕ್ರಿಪ್ಟೋ ಆಸ್ತಿಗಳ ಕಳವು, ವಂಚನೆ, ಸುಲಿಗೆ ಹಾಗೂ ಅಕ್ರಮ ಹಣ ವರ್ಗಾವಣೆ ಸೇರಿ ಹಲವು ಗಂಭೀರ ಅಪರಾಧಗಳಲ್ಲಿ ಶ್ರೀಕಿ ಭಾಗಿಯಾಗಿದ್ದಾನೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಶ್ರೀಕಿಯ ಆಪ್ತ ಸಹಚರ ಹಾಗೂ ಕ್ರಿಪ್ಟೋ ವ್ಯಾಪಾರಿಯಾಗಿರುವ ರಾಬಿನ್ ಖಂಡೇಲ್‌ವಾಲ್ ಅವರೊಂದಿಗೆ ನಡೆಸಿದ ವಾಟ್ಸ್‌ಆಪ್ ಸಂಭಾಷಣೆಗಳಲ್ಲಿ ಹಲವು ಮಹತ್ವದ ಮಾಹಿತಿಗಳು ಪತ್ತೆಯಾಗಿವೆ. ವಿದೇಶಿ ಸಂಸ್ಥೆಗಳಿಂದ ಇ–ಸಿಮ್‌ಗಳನ್ನು ಖರೀದಿಸಿರುವುದು, ಜೊತೆಗೆ ಪ್ರೋಟಾನ್ ವಿಪಿಎನ್ ಸೇರಿದಂತೆ ವಿವಿಧ ಸಾಫ್ಟ್‌ವೇರ್ ಸೇವೆಗಳ ಚಂದಾದಾರಿಕೆ ಪಡೆದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಇತ್ತೀಚೆಗೆ ಜಾರಿ ನಿರ್ದೇಶನಾಲಯ ಬಂಧನದ ವೇಳೆ ಶ್ರೀಕಿಯಿಂದ ವಶಪಡಿಸಿಕೊಂಡ ಮೊಬೈಲ್ ಫೋನ್ ಪರಿಶೀಲನೆಯಿಂದ ಈ ಮಾಹಿತಿಗಳು ಲಭ್ಯವಾಗಿವೆ. ವಾಟ್ಸ್‌ಆಪ್ ಚಾಟ್‌ಗಳ ಪ್ರಕಾರ, ಶ್ರೀಕಿಗಾಗಿ ರಾಬಿನ್ ಖಂಡೇಲ್ವಾಲ್ ಈ ಸೇವೆಗಳನ್ನು ಖರೀದಿಸಿದ್ದರು ಎನ್ನಲಾಗಿದೆ. ಆದರೆ, ಈ ಸೇವೆಗಳಿಗಾಗಿ ವಿದೇಶಿ ಸಂಸ್ಥೆಗಳಿಗೆ ಹಣವನ್ನು ಹೇಗೆ ಪಾವತಿಸಲಾಯಿತು ಹಾಗೂ ಅದರ ಉದ್ದೇಶವೇನು ಎಂಬ ಪ್ರಶ್ನೆಗೆ ಸಂಬಂಧಿಸಿದಂತೆ ಶ್ರೀಕಿ ಮತ್ತು ಖಂಡೇಲ್ವಾಲ್ ಇಡಿ ಮುಂದೆ ಪರಸ್ಪರ ವಿರುದ್ಧ ಹೇಳಿಕೆಗಳನ್ನು ನೀಡಿದ್ದಾರೆ. ವಿದೇಶಿ ಸಂಸ್ಥೆಗಳಿಗೆ ಹಣ ಪಾವತಿಸಿದ ಬಗ್ಗೆ ಸಮರ್ಪಕ ವಿವರ ನೀಡಲು ಇಬ್ಬರೂ ವಿಫಲರಾಗಿದ್ದಾರೆ ಎಂದು ತನಿಖಾ ಅಧಿಕಾರಿಗಳು ತಿಳಿಸಿದ್ದಾರೆ.



ಇದೇ ವೇಳೆ ತನಿಖೆಯಲ್ಲಿ ಮತ್ತೊಂದು ಮಹತ್ವದ ಅಂಶ ಬೆಳಕಿಗೆ ಬಂದಿದ್ದು, ಶ್ರೀಕಿ ಅಮೆಜಾನ್ ವೆಬ್ ಸೇವೆಗಳು ಕ್ಲೌಡ್ ಸರ್ವರ್‌ಗಳನ್ನು ಬಳಸುತ್ತಿದ್ದನೆಂದು ತಿಳಿದುಬಂದಿದೆ. ಅಲ್ಲದೆ, ಹ್ಯಾಕಿಂಗ್ ಮೂಲಕ ಕಳವು ಮಾಡಿದ್ದ ಕ್ರಿಪ್ಟೋ ಆಸ್ತಿಗಳನ್ನು ವಿದೇಶಿ ಕ್ರಿಪ್ಟೋ ವಿನಿಮಯ ವೇದಿಕೆಗಳ ಮೂಲಕ ಮಾರಾಟ ಮಾಡಿ ಅಕ್ರಮ ಆದಾಯವನ್ನು ಮರೆಮಾಚುತ್ತಿದ್ದ ಎಂದು ಇಡಿ ಹೇಳಿದೆ.

ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ನಡೆದ ತನಿಖೆಯಲ್ಲಿ, ಹ್ಯಾಕಿಂಗ್ ಮೂಲಕ ಕಳವು ಮಾಡಿದ ಬಿಟ್ಕಾಯಿನ್ ಮತ್ತು ಇತರ ಕ್ರಿಪ್ಟೋ ಆಸ್ತಿಗಳನ್ನು ಶ್ರೀಕಿ ವೈಯಕ್ತಿಕ ಉದ್ದೇಶಗಳಿಗೆ ಬಳಸಿದ್ದಾನೆ ಎಂಬುದು ದೃಢಪಟ್ಟಿದೆ. ಆನ್‌ಲೈನ್ ಬೆಟ್ಟಿಂಗ್, ವಿದೇಶ ಪ್ರವಾಸ, ಐಷಾರಾಮಿ ಹೋಟೆಲ್‌ಗಳಲ್ಲಿ ವಾಸ್ತವ್ಯ, ಕ್ಯಾಸಿನೊ ಪಾವತಿಗಳು ಹಾಗೂ ಖಾಸಗಿ ವಿಮಾನ ಬಾಡಿಗೆಗೆ ಈ ಹಣವನ್ನು ಬಳಸಲಾಗಿತ್ತು ಎಂದೂ ಆರೋಪಿಸಿದೆ.

2017ರಲ್ಲಿ ತುಮಕೂರಿನ ಹೊಸಬಡಾವಣೆ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ಕಳವು ಮಾಡಲಾದ ಕ್ರಿಪ್ಟೋ ಆಸ್ತಿಗಳ ಮಾರಾಟದಿಂದ ಬಂದ ಸುಮಾರು 3.34 ಕೋಟಿ ರೂ.ಗಳನ್ನು ಶ್ರೀಕಿ ಮತ್ತು ಆತನ ಸಹಚರರು ವೈಯಕ್ತಿಕ ಲಾಭಕ್ಕಾಗಿ ಬಳಸಿರುವುದಾಗಿ ಸಿಐಡಿ ನಡೆಸಿದ ಫೊರೆನ್ಸಿಕ್ ಆಡಿಟ್ ವರದಿ ತಿಳಿಸಿದೆ. ಈ ವರದಿಯನ್ನು ಇ.ಡಿ. ತನ್ನ ತನಿಖೆಯಲ್ಲಿ ಬಳಸಿಕೊಂಡಿದೆ. ಫೊರೆನ್ಸಿಕ್ ವರದಿ ಪ್ರಕಾರ, ರಾಬಿನ್ ಖಂಡೇಲ್ವಾಲ್ 76.044 ಬಿಟ್ಕಾಯಿನ್ (ಅಂದಿನ ಮೌಲ್ಯ ಸುಮಾರು ರೂ.3.35 ಕೋಟಿ) ಹಾಗೂ 100 ಎಥೀರಿಯಂ (ಸುಮಾರು ರೂ.50.34 ಲಕ್ಷ) ಪಡೆದಿದ್ದಾನೆ. ಮೂರು ವರ್ಷಗಳ ಅವಧಿಯಲ್ಲಿ ಖಂಡೇಲ್ವಾಲ್, ಶ್ರೀಕಿ ಸೂಚಿಸಿದ್ದ ವಿವಿಧ ಖಾತೆಗಳಿಗೆ ಸುಮಾರು ರೂ.3.85 ಕೋಟಿ ವರ್ಗಾವಣೆ ಮಾಡಿರುವುದು ಪತ್ತೆಯಾಗಿದೆ., 2018ರಲ್ಲಿ ಆನ್‌ಲೈನ್ ಗೇಮಿಂಗ್ ವೇದಿಕೆ ಪೋಕರ್‌ಬಾಜಿ ವೆಬ್‌ಸೈಟ್ ಹ್ಯಾಕ್ ಮಾಡಲಾಗಿದ್ದು, ಸುಮಾರು 70 ಲಕ್ಷ ರೂ. ಕಳವು ಮಾಡಲಾ ಗಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಬಳಿಕ ಆ ಸಂಸ್ಥೆಯ ಮಾಲೀಕರಿಂದ 2 ಕೋಟಿ ರೂ. ಸುಲಿಗೆ ಮಾಡಲು ಈ ಹ್ಯಾಕಿಂಗ್ ಅನ್ನು ಬಳಸಲಾಗಿತ್ತು ಎಂದು ರಾಬಿನ್ ಖಂಡೇಲ್ವಾಲ್ ಇ.ಡಿ. ಎದುರು ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ವಿಚಾರವನ್ನು ಶ್ರೀಕಿಯೂ ಒಪ್ಪಿಕೊಂಡಿದ್ದಾನೆ ಎಂದು ಇಡಿ ತಿಳಿಸಿದೆ.

### ನಬಾರ್ಡ್ ನೆರವಿನ ಕಡಲೇಕಾಯಿ ಮೌಲ್ಯವರ್ಧನೆ ಘಟಕ ಉದ್ಘಾಟನೆ

# ಯಾದಗಿರಿ ಜಿಲ್ಲೆಯ ಸಾಮಾಜಿಕ-ಆರ್ಥಿಕ ಸೂಚ್ಯಂಕಕ್ಕೆ ನಿರ್ಮಲಾ ಸೀತಾರಾಮನ್ ಕಳವಳ

**ಯಾದಗಿರಿ, ಜೂ.4:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಗುರುವಾರ ಕರ್ನಾಟಕದ ಯಾದಗಿರಿ ಜಿಲ್ಲೆಯ ಕಳಪೆ ಸಾಮಾಜಿಕ-ಆರ್ಥಿಕ ಸೂಚ್ಯಂಕಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಮಹಿಳಾ ಸಾಕ್ಷರತಾ ಪ್ರಮಾಣ ಕಡಿಮೆಯಾಗಿರುವುದು, ಬಹು ಆಯಾಮದ ಬಡತನದ ಪ್ರಮಾಣ ಹೆಚ್ಚಿರುವುದು, ರಾಜ್ಯದ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಕೊನೆಯ ಸ್ಥಾನದಲ್ಲಿರುವುದು ಹಾಗೂ ತಲಾದಾಯ ಅತಿ ಕಡಿಮೆ ಇರುವುದು ಆತಂಕಕಾರಿ ಸಂಗತಿಗಳಾಗಿವೆ ಎಂದು ಹೇಳಿದರು.

ಕರ್ನಾಟಕದಿಂದ ರಾಜ್ಯಸಭಾ ಸದಸ್ಯೆಯಾಗಿರುವ ಸೀತಾರಾಮನ್, ಯಾದಗಿರಿಗೆ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ಥಳೀಯ ಆಡಳಿತದಿಂದ ತುರ್ತು ಮತ್ತು ವಿಶೇಷ ಗಮನದ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಯಾದಗಿರಿಯಲ್ಲಿ ಸಂಪೂರ್ಣವಾಗಿ ಮಹಿಳೆಯರೇ ನಿರ್ವಹಿಸುತ್ತಿರುವ ನಬಾರ್ಡ್ ನೆರವಿನ ಕಡಲೆಕಾಯಿ ಮೌಲ್ಯವರ್ಧನೆ ಘಟಕವನ್ನು ಉದ್ಘಾಟಿಸಿದ ಬಳಿಕ ಮಾತನಾಡಿದ ಅವರು, 'ಯಾದಗಿರಿ ಹಾಗೂ ಪಕ್ಕದ ರಾಯಚೂರು ಜಿಲ್ಲೆಗಳನ್ನು "ಆಕಾಂಕ್ಷಿ ಜಿಲ್ಲೆಗಳು" (Aspirational Districts) ಎಂದು ಗುರುತಿಸಲಾಗಿದೆ. ಏಕೆಂದರೆ ಅಭಿವೃದ್ಧಿಯ ಫಲಗಳು ರಾಜ್ಯದ ಇತರ ಭಾಗಗಳಷ್ಟು ವೇಗವಾಗಿ ಈ ಪ್ರದೇಶಗಳಿಗೆ ತಲುಪಿಲ್ಲ. ಈ ಅಂತರವನ್ನು ನಿವಾರಿಸಲು ಎಲ್ಲ ಹಂತದ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡಬೇಕು' ಎಂದು ಹೇಳಿದರು.

ಕರ್ನಾಟಕದ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಯಾದಗಿರಿ ಯಾವ ಸ್ಥಾನದಲ್ಲಿದೆ ಗೊತ್ತೇ. ಅದನ್ನು ನೋಡಿದರೆ ನನ್ನ ಕಣ್ಣಲ್ಲಿ ನೀರು ಬರುತ್ತದೆ. ಮೊದಲನೆಯದು, ಎರಡನೆಯದು, ಮೂರನೆಯದು ಅಥವಾ ನಾಲ್ಕನೆಯದು ಅಲ್ಲ; ಅದು ಪಟ್ಟಿಯ ಕೊನೆಯ ಸ್ಥಾನದಲ್ಲಿದೆ. ಕರ್ನಾಟಕದ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಯಾದಗಿರಿ ಕೊನೆಯ ಸ್ಥಾನದಲ್ಲಿರುವುದು ನನಗೆ ತುಂಬಾ




ದುಃಖ ಉಂಟುಮಾಡುತ್ತದೆ," ಎಂದರು.

ಯಾದಗಿರಿ ಜನರ ತಪ್ಪೇನೂ ಇಲ್ಲ. ಕಳೆದ ಹಲವು ವರ್ಷಗಳಿಂದ ಸಮರ್ಪಕ ಅಭಿವೃದ್ಧಿ ಈ ಭಾಗಕ್ಕೆ ತಲುಪದಿರುವುದೇ ಇಂದಿನ ಪರಿಸ್ಥಿತಿಗೆ ಕಾರಣ. ದೇಶದ ಇತರ ಭಾಗಗಳಲ್ಲಿ ಹೆಣ್ಣುಮಕ್ಕಳು ಎಂಜಿನಿಯರ್‌ಗಳು, ಐಎಎಸ್ ಅಧಿಕಾರಿಗಳು ಹಾಗೂ ದೊಡ್ಡ ಕಂಪನಿಗಳ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವಾಗ, ಯಾದಗಿರಿ ಬಹಳ ಹಿಂದಿದೆ. ಯಾದಗಿರಿಯಲ್ಲಿ ಪ್ರತಿ 100 ಮಹಿಳೆಯರಲ್ಲಿ ಕೇವಲ 41 ಮಂದಿ ಮಾತ್ರ ಸಾಕ್ಷರರು ಅಥವಾ ಶಾಲೆ-ಕಾಲೇಜುಗಳಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆ. ಅಂತೆಯೇ ಮೂಲಸೌಕರ್ಯಗಳ ಕುರಿತು ಮಾತನಾಡಿದ ಅವರು, ಜಿಲ್ಲೆಯಲ್ಲಿ ಶಾಲೆಗಳಿದ್ದರೂ ಶಿಕ್ಷಕರಿಲ್ಲ, ಶೌಚಾಲಯಗಳ ಕೊರತೆ ಇದೆ ಮತ್ತು ಸಾಕಷ್ಟು ತರಗತಿ ಕೊಠಡಿಗಳೂ ಇಲ್ಲ. ಜಿಲ್ಲೆಯ ಬಡತನದ ಪರಿಸ್ಥಿತಿಯನ್ನೂ ಅವರು ಉಲ್ಲೇಖಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ಬಳಿಕ ಬಡತನವನ್ನು ಬಹುಆಯಾಮದ ಮಾನದಂಡಗಳ ಆಧಾರದ ಮೇಲೆ ಜಿಲ್ಲಾವಾರು ಅಳೆಯಲು ಆರಂಭಿಸಲಾಯಿತು. ವಿವಿಧ ಯೋಜನೆಗಳ ಮೂಲಕ ದೇಶದಾದ್ಯಂತ 25 ಕೋಟಿ ಜನರನ್ನು ಬಹುಆಯಾಮದ ಬಡತನದಿಂದ ಹೊರತರಲಾಗಿದೆ. ಆದರೂ ಈ ಎಲ್ಲ ಪ್ರಯತ್ನಗಳ ನಡುವೆಯೂ ಯಾದಗಿರಿ ಇನ್ನೂ ದೇಶದ ಅತ್ಯಂತ ಬಡ ಜಿಲ್ಲೆಗಳಲ್ಲಿ ಒಂದಾಗಿ ಉಳಿದಿದೆ ಎಂದರು.

ಕಡಲೆಕಾಯಿ ಸಂಸ್ಕರಣಾ ಘಟಕ ಸ್ಥಾಪನೆಯ ಉದ್ದೇಶವನ್ನು ವಿವರಿಸಿದ ಅವರು, ಯಾದಗಿರಿಯಲ್ಲಿ ವರ್ಷಕ್ಕೆ ಸುಮಾರು 22,500 ಮೆಟ್ರಿಕ್ ಟನ್ ಕಡಲೆಕಾಯಿ ಉತ್ಪಾದನೆಯಾಗುತ್ತಿದ್ದು, ಮೌಲ್ಯವರ್ಧನೆಗೆ ಉತ್ತಮ ಅವಕಾಶಗಳಿವೆ. ಈಗ ನಾವು ಕಡಲೆಕಾಯಿ ಹುರಿಯುವುದು, ಎಣ್ಣೆ ಉತ್ಪಾದಿಸುವುದು ಹಾಗೂ ಪೀನಟ್ ಬಟರ್ ಸೇರಿದಂತೆ ವಿವಿಧ ಉತ್ಪನ್ನಗಳನ್ನು ತಯಾರಿಸಬಲ್ಲ ಘಟಕವನ್ನು ಸ್ಥಾಪಿಸಿದ್ದೇವೆ. ಈ ಘಟಕವನ್ನು ಯಶಸ್ವಿಯಾಗಿ ನಿರ್ವಹಿಸುತ್ತಿರುವ ಪೆದ್ದಪಲ್ಲಿ ಮಹಿಳಾ ರೈತರ ಉತ್ಪಾದಕರ ಕಂಪನಿ ಕಾರ್ಯವನ್ನು ಶ್ಲಾಘಿಸಿದರು. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸ್ಥಾಪಿಸಲಾದ ಏಳು ಮೌಲ್ಯವರ್ಧನೆ ಘಟಕಗಳಲ್ಲಿ, ಯಾದಗಿರಿ ಘಟಕವನ್ನು ಮಾತ್ರ ಸಂಪೂರ್ಣವಾಗಿ ಮಹಿಳೆಯರೇ ನಿರ್ವಹಿಸುತ್ತಿದ್ದಾರೆ ಎಂದು ಅವರು ತಿಳಿಸಿದರು.

ಆದರೆ, ಘಟಕವನ್ನು ನಡೆಸುತ್ತಿರುವ ಮಹಿಳೆಯರು ರೈತರಿಂದ ನೇರವಾಗಿ ಕಡಲೆಕಾಯಿ ಖರೀದಿಸಲು ಸಮಸ್ಯೆ ಎದುರಿಸುತ್ತಿದ್ದಾರೆ ಎಂಬ ಮಾಹಿತಿ ತಮಗೆ ಲಭ್ಯವಾಗಿದೆ. ಮಾರುಕಟ್ಟೆ ಮತ್ತು ಮಂಡಿಗಳಿಂದ ಖರೀದಿಸಲು ಮಹಿಳೆಯರು ಪ್ರಯತ್ನಿಸುತ್ತಿದ್ದು, ಈ ಉದ್ದೇಶಕ್ಕಾಗಿ ನಬಾರ್ಡ್ ವಿಶೇಷ ಅಧಿಕಾರಿಯನ್ನೂ ನೇಮಿಸಿದೆ. ಆದರೂ ರೈತರಿಂದ ನೇರವಾಗಿ ಖರೀದಿಸುವಲ್ಲಿ ಮಧ್ಯವರ್ತಿಗಳ ಅಡ್ಡಿ ಎದುರಾಗುತ್ತಿದೆ. ಕಚ್ಚಾ ವಸ್ತುಗಳ ಖರೀದಿಯಲ್ಲಿ ಏಕೆ ಸಮಸ್ಯೆ ಎದುರಾಗುತ್ತಿದೆ ಎಂದು ಸ್ಥಳೀಯ ಆಡಳಿತವನ್ನು ಪ್ರಶ್ನಿಸಿದ ಅವರು, ಈ ಬಗ್ಗೆ ಹೊಣೆಗಾರಿಕೆ ನಿಭಾಯಿಸಬೇಕು ಎಂದು ಸೂಚಿಸಿದರು.

## ತಿಮರೋಡಿ ಗಡಿಪಾರು ಆದೇಶ ಪ್ರಶ್ನಿಸಿದ್ದ ಅರ್ಜಿ ವಜಾ

**ಬೆಳ್ತಂಗಡಿ, ಜೂ.4:** ಉಜಿರೆಯ ಮಹೇಶ್‌ಶೆಟ್ಟಿ ತಿಮರೋಡಿಯನ್ನು ರಾಯಚೂರಿನ ಮಾನ್ವಿಗೆ ಗಡಿಪಾರು ಮಾಡಲಾದ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ತಿಮರೋಡಿ ಪರ ವಕೀಲರು ಮೇಲ್ಮನವಿ ಸಲ್ಲಿಸಿದ್ದ ರಿಟ್ ಪಿಟಿಷನ್‌ನ್ನು ಕೋರ್ಟ್ ವಜಾಗೊಳಿಸಿದೆ. 4 ರಂದು ಹೈಕೋರ್ಟ್ ವಿಭಾಗೀಯ ಪೀಠ ವಜಾಗೊಳಿಸಿ ಆದೇಶಿಸಿದೆ.



ಮಹೇಶ್ ಶೆಟ್ಟಿ ತಿಮರೋಡಿ ಅವರು ಮೇಲ್ಮನವಿ ಸಲ್ಲಿಸಿದ್ದರು.

ಪುತ್ತೂರು ವಿಭಾಗಾಧಿಕಾರಿ (ಎಸಿ) ಅವರು ಮೂರನೇ ಬಾರಿಗೆ ಗಡಿಪಾರು ಮಾಡಿ ಆದೇಶ ಹೊರಡಿಸಿದ್ದರು. ಈ ಗಡಿಪಾರು ಆದೇಶವನ್ನು ಪ್ರಶ್ನೆ ಮಾಡಿ ತಿಮರೋಡಿ ಹೈಕೋರ್ಟ್ ಮೆಟ್ಟಿಲೇರಿದ್ದರು. ನ್ಯಾಯಾಲಯ ನಿಯಮಾವಳಿಗಳ ಪ್ರಕಾರ ಸರಕಾರದ ಮುಂದೆಯೇ ಮೇಲ್ಮನವಿ ಸಲ್ಲಿಸಿ ಕೊಳ್ಳುವಂತೆ ಸೂಚಿಸಿತ್ತು. ಏಕಸದಸ್ಯ ಪೀಠದ ತೀರ್ಪನ್ನು ಪ್ರಶ್ನೆ ಮಾಡಿ ಮೊದಲಿಗೆ ಈ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಎಸ್ ಸುನೀಲ್‌ದತ್ ಯಾದವ್ ಮತ್ತು ಎಸ್ ರಾಚಯ್ಯ ಅವರಿದ್ದ ರಜಾಕಾಲೀನ ವಿಭಾಗೀಯ ಪೀಠ ನಡೆಸಿತ್ತು. ಆಗ ತಿಮರೋಡಿ ಪರ ವಕೀಲರು ಈ ಪ್ರಕರಣವು ಸಂಪೂರ್ಣವಾಗಿ ರಾಜಕೀಯ ಪ್ರೇರಿತವಾಗಿದ್ದು, ಆಡಳಿತ ಯಂತ್ರ ದುರುಪಯೋಗಪಡಿಸಿಕೊಂಡು ಕಿರುಕುಳ ನೀಡಲಾಗುತ್ತಿದೆ ಎಂದು ವಾದ ಮಾಡಿ ತಡೆ ಕೋರಿದ್ದರು.ಸರಕಾರದ ಪರ ಅಡ್ವಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ ಅವರು ಆಕ್ಷೇಪದ ಬಳಿಕ, ತಾಂತ್ರಿಕ ಕಾರಣ ನೀಡಿ ರಜಾಕಾಲೀನ ಪೀಠ ತಡೆ ನೀಡಲು ನಿರಾಕರಣೆ ಮಾಡಿತ್ತು. ಇದೀಗ ಈ ಇಡೀ ಪ್ರಕರಣದ ಅಂತಿಮ ಹಂತವಾಗಿ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದ ವಿಭಾಗೀಯ ಪೀಠವು ಮಹೇಶ್ ಶೆಟ್ಟಿ ತಿಮರೋಡಿ ಅವರ ಮೇಲ್ಮನವಿ ಅರ್ಜಿಯನ್ನು ವಜಾ ಮಾಡಿದೆ. ಇದಕ್ಕೆ ಮೊದಲು ತಿಮರೋಡಿ ಪರ ವಕೀಲರ ವಾದಕ್ಕೆ ಆಕ್ಷೇಪ ವ್ಯಕ್ತ ಪಡಿಸಿದ ಮುಖ್ಯ ನ್ಯಾಯಮೂರ್ತಿಗಳು ಕ್ರಿಮಿನಲ್ ಮೊಕದ್ದಮೆಯಲ್ಲಿ ಖುಲಾಸೆಯಾಗಲು ಸಾಕ್ಷಿಗಳ ನ್ನು ಬೆದರಿಸಿ ಸಾಕ್ಷಿ ಹೇಳದಂತೆ ಮಾಡಿರುವುದು ಕಾರಣ ಇರಬಹುದು ಎಂದರು.

### ಯೋಜನೆಗೆ ಇಂದು ಚಾಲನೆ ನೀಡಲಿದ್ದಾರೆ ನಿರ್ಮಲಾ ಸೀತಾರಾಮನ್

## ಕೂಡ್ಲಿಗಿ ತಾಲೂಕಿನಲ್ಲಿ ಜಪಾನ್ ಶೈಲಿ ಮಿಯಾವಾಕಿ ಮಾದರಿ ಅರಣ್ಯ ನಿರ್ಮಾಣ

**ಹೊಸಪೇಟೆ, ಜೂ.4:** ರಾಜ್ಯದಲ್ಲೇ ಮೊದಲ ಬಾರಿಗೆ ಬೃಹತ್ ಪ್ರಮಾಣದ ಜಪಾನ್ ಶೈಲಿಯ ಮಿಯಾವಾಕಿ ಮಾದರಿಯ ದಟ್ಟ ಅರಣ್ಯ ನಿರ್ಮಾಣ ಯೋಜನೆಗೆ ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಚಿಕ್ಕಜೋಗಿಹಳ್ಳಿ ಗ್ರಾಮದಲ್ಲಿ ಈ ಮಹತ್ವಾಕಾಂಕ್ಷೆಯ ಪರಿಸರ ಅಭಿಯಾನಕ್ಕೆ ಶುಕ್ರವಾರ (ಜೂ.5) ಚಾಲನೆ ನೀಡಲಿದ್ದಾರೆ.

ಕೂಡ್ಲಿಗಿ ತಾಲ್ಲೂಕಿನ ಚಿಕ್ಕಜೋಗಿಹಳ್ಳಿ ಗ್ರಾಮದಲ್ಲಿ ಈ ಮಹತ್ವಾಕಾಂಕ್ಷಿ ಯೋಜನೆ ಆರಂಭವಾಗಲಿದ್ದು, ಮುಂದಿನ ಎರಡು ವರ್ಷಗಳಲ್ಲಿ ಮಿಯಾವಾಕಿ ವಿಧಾನದಲ್ಲಿ ಒಂದು ಲಕ್ಷ ಸಸಿಗಳನ್ನು ನೆಡುವ ಗುರಿ ಹೊಂದಲಾಗಿದೆ. ಕಡಿಮೆ ಜಾಗದಲ್ಲಿ ಅತಿ ವೇಗವಾಗಿ ದಟ್ಟ ಅರಣ್ಯ ಬೆಳೆಸುವ ಜಪಾನ್ ಮೂಲದ ಮಿಯಾವಾಕಿ ತಂತ್ರಜ್ಞಾನವನ್ನು ಈ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗುತ್ತಿದೆ.

ಯೋಜನೆಯ ಮೊದಲ ಹಂತದಲ್ಲಿ ತೋಟಗಾರಿಕಾ ಇಲಾಖೆಗೆ ಸೇರಿದ 10 ಎಕರೆಗೂ ಹೆಚ್ಚು ಪ್ರದೇಶದಲ್ಲಿ ಸುಮಾರು 15 ಸಾವಿರ ಸಸಿಗಳನ್ನು ನೆಡಲಾಗುತ್ತದೆ. ಇದಕ್ಕಾಗಿ ಭೂಮಿ ಸ್ವಚ್ಛಗೊಳಿಸುವುದು ಮತ್ತು ಗುಂಡಿ ತೋಡುವ ಕಾಮಗಾರಿ ಈಗಾಗಲೇ ಭರದಿಂದ ಸಾಗುತ್ತಿದೆ.ಈ ಯೋಜನೆಯ ಮುಖ್ಯ ಉದ್ದೇಶ ಕೂಡ್ಲಿಗಿ ತಾಲ್ಲೂಕಿನಲ್ಲಿರುವ ಬಂಜರು ಹಾಗೂ ಬಳಕೆಯಾಗದ ಭೂಮಿಯನ್ನು ಹಸಿರುಮಯಗೊಳಿಸುವುದಾಗಿದೆ.

ಸರ್ಕಾರಿ ಜಮೀನುಗಳ ಜೊತೆಗೆ ಆಸಕ್ತ ರೈತರ ಖಾಸಗಿ ಜಮೀನುಗಳಲ್ಲೂ ಮಿಯಾವಾಕಿ ಮಾದರಿಯ ಅರಣ್ಯ ಅಭಿವೃದ್ಧಿಗೆ ಅವಕಾಶ ಕಲ್ಪಿಸಲಾಗುತ್ತಿದೆ. ಯೋಜನೆಯಡಿ ಹುಣಸೆ, ಸೇಬು, ನೆಲ್ಲಿಕಾಯಿ, ನೇರಳೆ, ನಿಂಬೆ ಮತ್ತು ಇತರ ಸ್ಥಳೀಯ ಜಾತಿಯ ಸಸಿಗಳನ್ನು, ಬೇವು ಮತ್ತು ಹೊಂಗೆ ಸಸಿ ನೆಡಲಾಗುತ್ತದೆ. ಸ್ಥಳೀಯ ಪರಿಸರಕ್ಕೆ ಹೊಂದಿಕೊಳ್ಳುವ ಹಾಗೂ ದೀರ್ಘಕಾಲಿಕವಾಗಿ ಪರಿಸರ ಸಮತೋಲನ ಕಾಪಾಡುವ ಜಾತಿಗಳಿಗೆ ಆದ್ಯತೆ ನೀಡಲಾಗುತ್ತಿದೆ.

ಕೂಡ್ಲಿಗಿ ಶಾಸಕ ಎನ್.ಟಿ.ಶ್ರೀನಿವಾಸ್ ಮಾತನಾಡಿದ, ಮಿಯಾವಾಕಿ ಅರಣ್ಯ ಕೃಷಿ ಮಾದರಿಯು ಮಳೆ ಆಧಾರಿತ ಪ್ರದೇಶವಾದ ಕೂಡ್ಲಿಗಿಯಲ್ಲಿ ಹಸಿರು ವಾತಾವರಣ ನಿರ್ಮಿಸಲು ಸಹಕಾರಿ ಯಾಗಲಿದೆ. ಜೊತೆಗೆ ಬಳಕೆಯಾಗದ ಜಮೀನುಗಳನ್ನು ಪರಿಸರ ಸ್ನೇಹಿ ರೀತಿಯಲ್ಲಿ ಅಭಿವೃದ್ಧಿಪಡಿಸಿ, ಸುಸ್ಥಿರ ಕೃಷಿ ಪದ್ಧತಿಗಳನ್ನು ಉತ್ತೇಜಿಸಲು ನೆರವಾಗಲಿದೆ ಎಂದು ಹೇಳಿದ್ದಾರೆ.

## ಡಿ.ಕೆ.ಶಿ ಸಂಪುಟದ ಸಚಿವರನ್ನು ಅಭಿನಂದಿಸಿದ ಜೆ.ಎಸ್.ಆಂಜನೇಯುಲು, ವೆಂಕಟೇಶ್ ಹೆಗಡೆ





**ಬೆಂಗಳೂರು, ಜೂ.04.** ಬೆಂಗಳೂರಿನಲ್ಲಿ ಕಾಂಗ್ರೆಸ್‌ನ ಹಿರಿಯ ನಾಯಕ, ಅಂಬೇಡ್ಕರ್ ವಾದಿ ಕೆ.ಎಚ್.ಮುನಿಯಪ್ಪ ನೂತನ ಮುಖ್ಯಮಂತಿ ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲಿ ಸಚಿವರಾಗಿ ನೇಮಕ ಗೊಂಡಿದ್ದು, ಮತ್ತು ಹಿರಿಯ ಗಾಂಧಿವಾದಿ, ಕಾಂಗ್ರೆಸ್ ಧುರೀಣ, ಮುತ್ಸದ್ದಿ ರಾಜಕಾರಣಿ ಬಿ.ಕೆ. ಹರಿಪ್ರಸಾದ್ ರವರು ಕೆಪಿಪಿಸಿಗೆ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದು, ಕಾಂಗ್ರೆಸ್ ನ ಬೆಳವಣಿಗೆ ಮತ್ತು ರಾಜ್ಯದ ಅಭಿವೃದ್ಧಿಗೆ ಅತ್ಯಂತ ಸಹಕಾರಿ ಆಗಲಿದೆ.

ಈ ಇಬ್ಬರಿಗೆ ಸೂಕ್ತ ಸ್ಥಾನಮಾನ ನೀಡಿದ ಕಾಂಗ್ರೆಸ್ ನಾಯಕರು ಇದೀಗ ಮತ್ತೊಮ್ಮೆ ಕಾಂಗ್ರೆಸ್ ಹಿಂದುಳಿದ,ದಲಿತ ಪರ ಎಂಬುದನ್ನು ಸಾಬೀತು ಮಾಡಿದೆ. ಈ ಇಬ್ಬರು ನಾಯಕರುಗಳಿಗೆ ನಾವುಗಳು ಬುಡ ಅಧ್ಯಕ್ಷರಾದ ಜೆ.ಎಸ್.ಆಂಜನೇಯುಲು, ಕೆಪಿಸಿಸಿ ಮಾಧ್ಯಮ ವಕ್ತಾರ ಮತ್ತು ಕೆಪಿಸಿಸಿ ರಾಜ್ಯ ಸಂಯೋಜಕರು ಪ್ರಚಾರ ಸಮಿತಿಯು ವೆಂಕಟೇಶ್ ಹೆಗಡೆ, ಟಿ.ಆನಂದ್, ಅನಿಲ್, ನಿಂಬಗಲ್ ರಾಮಕೃಷ್ಣ, ಮುಂತಾದವರು ಅಭಿನಂದಿಸಿದ್ದಾರೆ.

## ಪ್ರಶಸ್ತಿಗಳು ಸಾಧಕರಿಗೆ ಸ್ಫೂರ್ತಿ ನೀಡುತ್ತವೆ: ಬಸವರಾಜ ದೇಶಮುಖ



**ಕಲಬುರಗಿ, ಜೂ. 4:** ಕನ್ನಡ ಕಲಿಯುವುದು ಮತ್ತು ಕಲಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ಸಿರಿಗನ್ನಡ ವೇದಿಕೆ ಆ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸುತ್ತಿದ್ದು, ಕನ್ನಡಕ್ಕಾಗಿ ಡಾ. ದೊಡ್ಡಪ್ಪ ಅಪ್ಪ ಹಾಗೂ ಡಾ. ಶರಣಬಸವಪ್ಪ ಅಪ್ಪ ಅವರ ಸೇವೆ ಅನುಕರಣೀಯವಾಗಿದೆ. ಇಂದು ಪ್ರಶಸ್ತಿ ಪುರಸ್ಕೃತರಿಗೆ ಸಂದ ಗೌರವವು ಅವರ ಸಾಧನೆಗೆ ಮತ್ತಷ್ಟು ಸ್ಫೂರ್ತಿಯಾಗಲಿದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಟ್ರಸ್ಟ್ ಕಾರ್ಯದರ್ಶಿ ಬಸವರಾಜ ದೇಶಮುಖ ಹೇಳಿದರು.

ನಗರದ ರಂಗಾಯಣ ಸಭಾಂಗಣದಲ್ಲಿ ಸಿರಿಗನ್ನಡ ವೇದಿಕೆ ಹಮ್ಮಿಕೊಂಡಿದ್ದ ಬುದ್ಧ-ಬಸವ-ಅಂಬೇಡ್ಕರ್ ಉಪನ್ಯಾಸ ಹಾಗೂ ತ್ರಿರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಸಮಾಜಕ್ಕೆ ಒಳ್ಳೆಯ ದಾರಿಯನ್ನು ತೋರಿದ ಮಹನೀಯರಾದ ಬುದ್ಧ, ಬಸವ ಮತ್ತು ಅಂಬೇಡ್ಕರ್ ಅವರ ತತ್ವಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ವಿಶೇಷ ಉಪನ್ಯಾಸ ನೀಡಿದ ಚಿಂತಕಿ ಡಾ. ಜಯದೇವಿ ಗಾಯಕವಾಡ ಅವರು, ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರ ತತ್ವಸಿದ್ಧಾಂತಗಳು ಇಂದಿನ ಸಮಾಜಕ್ಕೆ ಮಾದರಿಯಾಗಿವೆ. ಯುದ್ಧ, ಹಿಂಸೆ ಮತ್ತು ಅಶಾಂತಿಯಿಂದ ತಲ್ಲಣಗೊಂಡಿರುವ ಜಗತ್ತಿಗೆ ಅವರ ಚಿಂತನೆಗಳೇ ಉತ್ತರವಾಗಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಗವಿಸಿದ್ಧಪ್ಪ ಪಾಟೀಲ ಮಾತನಾಡಿ, ಸಿರಿಗನ್ನಡ ವೇದಿಕೆಯ ಚಟುವಟಿಕೆಗಳನ್ನು ವಿವರಿಸಿದರು. ಕನ್ನಡದ ಬೆಳವಣಿಗೆಯಲ್ಲಿ ದೊಡ್ಡಪ್ಪ ಅಪ್ಪ ಮತ್ತು ಶರಣಬಸವಪ್ಪ ಅಪ್ಪ ಅವರ ಕೊಡುಗೆ ಅಪಾರವಾಗಿದ್ದು, ಬುದ್ಧ, ಬಸವ ಹಾಗೂ ಅಂಬೇಡ್ಕರ್ ಅವರ ತತ್ವಗಳು ಎಲ್ಲ ಕಾಲಕ್ಕೂ ಪ್ರಸ್ತುತವಾಗಿವೆ ಎಂದರು.

ಬೇಲೂರು ಉರಿಲಿಂಗಪೆದ್ದಿ ಮಠದ ಡಾ. ಪಂಚಾಕ್ಷರಿ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಪ್ರಶಸ್ತಿ ಸ್ವೀಕರಿಸುವವರ ಮನಸ್ಸು ಮತ್ತು ಪ್ರಶಸ್ತಿ ನೀಡುವವರ ಕೈ ಎರಡೂ ಸ್ವಚ್ಛವಾಗಿದ್ದಾಗ ಮಾತ್ರ ಪ್ರಶಸ್ತಿಗೆ ಗೌರವ ಸಿಗುತ್ತದೆ. ಮಹಾತ್ಮರ ತತ್ವಗಳು ಯಾವುದೇ ಜಾತಿಗೆ ಸೀಮಿತವಾಗಿಲ್ಲ; ಅವು ವಿಶ್ವಶಾಂತಿ, ಸಮಾನತೆ ಮತ್ತು ಮಾನವೀಯತೆಯ ಸಂದೇಶಗಳಾಗಿವೆ ಎಂದು ಹೇಳಿದರು.

## ಮಣ್ಣಿನ ಫಲವತ್ತತೆ ಉಳಿಸಲು ರಸಗೊಬ್ಬರ ಬಳಕೆ ಕಡಿಮೆ ಮಾಡಿ: ತಿಮ್ಮಣ್ಣ

**ರಾಯಚೂರು, ಜೂ. 4:** ಶಿಫಾರಸು ಮಾಡಿದ ಪ್ರಮಾಣದಲ್ಲಿ ರಸಗೊಬ್ಬರ ಬಳಕೆ ಮಾಡಿ, ಮಣ್ಣಿನ ಫಲವತ್ತತೆ ಉಳಿಸಿ, ಪರಿಸರ ಮಾಲಿನ್ಯ ತಡೆಯಬೇಕು ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ತಿಮ್ಮಣ್ಣ ಹೇಳಿದರು.

ಜಿಲ್ಲೆಯ ಕಡಗಂದೊಡ್ಡಿ ಗ್ರಾಮದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ವಿಜ್ಞಾನ ಕೇಂದ್ರ, ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಕೋ ಆಪರೇಟಿವ್ ಲಿಮಿಟೆಡ್ ಆಶ್ರಯದಲ್ಲಿ 'ತೋಟಗಾರಿಕೆ ಬೆಳೆಗಳಲ್ಲಿ ರಸಗೊಬ್ಬರಗಳ ಸಮತೋಲಿತ ಬಳಕೆಯ ಜಾಗೃತಿ ಅಭಿಯಾನ' ಕಾರ್ಯಕ್ರಮದಲ್ಲಿ, ತೋಟಗಾರಿಕೆ ಬೆಳೆಗಳಿಗೆ ಸಾವಯವ ಇಂಗಾಲದ ಜೊತೆಗೆ ಸೂಕ್ಷ್ಮ ಪೋಷಕಾಂಶ ಜಿಂಕ್, ಕ್ಯಾಲ್ಸಿಯಂ, ಬೊರಾನ್ ಮತ್ತು ಮ್ಯಾಂಗನೀಸ್ ಬಹು ಮುಖ್ಯ. ಆದರೆ, ಅತಿಯಾದ ಸಾರಜನಕ, ರಂಜಕ ಹಾಗೂ



ರಾಯಚೂರು ಜಿಲ್ಲೆಯ ಕಡಗಂದೊಡ್ಡಿ ಗ್ರಾಮದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ವಿಜ್ಞಾನ ಕೇಂದ್ರ, ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಕೋ ಆಪರೇಟಿವ್ ಲಿಮಿಟೆಡ್ ಆಶ್ರಯದಲ್ಲಿ 'ತೋಟಗಾರಿಕೆ ಬೆಳೆಗಳಲ್ಲಿ ರಸಗೊಬ್ಬರಗಳ ಸಮತೋಲಿತ ಬಳಕೆಯ ಜಾಗೃತಿ ಅಭಿಯಾನ' ಕಾರ್ಯಕ್ರಮದಲ್ಲಿ ಕೃಷಿ ವಿಜ್ಞನ ಕೇಂದ್ರದ ಮುಖ್ಯಸ್ಥ ತಿಮ್ಮಣ್ಣ ಅವರು ಮಾತನಾಡಿದರು.

ಪೊಟಾಷ್ ಗೊಬ್ಬರಗಳ ಬಳಕೆಯಿಂದ ಖರ್ಚು ಜಾಸ್ತಿಯಾಗುತ್ತದೆ. ಮಣ್ಣಿನ ಆರೋಗ್ಯ ಹದಗೆಟ್ಟು ಮಣ್ಣಿನಲ್ಲಿನಲ್ಲಿರುವ ಸೂಕ್ಷ್ಮ ಪೋಷಕಾಂಶಗಳು ಗಿಡಗಳಿಗೆ ಸಿಗದೆ ಬೆಳವಣಿಗೆ ಕುಂಠಿತವಾಗುತ್ತದೆ ಎಂದರು.

ಜಂಟಿ ಕೃಷಿ ನಿರ್ದೇಶಕ ಪ್ರಕಾಶ್ ಚವಾಣ್ ಮಾತನಾಡಿ, ಜಿಲ್ಲೆಯಲ್ಲಿ ರಸಗೊಬ್ಬರದ ಕೊರತೆಯಿಲ್ಲ. ರೈತರು ಎದೆಗುಂದುವ ಅವಶ್ಯಕತೆ ಇಲ್ಲ. ಕೃಷಿ ಇಲಾಖೆ ವತಿಯಿಂದ ಉಚಿತವಾಗಿ ಮಣ್ಣು ಪರೀಕ್ಷೆ ಮಾಡಿಕೊಡಲಾಗುವುದು. ಪ್ರತಿಯೊಬ್ಬ ರೈತರು ಮಣ್ಣು ಪರೀಕ್ಷೆ ಮಾಡಿಸುವ ಮೂಲಕ ಮಣ್ಣು ಆರೋಗ್ಯ ಚೀಟಿ ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

ತೋಟಗಾರಿಕೆ ಸಹಾಯಕ ಅಧಿಕಾರಿ ಮಲ್ಲಿಕಾರ್ಜುನ ಬಿರಾದಾರ ಮಾತನಾಡಿ ಇಲಾಖೆಯಲ್ಲಿ ಲಭ್ಯವಿರುವ ಮ್ಯಾಂಗೊ ಸ್ಪೆಷಲ್ ಮತ್ತು ಇತರ ಅಣುಜೀವಿ ಗೊಬ್ಬರದ ಉತ್ಪನ್ನಗಳು, ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ಇಫ್ಕೋ ಕೋ ಆಪರೇಟಿವ್ ಸಂಸ್ಥೆಯ ಸಚಿನ್ ಗೌಡ ಅವರು ನ್ಯಾನೊ ಯೂರಿಯಾ ಮತ್ತು ನ್ಯಾನೊ ಡಿಎಪಿ ಗೊಬ್ಬರಗಳ ಸಮರ್ಪಕ ಬಳಕೆ, ಕೃಷಿ ಇಲಾಖೆಯ ಸಹಯೋಗದಲ್ಲಿ ನಡೆಸುತ್ತಿರುವ ಮಣ್ಣು ಆರೋಗ್ಯ ಅಭಿಯಾನದ ಕುರಿತು ಮಾಹಿತಿ ನೀಡಿದರು. ಸಹಾಯಕ ಕೃಷಿ ನಿರ್ದೇಶಕಿ ದೀಪ ಅವರು ಕೃಷಿ ಇಲಾಖೆಯ ಧನ ಧಾನ್ಯ ಯೋಜನೆ ಯಡಿಯಲ್ಲಿ ತೊಗರಿ ಬೀಜವನ್ನು ಉಚಿತವಾಗಿ ಕೊಡ ಲಾಗುವುದ. ರೈತರು ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ಹೆಸರು ನೋಂದಾಯಿಸಿ, ವಿವಿಧ ಯೋಜನೆಗಳ ಲಾಭ ಪಡೆಯಬೇಕು ಎಂದು ಮನವಿ ಮಾಡಿದರು.

### ಮನೆ ಮನೆಗೆ ಖುದ್ದಾಗಿ ಬಿಎಲ್‌ಓ ಭೇಟಿ: ವಿಶಿಷ್ಟ ಪ್ರಕ್ರಿಯೆ

## ಬಳ್ಳಾರಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಆರಂಭ: ಡಿಸಿ ನಾಗೇಂದ್ರ ಪ್ರಸಾದ್

**ಬಳ್ಳಾರಿ,ಜೂ.04.**ಭಾರತ ಚುನಾವಣಾ ಆಯೋಗದ ನಿರ್ದೇಶನ ದಂತೆ ಬಳ್ಳಾರಿ ಜಿಲ್ಲಾದ್ಯಂತ 2026ರ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಹೇಳಿದರು.



ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನೂ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಎಷ್ಟು ಮುಖ್ಯವೋ, ಅಷ್ಟೇ ಜವಾಬ್ದಾರಿಯುತವಾಗಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವುದು ಅಗತ್ಯವಾಗಿದೆ. ಅರ್ಹ ಮತದಾರರು ಯಾರೂ ಪಟ್ಟಿಯಿಂದ ಹೊರಗುಳಿಯದಂತೆ ಮತ್ತು ದೋಷರಹಿತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಉದ್ದೇಶದಿಂದ

ಜಿಲ್ಲೆಯಲ್ಲಿ 2026ರ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆಯ ಅಂಗವಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಪ್ರತಿಯೊಬ್ಬ ಮತದಾರರ ಮನೆಮನೆಗೂ ಕಡ್ಡಾಯವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಪ್ರತಿ ವರ್ಷ ಜನವರಿ 1ರಂದು ಮತದಾರರ ಪಟ್ಟಿಯನ್ನು ಪ್ರಕಟಿಸುತ್ತೇವೆ. ತದನಂತರ ಹೆಸರು ಸೇರ್ಪಡೆ (ನಮೂನೆ 6), ಕೈಬಿಡುವುದು (ನಮೂನೆ 7), ಸ್ಥಳಾಂತರ (ನಮೂನೆ 8) ಮತ್ತು ತಿದ್ದುಪಡಿ ಪ್ರಕ್ರಿಯೆಗಳು ನಿರಂತರವಾಗಿ ನಡೆಯುತ್ತವೆ. ಇದು ಸಾಮಾನ್ಯವಾಗಿದ್ದು, ಪ್ರಸಕ್ತ ನಡೆಯುತ್ತಿರುವ ವಿಶೇಷ ಸಮಗ್ರ ಪರಿಷ್ಕರಣೆ' (ಫೇಸ್-3) ಇದಕ್ಕಿಂತ ಸಂಪೂರ್ಣ ಭಿನ್ನವಾಗಿದೆ ಎಂದು ತಿಳಿಸಿದರು.

ಸಾಮಾನ್ಯ ಪರಿಷ್ಕರಣೆಯಲ್ಲಿ ಮನೆ ಮನೆಗೆ ಹೋಗುವುದಿಲ್ಲ. ಈ ವಿಶೇಷ ಅಭಿಯಾನದಲ್ಲಿ ನಮ್ಮ ಬೂತ್ ಮಟ್ಟದ ಅಧಿಕಾರಿಗಳು 1/1/2025ರ ಮತದಾರರ ಪಟ್ಟಿಯಲ್ಲಿರುವ ಪ್ರತಿಯೊಬ್ಬ ಮತದಾರರ ಮನೆಗೂ ಖುದ್ದಾಗಿ ಭೇಟಿ ನೀಡಿ, ವಿವರಗಳನ್ನು ಪರಿಶೀಲಿಸಿ ದೃಢೀಕರಿಸಲಿದ್ದಾರೆ ಎಂದು ವಿವರಿಸಿದರು.

ಜೂ.30 ರಿಂದ ಜುಲೈ 21ರ ವರೆಗೆ ಬಿಎಲ್‌ಓಗಳು ಮನೆಮನೆಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಂದರ್ಭದಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಿಂದ ನೀಡಿರುವ ಎರಡು ಪುಟಗಳ ಎನ್ಯುಮರೇಷನ್ ಫಾರ್ಮ್ (ನೋಂದಣಿ ನಮೂನೆ) ಅನ್ನು ಪ್ರತಿಯೊಬ್ಬ ಮತದಾರರಿಗೂ ತಲುಪಿಸಲಾಗುತ್ತದೆ. ಈ ಬಾರಿ ಇಂಗ್ಲೀಷ್ ಜೊತೆಗೆ ಕನ್ನಡದಲ್ಲೂ ಈ ಫಾರ್ಮ್ ಲಭ್ಯವಿರಲಿದೆ. ಮತದಾರರಿಂದ ಈ ಎರಡು ಅರ್ಜಿಗಳನ್ನು ಭರ್ತಿ ಮಾಡಿಸಿಕೊಂಡು, ಅದರಲ್ಲಿ ಒಂದನ್ನು ಬಿಎಲ್‌ಓ ವಾಪಸ್ ಪಡೆದರೆ, ಮತ್ತೊಂದಕ್ಕೆ ಸ್ವೀಕೃತಿ ಸಹಿ ಹಾಕಿ ಮತದಾರರ ಕೈಗೆ ನೀಡಲಿದ್ದಾರೆ. ಹೆಸರು ಬಿಟ್ಟು ಹೋಗಿರುವ ಅಥವಾ ತಪ್ಪುಗಳಾಗಿರುವ ಕುರಿತು ಮತದಾರರು ಆಕ್ಷೇಪಣೆ ಅವಧಿಯಲ್ಲಿ ಈ ಸ್ವೀಕೃತಿ ಪತ್ರದೊಂದಿಗೆ ಕ್ಲೈಮ್ ಮಾಡಬಹುದು. ಬಿಎಲ್‌ಓ ಆಪ್ ಮೂಲಕ ಇಆರ್‌ಓ (ಮತದಾರರ ನೋಂದಣಾಧಿಕಾರಿ) ಅವರಿಗೆ ವಿವರಗಳನ್ನು ಸಲ್ಲಿಸುವ ಸಂಪೂರ್ಣ ಜವಾಬ್ದಾರಿಯನ್ನು ಬಿಎಲ್‌ಓಗಳಿಗೆ ವಹಿಸಲಾಗಿದೆ ಎಂದರು.

## ಹೆಲ್ಮೆಟ್ ತಪಾಸಣೆ ತೀವ್ರ: 3 ದಿನಗಳಲ್ಲಿ 1,470 ಜನರಿಂದ 7.35 ಲಕ್ಷ ರೂ. ದಂಡ ಸಂಗ್ರಹ-ಎಸ್‌ಪಿ ಪನ್ನೇಕರ್

**ಬಳ್ಳಾರಿ, ಜೂ 04:** ರಸ್ತೆ ಅಪಘಾತಗಳಿಂದ ಉಂಟಾಗುವ ಸಾವು-ನೋವುಗಳನ್ನು ಕಡಿವೆ ,ಗೊಳಿಸುವ ಉದ್ದೇಶದಿಂದ ಜಿಲ್ಲೆಯಲ್ಲಿ ಹೆಲ್ಮೆಟ್ ಧಾರಣೆ ಕಡ್ಡಾಯಗೊಳಿಸಿರುವ ಪೊಲೀಸ್ ಇಲಾಖೆ ಕಳೆದ ಮೂರು ದಿನಗಳಿಂದ ವಿಶೇಷ ತಪಾಸಣಾ ಕಾರ್ಯಾಚರಣೆ ಯನ್ನು ನಡೆಸುತ್ತಿದ್ದು, ಹೆಲ್ಮೆಟ್ ಧರಿಸದೇ ವಾಹನ ಚಲಾಯಿಸುತ್ತಿದ್ದ 1,470 ದ್ವಿಚಕ್ರ ವಾಹನ ಸವಾರರಿಂದ ಒಟ್ಟು ?7 ಲಕ್ಷ 35 ಸಾವಿರ ದಂಡ ವಸೂಲಿ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ. ಪನ್ನೇಕರ್ ತಿಳಿಸಿದ್ದಾರೆ.

ಜಿಲ್ಲೆಯ ವಿವಿಧ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಪೊಲೀಸ್ ಸಿಬ್ಬಂದಿ ವಿಶೇಷ ತಪಾಸಣೆ ನಡೆಸುತ್ತಿದ್ದು, ಪ್ರಮುಖ ರಸ್ತೆ ಜಂಕ್ಷನ್‌ಗಳು, ವೃತ್ತಗಳು, ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಲ್ಲಿ ವಾಹನಗಳನ್ನು ತಡೆದು ಪರಿಶೀಲನೆ ಮಾಡಲಾಗುತ್ತಿದೆ. ಹೆಲ್ಮೆಟ್ ಧರಿಸದೇ ವಾಹನ ಚಲಾಯಿಸುತ್ತಿರುವ ಸವಾರರಿಗೆ ದಂಡ ವಿಧಿಸುವುದರ ಜೊತೆಗೆ ರಸ್ತೆ ಸುರಕ್ಷತೆ ಮತ್ತು ಜೀವ ರಕ್ಷಣೆಯ ಮಹತ್ವದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.

ಕಾರ್ಯಾಚರಣೆಯ ನಾಲ್ಕನೇ ದಿನವಾದ ಗುರುವಾರವೂ ಜಿಲ್ಲೆಯಾದ್ಯಂತ ತಪಾಸಣೆ ಮುಂದುವರಿದಿದೆ. ಕೆಲವು ಕಡೆಗಳಲ್ಲಿ ಹೆಲ್ಮೆಟ್ ಇಲ್ಲದೆ ಬಂದ ವಾಹನ ಸವಾರರಿಗೆ ದಂಡ ವಿಧಿಸುವುದರ ಜೊತೆಗೆ, ಮನೆ ಅಥವಾ ಅಂಗಡಿಯಿಂದ ಹೆಲ್ಮೆಟ್ ತಂದು ಧರಿಸಿಕೊಂಡ ಬಳಿಕವೇ ವಾಹನ ತೆಗೆದುಕೊಂಡು ಹೋಗಲು ಸೂಚನೆ ನೀಡಲಾಗುತ್ತಿದೆ. ಇದರಿಂದ ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತೆ ಕುರಿತು ಹೆಚ್ಚಿನ ಅರಿವು ಮೂಡುತ್ತಿ ರುವುದು ಕಂಡುಬರುತ್ತಿದೆ.

ಪೊಲೀಸರ ಕಟ್ಟುನಿಟ್ಟಿನ ಕ್ರಮದಿಂದಾಗಿ ಬಳ್ಳಾರಿ ನಗರದಲ್ಲಿ ಹೆಲ್ಮೆಟ್ ಮಾರಾಟವೂ ಗಣನೀಯವಾಗಿ ಹೆಚ್ಚಾಗಿದೆ. ಅನೇಕರು ಹೊಸದಾಗಿ ಹೆಲ್ಮೆಟ್ ಖರೀದಿಸಿ ತಪಾಸಣಾ ಕೇಂದ್ರಗಳಿಗೆ ಬಂದು ವಾಹನಗಳನ್ನು ವಾಪಸ್ ಪಡೆಯುತ್ತಿರುವ ದೃಶ್ಯಗಳು ಸಾಮಾನ್ಯವಾಗಿವೆ. ನಗರದ ಹೆಲ್ಮೆಟ್ ಅಂಗಡಿಗಳಲ್ಲಿ ಕಳೆದ ಕೆಲವು ದಿನಗಳಿಂದ



ಗ್ರಾಹಕರ ಸಂಖ್ಯೆ ಹೆಚ್ಚಾಗಿರುವುದಾಗಿ ವ್ಯಾಪಾರಿಗಳು ತಿಳಿಸಿದ್ದಾರೆ.ನಗರದ ಪ್ರಮುಖ ವೃತ್ತಗಳಾದ ಗಡಗಿ ಚೆನ್ನಪ್ಪ ವೃತ್ತ, ಹೆಚ್.ಆರ್. ಗವಿಯಪ್ಪ ವೃತ್ತ, ದುರ್ಗಮ್ಮ ದೇವಸ್ಥಾನ ವೃತ್ತ, ಎಸ್‌ಪಿ ಸರ್ಕಲ್ ಸೇರಿದಂತೆ ಹಲವೆಡೆ ನಡೆಸಿದ ಪರಿಶೀಲನೆಯಲ್ಲಿ, ಹಿಂದಿನ ದಿನಗಳಿಗೆ ಹೋಲಿಸಿದರೆ ಹೆಲ್ಮೆಟ್ ಧರಿಸುವವರ ಸಂಖ್ಯೆ ಹೆಚ್ಚಾಗಿರುವುದು ಕಂಡುಬಂದಿದೆ. ಪ್ರಸ್ತುತ ಶೇಕಡಾ 50ಕ್ಕೂ ಹೆಚ್ಚು ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸಿ ಸಂಚರಿಸುತ್ತಿರುವುದು ಪೊಲೀಸ್ ಇಲಾಖೆಯ ಗಮನಕ್ಕೆ ಬಂದಿದೆ.

ಆದರೆ ಮಹಿಳಾ ದ್ವಿಚಕ್ರ ವಾಹನ ಸವಾರರು ಹಾಗೂ ಹಿಂಬದಿ ಸವಾರರಲ್ಲಿ ಇನ್ನೂ ಹೆಲ್ಮೆಟ್ ಧಾರಣೆ ಪ್ರಮಾಣ ಕಡಿಮೆಯಿದ್ದು, ಈ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಾಹನ ಸವಾರರು ತಮ್ಮ ಸುರಕ್ಷತೆಯನ್ನು ಗಮನದಲ್ಲಿಟ್ಟು ಕೊಂಡು ನಿಯಮಿತವಾಗಿ ಗುಣಮಟ್ಟದ ಹೆಲ್ಮೆಟ್ ಧರಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಜಿಲ್ಲಾ ಪೊಲೀಸ್ ಇಲಾಖೆ ಮುಂದಿನ ದಿನಗಳಲ್ಲಿಯೂ ಹೆಲ್ಮೆಟ್ ತಪಾಸಣೆ ಮತ್ತು ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಮುಂದುವರಿಸಲಿದ್ದು, ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದೆ.

**ದಂಡ ವಿಧಿಸುವುದು ನಮ್ಮ ಉದ್ದೇಶವಲ್ಲ;** ಅಪಘಾತಗಳಲ್ಲಿ ಅಮೂಲ್ಯ ಜೀವಗಳನ್ನು ರಕ್ಷಿಸುವುದೇ ಮುಖ್ಯ ಉದ್ದೇಶ. ಪ್ರತಿಯೊಬ್ಬ ದ್ವಿಚಕ್ರ ವಾಹನ ಸವಾರರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸುರಕ್ಷಿತ ಪ್ರಯಾಣ ಮಾಡಬೇಕು" ಎಂದು ಎಸ್‌ಪಿ ಡಾ. ಸುಮನ್ ಡಿ. ಪನ್ನೇಕರ್ ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

# ತಮ್ಮ ಇಡೀ ಜೀವನವನ್ನೇ ಪಕ್ಷದಲ್ಲಿ ಕಳೆದರೂ, ಖರ್ಗೆಯನ್ನು ಸಿಎಂ ಮಾಡದ ಕಾಂಗ್ರೆಸ್: ಕೇಂದ್ರ ಸಚಿವ ರಾಮದಾಸ್ ಅಠಾವಳೆ

**ಕಲಬುರಗಿ, ಜೂ. 4:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಇಡೀ ಜೀವನವನ್ನೇ ಕಾಂಗ್ರೆಸ್ ಪಕ್ಷದಲ್ಲಿ ಕಳೆದಿದ್ದಾರೆ ಮತ್ತು ಗಾಂದಿ ಕುಟುಮಬದ ಸೇವೆಗೈದಿದ್ದಾರೆ. ಆದರೆ ಹಿಂದೆ ಹಲವಾರು ಅವಕಾಶಗಳಿದ್ದರೂ ಕಾಂಗ್ರೆಸ್ ಪಕ್ಷ ಅವರನ್ನು ಒಂದು ಮುಖ್ಯಮಂತ್ರಿ ಕೂಡ ಮಾಡಲಿಲ್ಲ ಎಂದು ಕೇಂದ್ರ ಸಾಮಾಜಿಕ ಸಬಲೀಕರಣ ಸಚಿವ ರಾಮದಾಸ್ ಅಠವಲೆ ಹೇಳಿದರು.



ಸುದ್ದಿಗಾರರೊಂದಿಗೆ, ಖರ್ಗೆ ಅವರನ್ನು ಸಿಎಂ ಮಾಡಲು ಸಾಕಷ್ಟು ಅವಕಶಗಳಿದ್ದವು. ಆದರೂ ಅವರನ್ನು ಮುಖ್ಯಮಂತ್ರಿ ಮಾಡಲಿಲ್ಲವೆಂದರೇನು? ಅವರಿಗೆ ಅರ್ಹತೆ ಇಲ್ಲವೇ? ಅನುಭವ ಇಲ್ಲವೇ? ಎಲ್ಲಾ ಇದ್ದು ಕಾಂಗ್ರೆಸ್ಸ್ ಮತ್ತು ಕಾಂಗ್ರೆಸ್ ಗಾಂಧಿ ಕುಟುಮಬದ ಸೇವೆ ಮಾಡಿಕೊಂಡು ಬಂದವರು. ಈಗಲೂ ಕಾಂಗ್ರೆಸ್ಸಿನ ಅತ್ಯುನ್ನತ ಪದವಿ ಎಐಸಿಸಿ ಅದ್ಯಕ್ಷರಾಗಿದ್ದರೂ ಕೂಡ, ಸಭೆ ಸಮಾರಂಭಗಳಲ್ಲಿ ಸೋನಿಯಾ ಮತ್ತು ರಾಹುಲ್, ಪ್ರಿಯಾಂಕಾ ವಾಡ್ರಾ ಅವರುಗಳು ಬಂದರೆ ತಮ್ಮ ಕುರ್ಚಿ ಬಿಟ್ಟು ಎದ್ದು ನಿಲ್ಲುವಂಥ ವಿಧೇತೆ ಗಾಂಧಿ ಕುಟುಂಬಕ್ಕೆ ತೋರುತ್ತ ಬಂದಿದ್ದಾರೆ. ವಯಸ್ಸು ಮತ್ತು ಅನುಭವ, ಹುದ್ದೆಯಲ್ಲಿ ಹಿರಿಯ ಸ್ಥಾನದಲ್ಲಿದ್ದರೂ ತಮಗಿಂತ ಕಿರಿಯರಾದ ಸೋನಿಯಾ,, ರಾಹುಲ್, ಪ್ರಿಯಾಂಕಾ ಬಂದಾಗ ಎದ್ದು ನಿಲ್ಲುವುದೆಂದರೇನು? ಇವರೇನು ಆ ಕುಟುಂಬದ ಸೇವಕರೇ? ಎಂದು ಪ್ರಸ್ನಿಸಿದ ಅವರು, ಗಾಂಧಿ ಕುಟುಂಬ ಇವರನ್ನು ಗುಲಾಮರಂತೆ ನಡೆಸಿ ಕೊಳ್ಳುತ್ತಿರುವುದು ಅತ್ಯಂತ ನೋವುಂಟು ಮಾಡುವಂಥದ್ದಾಗಿದ್ದು, ಅಂಬೇಡ್ಕರ್ ಅನುಯಾಯಿಯಾಗಿರುವ ಖರ್ಗೆ ಅವರು, ತಮ್ಮ ಸ್ವಾಭಿಮಾನವನ್ನು ಗಾಂಧಿ ಕುಟುಂಬಕ್ಕೆ ಒತ್ತೆ ಇಟ್ಟಿದ್ದಾರೆಯೇ? ಎಂದು ಪ್ರಶ್ನಿಸಿದರು.

ಕೇಂದ್ರ ಸರ್ಕಾರ ಎಲ್ಲಾ ರಂಗಗಳಲ್ಲೂ ವಿಫಲವಾಗಿದೆ ಎಂದು ಗಾಂಧಿ ಕುಟುಂಬದ ಗಿಳಿಪಾಠ ಒಪ್ಪಿಸುವ ಮಲ್ಲಿಕಾರ್ಜುನ ಖರ್ಗೇ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಕರ್ನಾಟಕದ ಕಾಂಗ್ರೆಸ್ ಹಿರಿಯ ಮತ್ತು ಆಕ್ಟಿವ್ ನಾಯಕ ಮಲ್ಲಿಕಾರ್ಜುನ ಖರ್ಗೆ, ಸಾಕಷ್ಟು ಬಾರಿ ಅವಕಾಶಗಳು ದೊರೆತರೂ ಕಾಂಗ್ರೆಸ್ ಪಕ್ಷ ಅವನರರನ್ನು ಮುಖ್ಯಮಂತ್ರಿಯನ್ನಾಗಿ ಮಾಡದೇ ಈಗ ಎಐಸಿಸಿ ಅದ್ಯಕ್ಷರನ್ನಾಗಿ ಮಾಡಿರುವುದುಯಾವ ಸಂಭ್ರಮಕ್ಕೆ? ಗಾಂಧಿ ಕುಟುಂಬದ ಗುಲಾಮಗಿರಿ ಮಾಡಲೆಂದೇ ಎಂದು ಪ್ರಶ್ನಿಸಿದರು.

ಉತ್ತರ ಪ್ರದೇಶದ ರಾಯಬರೇಲಿಯಲ್ಲಿನ ಸಭೆಯಲ್ಲಿ ಸಂಸದ ಮತ್ತು ವಿಪಕ್ಷ ನಾಯಕ ರಾಹುಲ್ ಗಾಂಧಿ, ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರ ವಿರುದ್ಧ ನೀಡಿರುವ ಹೇಳಿಕೆಗಳಿಗೆ ಸಂಬಂಧಿಸಿದಂತೆ ಪೃಸ್ನೆಗಳಿಗೆ ಉತ್ತರಿಸಿದ ರಾಮದಾಸ್ ಅಠವಲೆ ಅವರು, ರಾಹುಲ್ ಗಾಂಧಿ ಯಾವಾಗಲೂ 'ಗದ್ದಾರ' ರೀತಿ ಮಾತಾಡ್ತಾ ಇರುತ್ತಾರೆ. ಆದರೆ ನಾವೇನು ಆ ರೀತಿ ಮಾತನಾಡುವುದಿಲ್ಲ.

ಪ್ರಧಾನಿ ನರೇಂದ್ರ ಮೋದಿ ಮೂರನೇ ಬಾರಿಗೆ ಗಎದ್ದು ಅಧಿಕಾರಕ್ಕೆ ಬಂದಿರುವುದರಿಂದ ಕಾಂಗ್ರೆಸ್ ಪಾರ್ಟಿಗೆ ಸಿಟ್ಟು ಜಾಸ್ತಿ ಬಂದಿದೆ. ಯಾಕೆಂದರೆ ಗಾಂದಿ ಕುಟುಂಬದವರು ಪ್ರಧಾನಿ ಹುದ್ದೆ ತಮ್ಮ ಕುಟುಂಬದ ಆಸ್ತಿ ಎಂದು ತಿಳಿದುಕೊಂಡಿದ್ದಾರೆ. ಇದು ಪ್ರಜಾಪ್ರಭುತ್ವ ಎಂಬುದನ್ನೇ ಅವರು ಮರೆತಿದ್ದಾರೆ ಎಂದು ಮೂದಲಿಸಿದರು.

## ಎನ್‌ಎಂಡಿಸಿ ವಿರುದ್ಧ ಕಠಿಣ ಕ್ರಮಕ್ಕೆ ಎಸ್‌ಪಿಎಸ್ ಆಗ್ರಹ

# ಕುಮಾರಸ್ವಾಮಿ ಕಬ್ಬಿಣದ ಅದಿರು ಗಣಿಯಲ್ಲಿ ಪರಿಸರ ನಿಯಮ ಉಲ್ಲಂಘನೆ ಆರೋಪ

**ಬಳ್ಳಾರಿ, ಜೂನ್ 04:** ರಾಷ್ಟ್ರೀಯ ಖನಿಜ ಅಭಿವೃದ್ಧಿ ನಿಗಮದ ಕುಮಾರಸ್ವಾಮಿ ಕಬ್ಬಿಣದ ಅದಿರು ಗಣಿಯಲ್ಲಿ ನಡೆದಿರುವ ಗಂಭೀರ ಕಾನೂನುಬದ್ಧ ಉಲ್ಲಂಘನೆಗಳು ಹಾಗೂ ಪರಿಸರ ಅನುಮತಿ ಷರತ್ತುಗಳ ಉಲ್ಲಂಘನೆ ಕುರಿತು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಕ್ಷಣ ಹಾಗೂ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕೆಂದು ಸಮಾಜ ಪರಿವರ್ತನ ಸಮುದಾಯ ಆಗ್ರಹಿಸಿದೆ.



2009ರಲ್ಲಿ ಸುಪ್ರೀಂಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿ ಬಳ್ಳಾರಿ ಪ್ರದೇಶದಲ್ಲಿನ ಅಕ್ರಮ ಗಣಿಗಾರಿಕೆಯನ್ನು ಬೆಳಕಿಗೆ ತಂದಿದ್ದ ಎಸ್‌ಪಿಎಸ್, ಇದೀಗ ಎನ್‌ಎಂಡಿಸಿ ಸಂಸ್ಥೆಯ ಕುಮಾರಸ್ವಾಮಿ ಗಣಿಯಲ್ಲಿ ಪರಿಸರ ಅನುಮತಿ ಷರತ್ತುಗಳನ್ನು ಉಲ್ಲಂಘಿಸಿ ಕಬ್ಬಿಣದ ಅದಿರು ಸಾಗಣೆ ನಡೆಸಲಾಗುತ್ತಿದೆ ಎಂದು ಆರೋಪಿಸಿದೆ.

ರಣಜಿತ್ಪುರ, ನರಸಿಂಗಪುರ, ಸುಬ್ಬರಾಯನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರಸ್ತೆಗಳನ್ನು ಬಳಸಿಕೊಂಡು ಕಬ್ಬಿಣದ ಅದಿರು ಸಾಗಿಸಲಾಗುತ್ತಿದ್ದು, ಇದರಿಂದ ಗ್ರಾಮಗಳಲ್ಲಿ ಧೂಳು ಮಾಲಿನ್ಯ ಹೆಚ್ಚಾಗಿ ಸಾರ್ವಜನಿಕ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ ಎಂದು ಹಿರೇಮಠ್ ತಿಳಿಸಿದರು. ಪರಿಸರ ಅನುಮತಿ ನೀಡುವ ಸಂದರ್ಭದಲ್ಲಿ ಅದಿರು ಸಾಗಣೆಗೆ ಪ್ರತ್ಯೇಕ ಕನ್ವೇಯರ್ ಬೆಲ್ಟ್ ವ್ಯವಸ್ಥೆ ಇರುವುದಾಗಿ ಎನ್‌ಎಂಡಿಸಿ ಭರವಸೆ ನೀಡಿದ್ದರೂ, ಹಲವು ವರ್ಷಗಳಿಂದ ಆ ವ್ಯವಸ್ಥೆ ಕಾರ್ಯನಿರ್ವಹಿಸದೆ ರಸ್ತೆ ಮಾರ್ಗವನ್ನೇ ಬಳಸಲಾಗುತ್ತಿದೆ ಎಂದು ಆರೋಪಿಸಿದರು.

ಈ ಕುರಿತು ಎಸ್‌ಪಿಎಸ್ ಸಂಸ್ಥೆಯು 2026ರ ಜನವರಿ 19ರಂದು ಕೇಂದ್ರ ಸಚಿವಾಲಯಕ್ಕೆ 11 ದಾಖಲೆಗಳೊಂದಿಗೆ ವಿವರವಾದ ದೂರು ಸಲ್ಲಿಸಿತ್ತು. ನಂತರ ಮೇ 27ರಂದು ತುರ್ತು ಜ್ಞಾಪನಾ ಪತ್ರ ಸಲ್ಲಿಸಿ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ. ಈ ನಡುವೆ ಸಚಿವಾಲಯದ ಬೆಂಗಳೂರು ಪ್ರಾದೇಶಿಕ ಕಚೇರಿಯ ವಿಜ್ಞಾನಿಗಳು ನಡೆಸಿದ ಸ್ಥಳ ಪರಿಶೀಲನಾ ವರದಿಯು ಎಸ್‌ಪಿಎಸ್ ವ್ಯಕ್ತಪಡಿಸಿದ್ದ ಹಲವು ಆತಂಕಗಳನ್ನು ದೃಢಪಡಿಸಿದೆ.

ಪರಿಸರ ಅನುಮತಿ ಷರತ್ತುಗಳ ಉಲ್ಲಂಘನೆ, ತಪ್ಪು ಮಾಹಿತಿ ಸಲ್ಲಿಕೆ ಹಾಗೂ ಗ್ರಾಮಸ್ಥರ ಆರೋಗ್ಯಕ್ಕೆ ಉಂಟಾಗುತ್ತಿರುವ ಹಾನಿಯ ಹಿನ್ನೆಲೆಯಲ್ಲಿ ಎನ್‌ಎಂಡಿಸಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಎಸ್‌ಪಿಎಸ್ ಆಗ್ರಹಿಸಿದೆ.

ಎನ್‌ಎಂಡಿಸಿ ಸಂಸ್ಥೆಯು ಗ್ರಾಮಗಳ ರಸ್ತೆಗಳಲ್ಲಿ ಕಬ್ಬಿಣದ ಅದಿರು ಸಾಗಣೆ ತಕ್ಷಣ ನಿಲ್ಲಿಸಬೇಕು, ಉಲ್ಲಂಘನೆಗೆ ಸಂಬಂಧಿಸಿದಂತೆ ಭಾರೀ ದಂಡ ವಿಧಿಸಬೇಕು, ಕುಮಾರಸ್ವಾಮಿ ಗಣಿಗೆ ನೀಡಿರುವ ಪರಿಸರ ಅನುಮತಿಯನ್ನು ಅಮಾನತು ಗೊಳಿಸುವ ಅಥವಾ ಹಿಂತೆಗೆದುಕೊಳ್ಳುವ ಕುರಿತು ಪರಿಗಣಿಸಬೇಕು ಹಾಗೂ ಗಣಿಗಾರಿಕೆಯಿಂದ ಬಾಧಿತ ಗ್ರಾಮಗಳ ಸಾರ್ವಜನಿಕ ಆರೋಗ್ಯ, ರಸ್ತೆ ಸುರಕ್ಷತೆ ಮತ್ತು ಪರಿಸರ ಸಂರಕ್ಷಣೆಗೆ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಎಸ್‌ಪಿಎಸ್ ಮನವಿ ಮಾಡಿದೆ. ವೇಣಿ ವಿರಾಪುರ, ಹತ್ತಿರ ದಲ್ಲಿ ರೆಡ್ಡಿ ಸಂಘದ ಪೀಠ ದಲ್ಲಿ ಸಭೆ ಮಾಡಿ, ಹೋರಾಟದ ನಿರ್ಣಯ ಗಳ ಬಗ್ಗೆ, ರೂಪರೇಷ ಗಳನ್ನು ಮಾಡಲಿದ್ದೀವಿ ಎಂದು ತಿಳಿಸಿದ್ದಾರೆ

# ಡಿಜಿಟಲ್ ಸಂವಹನ ಅವಿಭಾಜ್ಯ ಅಂಗ: ಫಿರೋಜಾ ಮಿರಜ್ಕರ್

**ಕಲಬುರಗಿ, ಜೂ. 4:** ಡಿಜಿಟಲ್ ಸಂವಹನವು ಇಂದಿನ ದಿನಗಳಲ್ಲಿ ಆರೋಗ್ಯ, ಶಿಕ್ಷಣ, ಬ್ಯಾಂಕಿಂಗ್, ಸಾರಿಗೆ, ಆಡಳಿತ ಹಾಗೂ ವಿಪತ್ತು ನಿರ್ವಹಣೆ ಸೇರಿದಂತೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಅವಿಭಾಜ್ಯ ಅಂಗವಾಗಿದೆ ಎಂದು ಕೆಬಿಎನ್ ವಿಶ್ವವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಫಿರೋಜಾ ಡಿ.ಮಿರಜ್ಕರ್ ಹೇಳಿದರು.

ಯುದ್ಧಗಳು, ಪ್ರಕೃತಿ ವಿಕೋಪಗಳು ಹಾಗೂ ಇತರ ತುರ್ತು ಸಂದರ್ಭಗಳಲ್ಲಿ ಸಂವಹನ ಜಾಲಗಳು ಅಸ್ತವ್ಯಸ್ತಗೊಳ್ಳುವ ಮೂಲಕ ಈ ಸೇವೆಗಳ ಮೇಲೆ ಪರಿಣಾಮ ಬೀಳಬಹುದು.

ಇಂತಹ ಸಂದರ್ಭಗಳಲ್ಲಿಯೂ ಕಾರ್ಯನಿರ್ವಹಿಸಬಲ್ಲ ಸದೃಢ ಸಂವಹನ ವ್ಯವಸ್ಥೆಗಳ ಅಗತ್ಯ ಇದೆ. ನಿರಂತರ ಸಂಪರ್ಕವನ್ನು ಖಚಿತಪಡಿಸಲು ಸೈಬರ್ ಭದ್ರತೆ, ದತ್ತಾಂಶ ರಕ್ಷಣೆ, ಪರ್ಯಾಯ ಜಾಲ ವ್ಯವಸ್ಥೆಗಳು ಹಾಗೂ ಕೃತಕ ಬುದ್ಧಿಮತ್ತೆ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಎಐ ಕಲಬುರಗಿ ಸ್ಥಳೀಯ ಕೇಂದ್ರದ ಅಧ್ಯಕ್ಷ ಕಕ್ಕೇರಿ ಚಂದ್ರಶೇಖರ ಮಾತನಾಡಿ, ವಿಪತ್ತುಗಳು ಹಾಗೂ ತುರ್ತು ಪರಿಸ್ಥಿತಿಗಳ ಸಂದರ್ಭದಲ್ಲಿ ಸಂವಹನ ತಂತ್ರಜ್ಞಾನ ಮತ್ತು ಸುಸ್ಥಿರ ಡಿಜಿಟಲ್ ಸಂಪರ್ಕದ ಮಹತ್ವದ ಕುರಿತು ಅರಿವು ಮೂಡಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು.




ಕಲಬುರಗಿ ನಗರದ ವಿಶ್ವೇಶ್ವರಯ್ಯ ಭವನದಲ್ಲಿ ದಿ ಇನ್‌ಸ್ಟಿಟ್ಯೂಷನ್ ಆಫ್ ಎಂಜಿನಿಯರ್ಸ್ (ಇಂಡಿಯಾ) ಸ್ಥಳೀಯ ಕೇಂದ್ರದ ವತಿಯಿಂದ ವಿಶ್ವ ದೂರಸಂಪರ್ಕ ಮತ್ತು ಮಾಹಿತಿ ಸಮಾಜ ದಿನ–2026 ಅಂಗವಾಗಿ 'ಡಿಜಿಟಲ್ ಲೈಫ್‌ಲೈನ್‌ಗಳು– ಸಂಪರ್ಕಿತ ಜಗತ್ತಿನಲ್ಲಿ ಸ್ಥಿತಿ ಸ್ಥಾಪಕತ್ವ ಬಲಪಡಿಸುವುದು' ವಿಷಯ ಕುರಿತು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕೆಬಿಎನ್ ವಿಶ್ವವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಸಂವಹಣ ಎಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಧ್ಯಾಪಕಿ ಫಿರೋಜಾ ಮಿರಜ್ಕರ್ ಅವರು ಉಪನ್ಯಾಸ ನೀಡಿದರು.

# ಪೂಜೆ ಬಿಡಿ, ಮಕ್ಕಳಿಗೆ ಪುಸ್ತಕ ಓದಿಸಿ: ಸಿದ್ಧಲಿಂಗ ಸ್ವಾಮೀಜಿ




**ಕಲಬುರಗಿ, ಜೂ. 4:** ದೇವರು ಜ್ಞಾನ ಕೊಡಲ್ಲ, ಆದರೆ ನಿಮಗೆ ಓದಲು ಪ್ರೇರಣೆ ನೀಡುತ್ತಾನೆ. ಆದ್ದರಿಂದ ಪುಸ್ತಕಗಳ ಓದಿನಿಂದ ಜ್ಞನ ಸಿಗುತ್ತದೆ. ದೇವರ ಪೂಜೆ, ಪುನಸ್ಕಾರ ಒಂದು ಹಂತಕ್ಕೆ ಸರಿ. ವಿದ್ಯಾರ್ಥಿಗಳು ಮತ್ತು ಜ್ಞನಾರ್ಜನೆಯ ಹಸಿವು ಹೊಂದಿದವರು ಮಕ್ಕಳಿಗೆ ಪುಸ್ತಕಗಳನ್ನು ಓದಿಸಬೇಕು ಎಂದು ನೆಲೋಗಿ ವಿರಕ್ತ ಮಠದ ಸಿದ್ದಲಿಂಗ ಸ್ವಾಮೀಜಿ ಸಲಹೆ ನೀಡಿದರು.

ನಗರದ ಸಾಂಚಿ ನಗರದ ಪ್ರಬುದ್ಧ ಬುದ್ಧ ವಿಹಾರದಲ್ಲಿ ಭೀಮಶಕ್ತಿ ಯುವಕರ ಸಂಘ, ಪ್ರಬುದ್ಧ ಅಭಿವೃದ್ಧಿ ಸೇವಾ ಸಂಸ್ಥೆ, ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘ ಹಾಗೂ ಸಮಸ್ತ ಬಡಾವಣೆಯ ನಾಗರಿಕರ ವತಿಯಿಂದ ಹಮ್ಮಿಕೊಂಡಿದ್ದ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ನಮ್ಮ ದೇಶದಲ್ಲಿ ದೇವರುಗಳು ಪೂಜಾರಿಗಳ ಕೈಯಲ್ಲಿ ಆಡುಂಬೋಲ ಆಗಿವೆ. ಜೈಭೀಮ ಎನ್ನಬೇಕಿದ್ದ ಮಕ್ಕಳು ಜೈಶ್ರೀರಾಮ ಎನ್ನುತ್ತಿವೆ. ಮಕ್ಕಳಿಗೆ ತಿದ್ದಿ ಬುದ್ಧಿ ಹೇಳದ್ದಿದ್ದರೆ ಆಘಾತ ಕಾದಿದೆ.

ಭಾರತ ದೇಶವು ಮೊಗಲರು, ಅನಂತರ ಬ್ರಿಟಿಷರಿಂದ ಸಾವಿರ ವರ್ಷಗಳ ದಾಸ್ಯ ಅನುಭವಿಸಿದೆ. 800 ವರ್ಷ ಮೊಘಲರು ಆಳಿದರೆ, 200 ವರ್ಷ ಬ್ರಿಟಿಷರು ಆಡಳಿತ ನಡೆಸಿದ್ದಾರೆ. ಸಂವಿಧಾನದ ಮೂಲಕ ಈ ದಾಸ್ಯ ನಿವಾರಿಸಿದ ಕೀರ್ತಿ ಡಾ.ಬಿ.ಆರ್.ಅಂಬೇಡ್ಕರ್‌ಗೆ ಸಲ್ಲುತ್ತದೆ. ಬಹುಭಾಷೆ, ಬಹು ಸಂಸ್ಕೃತಿ, ಬಹು ಧರ್ಮಗಳ, ಬಹುದೇವರಗಳು ಇರುವ ನಮ್ಮ ದೇಶಕ್ಕೆ ರಾಜಕೀಯ ಸ್ವಾತಂತ್ರ್ಯ, ಸಮಾನತೆ ಕೊಟ್ಟಿದ್ದು ಅಂಬೇಡ್ಕರ್ ಎಂದು ಸ್ಮರಿಸಿದರು.

ದೇಶದಲ್ಲಿ ಜಾತೀಯತೆ ಇನ್ನೂ ಅಳಿಯದಿದ್ದರೆ ಭಾರತ ದೋಷ ಎನಿಸುವುದೇ ಹೊರತು ದೇಶ ಎನಿಸಲಾರದು. ಆ ನಿಟ್ಟಿನಲ್ಲಿ ಅಂಬೇಡ್ಕರ್ ವಿಚಾರಗಳನ್ನು ಮನೆ–ಮನಗಳಿಗೆ ಮುಟ್ಟಿಸುವ ಕೆಲಸ ಆಗಬೇಕಿದೆ ಎಂದರು.

# ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಪುನರಾರಂಭಕ್ಕೆ ಒತ್ತಡಕ್ಕೆ ಆಗ್ರಹ



**ಬೀದರ, ಜೂ. 4:** ನಗರದಲ್ಲಿ ಏರ್ಪಡಿಸಿದ್ದ ರೈತ ಸಮಾವೇಶದಲ್ಲಿ ಜಿಲ್ಲೆಯ ಜ್ವಲಂತ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದ ಸಂಘಟನೆಯ ಸ್ಥಳೀಯ ಪದಾಧಿಕಾರಿಗಳು, ಬೆಳೆ ವಿಮೆ ಹಣವನ್ನು ತಕ್ಷಣ ರೈತರ ಖಾತೆಗೆ ಜಮೆ ಮಾಡಿಸುವುದು, ಕಾಡುಪ್ರಾಣಿಗಳ ಹಾವಳಿಯಿಂದ ಬೆಳೆ ರಕ್ಷಿಸಲು ಸೋಲಾರ್ ಬೇಲಿ ವ್ಯವಸ್ಥೆ ಕಲ್ಪಿಸುವುದು ಹಾಗೂ ರೈತರ ಸಂಪೂರ್ಣ ಸಾಲ ಮನ್ನಾ ಮಾಡುವಂತೆ ಸರ್ಕಾರದ ಗಮನ ಸೆಳೆಯಬೇಕು ಎಂದರು.

ಬೀದರ್ ಜಿಲ್ಲೆಯ ಸಕ್ಕೆ ಕಾರ್ಖಾನೆಗಳಲ್ಲಿ ಕಬ್ಬಿನ ಇಳುವರಿ ಕಡಿಮೆ ತೋರಿಸಲಾಗುತ್ತಿದ್ದು ರೈತರಿಗೆ ಅನ್ಯಾಯವಾಗುತ್ತಿದೆ. ಇದನ್ನು ತಡೆಯಲು ಕ್ರಮಕೈಗೊಳ್ಳಬೇಕು. ಜಿಲ್ಲೆಯಲ್ಲಿ ಸುಮಾರು 30 ಲಕ್ಷ ಮೆಟ್ರಿಕ್ ಟನ್ ಕಬ್ಬು ಬೆಳೆ ಯುತ್ತಿದ್ದರೂ ನಿರೀಕ್ಷಿತ ಇಳುವರಿ ಸಿಗದ ಕಾರಣ ಕಬ್ಬು ಸಂಶೋಧನಾ ಕೇಂದ್ರ ಸ್ಥಾಪನೆಗೆ ಶಿಫಾರಸು ಮಾಡಬೇಕು. ಬೀದರ್ ಜಿಲ್ಲೆ ಫಲವತ್ತಾದ ಭೂಮಿ ಹಾಗೂ ಕೃಷಿಗೆ ಪೂರಕವಾದ ವಾತಾವರಣ ಹೊಂದಿದೆ. ಸುಮಾರು 51 ವಿಧದ ಬೆಳೆಗಳನ್ನು ಬೆಳೆಯಲು ಸಾಧ್ಯತೆಗಳಿವೆ. ಜಿಲ್ಲೆಯ ಏಕೈಕ ಕಾರಂಜಾ ಜಲಾಶಯದಿಂದ ಪಟ್ಟಣಗಳಿಗೆ ಕುಡಿಯುವ ನೀರಿನ ಸೌಲಭ್ಯ ದೊರೆಯುತ್ತಿದೆಯಾದರೂ ರೈತರಿಗೆ ನೀರಾವರಿ ಸೌಲಭ್ಯ ಸಿಗುತ್ತಿಲ್ಲ. ಇದರಿಂದ ರೈತರು ಸ್ವಂತ ಖರ್ಚಿನಲ್ಲಿ ಕೊಳವೆ ಬಾವಿ ಹಾಗೂ ತೆರೆದ ಬಾವಿ ತೋಡಿಸಿ ಕೃಷಿ ನಡೆಸಬೇಕಾದ ಪರಿಸ್ಥಿತಿನಿರ್ಮಾಣವಾಗಿದೆ ಎಂದು ಗೋಳು ತೋಡಿ ಕೊಂಡರು.

ಕಳೆದ ನಾಲ್ಕೈದು ವರ್ಷಗಳಿಂದ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಸರಿಯಾದ ಬೆಳೆ ಬಂದಾಗಲೂ ಬೆಳೆಗಳಿಗೆ ಸೂಕ್ತ ಬೆಲೆ ಸಿಗದೇ ನಷ್ಟ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಜಿಲ್ಲೆಯಲ್ಲಿ ಕಬ್ಬು, ತೊಗರಿ, ಸೋಯಾಬಿನ್, ಉದ್ದು, ಹೆಸರು, ಕಡಲೆ, ಹತ್ತಿ ಸೇರಿದಂತೆ ವಿವಿಧ ವಾಣಿಜ್ಯ ಬೆಳೆಗಳನ್ನು ಬೆಳೆಯಲಾಗುತ್ತಿದ್ದು, ತೋಟಗಾರಿಕಾ ಕ್ಷೇತ್ರದಲ್ಲಿ ಮಾವು ಹಾಗೂ ಹಸಿ ಶುಂಠಿ ಪ್ರಮುಖ ಬೆಳೆಗಳಾಗಿವೆ ಎಂದರು.

ರೈತ ಸಂಘವು ಸರ್ಕಾರದ ಮುಂದೆ ಹಲವು ಬೇಡಿಕೆಗಳನ್ನು ಇಟ್ಟಿದ್ದು, ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಶಾಸನಬದ್ಧಗೊಳಿಸುವುದು, ವರ್ಷಪೂರ್ತಿ ಖರೀದಿ ಕೇಂದ್ರಗಳನ್ನು ತೆರೆಯುವುದು, ಕಬ್ಬು ಸರಬರಾಜು ಮಾಡಿದ ರೈತರಿಗೆ 15 ದಿನಗಳೊಳಗೆ ಬಿಲ್ ಪಾವತಿಸುವುದು ಸೇರಿದಂತೆ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟರು. ಇದಕ್ಕೆ ಕೋಡಿಹಳ್ಳಿ ಚಂದ್ರಶೇಖರ್ ಸ್ಪಂದಿಸಿ, ಈ ಸಂಬಂಧ ಸರ್ಕಾರದ ಮಟ್ಟದಲ್ಲಿ ಗಮನ ಸೆಳೆದು, ನ್ಯಾಯ ಒದಗಿಸಿಕೊಡಲು ಪ್ರಯತ್ನಿಸುವೆ ಎಂದು ಆಶ್ವಾಸನೆ ನೀಡಿದರು.

# ರೋಟರಿ ಉದ್ಯೋಗ ಮೇಳಕ್ಕೆ ಸಾವಿರಕ್ಕೂ ಹೆಚ್ಚು ಜನ ಭಾಗಿ




**ಬೀದರ್, ಜೂ. 4:** ರೋಟರಿ ಕ್ಲಬ್ ಬೀದರ್ ಸಿಲ್ವರ್ ಸ್ಟಾರ್ ವತಿಯಿಂದ ನಗರದ ಬಿವಿಬಿ ಕಾಲೇಜಿನ ಆವರಣದಲ್ಲಿ ಏರ್ಪಡಿಸಿದ್ದ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಮೇಳದಲ್ಲಿ ಐವತ್ತು ಕಂಪನಿಗಳು ಭಾಗಿಯಾಗಿದ್ದವು. ವಿವಿಧ ಕಡೆಯ 1,200ಕ್ಕೂ ಅಧಿಕ ಉದ್ಯೋಗಾಕಾಂಕ್ಷಿಗಳು ಭಾಗಿಯಾಗಿದ್ದರು. ಕೆಲವರನ್ನು ಮತ್ತೊಂದು ಸುತ್ತಿನ ಸಂದರ್ಶನಕ್ಕೆ ಆಯ್ಕೆ ಮಾಡಲಾಯಿತು.

ವರ್ಚುವಲ್ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಸಂಸದ ತೇಜಸ್ವಿ ಸೂರ್ಯ, ಕಲ್ಯಾಣ ಕರ್ನಾಟಕದಲ್ಲಿ ಪ್ರತಿಭೆಗಳಿಗೆ ಕೊರತೆ ಇಲ್ಲ. ಆದರೆ, ನಾಯಕತ್ವದ ಕೊರತೆ ಇದೆ. ಇದಕ್ಕೆ ಮುಖ್ಯ ಕಾರಣ ನಾವು. ನಾಯಕತ್ವವನ್ನು ಕೆಲವು ಕುಟುಂಬಕ್ಕೆ ಅಡ ಇಟ್ಟಿರುವುದು ಎಂದರು.

ರಾಜ್ಯದಲ್ಲಿ ವಾರ್ಷಿಕವಾಗಿ ಸಾಮಾನ್ಯ ಕನ್ನಡಿಗ ?3 ಲಕ್ಷ ದುಡಿದರೆ, ಕಲ್ಯಾಣ ಕರ್ನಾಟಕ ಭಾಗದ ಸಾಮಾನ್ಯ ಜನ ?1 ಲಕ್ಷ ದುಡಿಯುತ್ತಾನೆ. ಇದಕ್ಕೆ ಮುಖ್ಯ ಕಾರಣ ಇಲ್ಲಿನ ಶಿಕ್ಷಣ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಸುಮಾರು 25 ಸಾವಿರ ಶಿಕ್ಷಕರ ಕೊರತೆ ಇದೆ. ಇಂಥ ಸಮಸ್ಯೆಗಳನ್ನು ಸರಿಪಡಿಸಿದಾಗ ಈ ವ್ಯತ್ಯಾಸವನ್ನು ಸರಿದೂಗಿಸಬಹುದು.

ರೋಟರಿ ಕ್ಲಬ್ ಬೀದರ್ ಸಿಲ್ವರ್ ಸ್ಟಾರ್ ಅಧ್ಯಕ್ಷ ಆದಿಶ್ ವಾಲಿ ಮಾತನಾಡಿ, ಬೀದರ್ ಜಿಲ್ಲೆಯಲ್ಲಿ ಪ್ರಥಮ ಬಾರಿಗೆ ಇಂಥದ್ದೊಂದು ಮೇಳ ಹಮ್ಮಿಕೊಳ್ಳಲಾಗಿದೆ. ಈ ಭಾಗದವರಿಗೆ ವೇದಿಕೆ ಒದಗಿಸಿ ಕೊಡುವುದು ಇದರ ಮುಖ್ಯ ಉದ್ದೇಶ ಎಂದರು.

## ಅವಿಭಕ್ತ ಕುಟುಂಬ ಸಂಸ್ಕೃತಿಯಿಂದ

# ಯಾವುದೇ ಕುಟುಂಬ ಸಂಕಷ್ಟಕ್ಕೆ ಸಿಲುಕುವುದಿಲ್ಲ: ಬಸವಲಿಂಗ ಅವಧೂತರು

**ಬೀದರ, ಜೂ.4:** ಪರಸ್ಪರ ಪ್ರೀತಿ, ವಿಶ್ವಾಸ, ಸೌಹಾರ್ದದ ಬದುಕಿಗಾಗಿ ಅವಿಭಕ್ತ ಕುಟುಂಬ ಸಂಸ್ಕೃತಿ ಬೆಳೆಯಬೇಕು. ಅವಿಭಕ್ತ ಕುಟುಂಬ ಯಾವುದೇ ಸಂಕಷ್ಟ ಬಂದರೂ ಎದುರಿಸಿ ನಿಕಲ್ಲುವ ಬಹುದೊಡ್ಡ ಒಗ್ಗಟ್ಟಿನ ಶಕ್ತಿಯಾಗಲಿದೆ ಎಂದು ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯಗಿರಿ ಆಶ್ರಮದ ಪೀಠಾಧಿಪತಿ ಬಸವಲಿಂಗ ಅವಧೂತರು ಹೇಳಿದರು.



ಬೀದರ್ ಹೊರವಲಯದ ಕೊಳಾರ(ಕೆ) ಗ್ರಾಮದಲ್ಲಿ ಸಾಯಿ ಬಾಬಾ ಮಂದಿರದ ಜಾತ್ರೆ ಪ್ರಯುಕ್ತ ಆಯೋಜಿಸಿದ್ದ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಜಹಿರಾಬಾದ ತಾಲ್ಲೂಕಿನ ಮಲ್ಲಯ್ಯ ಗಿರಿ ಆಶ್ರಮದ ಪೀಠಾಧಿಪತಿ ಬಸವಲಿಂಗ ಅವಧೂತರು ಮಾತನಾಡಿದರು.

ಬೀದರ್ ಹೊರವಲಯದ ಕೊಳಾರ(ಕೆ) ಗ್ರಾಮದಲ್ಲಿ ಸಾಯಿ ಬಾಬಾ ಮಂದಿರದ ಜಾತ್ರೆ ಪ್ರಯುಕ್ತ ಆಯೋಜಿಸಿದ್ದ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಭಾರತದಲ್ಲಿ ಮೊದಲಿಂದಲೂ ಅವಿಭಕ್ತ ಕುಟುಂಬ ಪದ್ಧತಿಯೇ ಇತ್ತು. ಆದರೆ, ಬ್ರಿಟಿಷರ ಆಗಮನ ಮತ್ತು ಪಾಶ್ಚಾತ್ಯ ಸಂಸ್ಕೃತಿಯಲ್ಲೇ ಕುಟುಂಬ ವಿಭಜನೆ ಪದ್ಧತಿ ಇದ್ದು, ನಮ್ಮ ಜನರೂ ಕೂಡ ಅದನ್ನು ಅನುಸರಿಸುವ ಮೂಲಕ ತಾವು ಸ್ವತಃ ಸಂಕಷ್ಟಕ್ಕೆ ಸಿಲುಕುವುದಲ್ಲದೇ, ಇಡೀ ಕುಟುಂಬ ವ್ಯವಸ್ಥೆಯನ್ನೇ ಹಾಳು ಮಾಡುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಅವಿಭಕ್ತ ಕುಟುಂಬದಲ್ಲಿ ಮಕ್ಕಳಿಗೆ ಹಿರಿಯರ ಪ್ರೀತಿ, ಮಾರ್ಗದರ್ಶನ ಸಿಗುತ್ತದೆ. ಹೀಗಾಗಿ ಒಟ್ಟಿಗೆ ಜೀವನ ಸಾಗಿಸಿ ಮುಂದಿನ ಪೀಳಿಗೆಗೆ ಮಾದರಿ ಆಗಬೇಕು. ಇಂದಿನ ಮಕ್ಕಳಿಗೆ ಮನೆಯಲ್ಲಿ ಉತ್ತಮ ಸಂಸ್ಕಾರ ಸಿಗದ ಕಾರಣ ಮದುವೆಯಾದ ಕೆಲವೇ ದಿನಗಳಲ್ಲಿ ವಿಚ್ಛೇದನಗಳಾಗುತ್ತಿವೆ. ಇದಕ್ಕೆ ಪ್ರಮುಖ ಕಾರಣ ಅವಿಭಕ್ತ ಕುಟುಂಬದ ಉತ್ತಮ ಸಂಸ್ಕಾರವಿಲ್ಲದಿರುವುದು ಎಂದು ಹೇಳಿದರು.

ಒತ್ತಡದ ಜೀವನದಿಂದ ಮನುಷ್ಯ ಅನೇಕ ರೋಗಗಳಿಗೆ ಒಳಗಾಗುತ್ತಿದ್ದಾನೆ. ಒತ್ತಡ ಮುಕ್ತಿ ಹಾಗೂ ಸುಂದರ ಜೀವನಕ್ಕೆ ಪ್ರವಚನ, ಪುರಾಣಗಳನ್ನು ಆಲಿಸಬೇಕು. ತಂದೆ–ತಾಯಿ ಸೇವೆ ಮಾಡಬೇಕು ಎಂದು ಸಲಹೆ ನೀಡಿದರು.

# ಪದವಿ ಕೋರ್ಸ್ ಪ್ರವೇಶ: ಜೂನ್ 27 ರ ವರೆಗೆ ವಿಸ್ತರಣೆ



**ಅಂಕೋಲಾ, ಜೂ.4–** : ಬಿಎ, ಬಿ.ಎಸ್ಸಿ, ಬಿ.ಕಾಂ ಪದವಿ ಕೋರ್ಸುಗಳ ಮೊದಲ ಸೆಮಿಸ್ಟರಗೆ ದಂಡ ರಹಿತವಾಗಿ ಪ್ರವೇಶ ಪಡೆದುಕೊಳ್ಳಲು ಈ ಹಿಂದೆ ಕರ್ನಾಟಕ ವಿಶ್ವವಿದ್ಯಾಲಯ ನಿಗದಿಪಡಿಸಿದ್ದ ಮೇ.30 ರ ಗಡುವನ್ನು, ಜೂನ್ 27 ರವರೆಗೆ ವಿಸ್ತರಣೆಮಾಡಿ ಕವಿವಿ ಕುಲಸಚಿವರು ಅಧಿಸೂಚನೆ ಪ್ರಕಟಿಸಿದ್ದಾರೆ.

ಈ ಕುರಿತು ಇತ್ತೀಚಿಗೆ ಕವಿವಿ ವ್ಯಾಪ್ತಿಯ ಅನುದಾನಿತ ಮತ್ತು ಅನುದಾನ ರಹಿತ ಪದವಿ ಕಾಲೇಜುಗಳ ಪ್ರಾಚಾರ್ಯರ ಸಂಘದ ವತಿಯಿಂದ ಕುಲಪತಿಗಳಿಗೆ ಮನವಿ ಸಲ್ಲಿಸಲಾಗಿತ್ತು.

ರೂ.2000 ದಂಡ ಸಹಿತವಾಗಿ ಪ್ರವೇಶ ಪಡೆದುಕೊಳ್ಳಲು ಜುಲೈ 11, ಹಾಗೂ ವಿಶೇಷ ದಂಡ ಶುಲ್ಕ ರೂ.6000 ಸಂದಾಯ ಮಾಡಿ ಪ್ರವೇಶ ಪಡೆಯಲು ಜುಲೈ 13

# ಎಸ್‌ಐಆರ್ ಪ್ರಕ್ರಿಯೆ, ಶೇ.90 ಮ್ಯಾಪಿಂಗ್ ಪೂರ್ಣ: ಡಾ.ಆನಂದ್

**ವಿಜಯಪುರ, ಜೂ.4–**ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. ಈಗಾಗಲೇ ಶೇ.90ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಳಿಸಲಾಗಿದೆ. ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ.ಕೆ ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ. ಸಾರ್ವಜನಿಕರಲ್ಲಿ ಯಾವುದೇ ಗೊಂದಲಗಳಾಗದಂತೆ ಪಾರದರ್ಶಕವಾಗಿ ಎಸ್.ಐ.ಆರ್ ಪ್ರಕ್ರಿಯೆ ನಡೆಲಾಗುವುದು. ಅರ್ಹ ಯಾವೊಬ್ಬ ಮತದಾರನೂ ಪಟ್ಟಿಯಿಂದ ಹೊರಗುಳಿಯಬಾರದು. ಮತದಾನದ ಹಕ್ಕಿನಿಂದ ವಂಚಿತರಾಗಬಾರದು. ಚುನಾವಣಾ ಆಯೋಗದ ಮಾರ್ಗಸೂಚಿಯಂತೆ 2002ರ ಮತದಾರರ ಪಟ್ಟಿಯನ್ನು ಮಾನದಂಡವಾಗಿಟ್ಟುಕೊಂಡು ಪ್ರಸ್ತುತ ಇರುವ 2025ರ ಮತದಾರರ ಪಟ್ಟಿಯೊಂದಿಗೆ ಹೋಲಿಕೆ ಹಾಗೂ ಮ್ಯಾಪಿಂಗ್ ಪ್ರಕ್ರಿಯೆ ನಡೆಸಲಾಗಿದೆ ಎಂದರು.

ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಜಿಲ್ಲೆಯಲ್ಲಿ ಈಗಾಗಲೇ ಶೇ.90ರಷ್ಟು ಮ್ಯಾಪಿಂಗ್ ಆಗಿದೆ ಎಂದರು. ವಿಶೇಷ ಪರಿಷ್ಕರಣೆ ಅಂಗವಾಗಿ ಜೂನ್ 20 ರಿಂದ 29ರವರೆಗೆ ಪೂರ್ವಸಿದ್ಧತೆ, ತರಬೇತಿ ಮತ್ತು ಮುದ್ರಣ ಕಾರ್ಯಗಳು ನಡೆಯಲಿವೆ. ಜೂನ್ 30 ರಿಂದ ಜುಲೈ 29 ರವರೆಗೆ ಬಿ.ಎಲ್.ಒ.ಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ತದನಂತರ ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದರು.



ಆಗಸ್ಟ್ 5ರಿಂದ ಅಕ್ಟೋಬರ್ 3ರವರೆಗೆ ನೋಟಿಸ್ ಹಂತ ಹಾಗೂ ಹಕ್ಕು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿ ಮಾಡಲಾಗುವುದು. ಅಕ್ಟೋಬರ್.7 ರಂದು ಮತದಾರರ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದರು.

# ಸಂಶೋಧನ ವಿಧಾನಗಳ ಕುರಿತು ಮತ್ತು ಬೋಧನಾ ಕೌಶಲ್ಯಗಳ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸಿದ ಟಿ.ನರೇಂದ್ರ ಬಾಬು

**ಬಳ್ಳಾರಿ ಜೂ 04.** ದಿನಾಂಕ 04 ಜೂನ್ 2026 ಮತ್ತು 05 ಜೂನ್ 2026 ರಂದು ಬಳ್ಳಾರಿಯ ವೀರಶೈವ ವಿದ್ಯಾವರ್ಧಕ ಸಂಘದ ಅಲ್ಲಂ ಕರಿಬಸಪ್ಪ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ (ಅಕಿಮ್) ಎಂಬಿಎ ಕಾಲೇಜಿನಲ್ಲಿ Contemporary Social Science Research: Data Analytics, Digital Research Tools & Ethical Research Practices? ಎಂಬ ವಿಷಯದ ಮೇಲೆ ಎರಡು ದಿನಗಳ ಫ್ಯಾಕಲ್ಟಿ ಡೆವೆಲೆಪ್‌ಮೆಂಟ್ ಪ್ರೊಗ್ರಾಮ್ ಕಾರ್ಯಕ್ರಮವನ್ನು ಉದ್ಘಾಟಿಸಿ, ಆಡಳಿತ ಮಂಡಳಿ ಅಧ್ಯಕ್ಷರಾದ ಟಿ ನರೇಂದ್ರಬಾಬು ಇವರು ಸಂಶೋಧನ ವಿಧಾನಗಳ ಕುರಿತು ಮತ್ತು ಬೋಧನಾ ಕೌಶಲ್ಯಗಳು ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳುವ ಕುರಿತು ಸಂಕ್ಷಿಪ್ತವಾಗಿ ವಿವರಿಸಿದರು.




ಶಿಕ್ಷಣ ಕ್ಷೇತ್ರ ದಿನದಿಂದ ದಿನಕ್ಕೆ ಬದಲಾಗುತ್ತಿದೆ ಹೊಸ ಹೊಸ ತಂತ್ರಜ್ಞಾನಗಳು ಬರುತ್ತಿವೆ. ಶಿಕ್ಷಕರು ನಿರಂತರವಾಗಿ ಕಲಿಯುತ್ತಿರಬೇಕು ಸದಾ ವಿದ್ಯಾರ್ಥಿಯಾಗಿರಬೇಕು ಪ್ರಾಧ್ಯಾಪಕ ವರ್ಗದವರು ತಮ್ಮ ವೃತ್ತಿಜೀವನದಲ್ಲಿ ವಿದ್ಯಾರ್ಥಿಗಳಿಗೆ ಅವಶ್ಯಕವಾದ ಬೋಧನಾ ಶೈಲಿ ಮತ್ತು ವಿಷಯಾಧಾರಿತ ಜ್ಞಾನಾಭಿವೃದ್ಧಿಗೆ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗುತ್ತವೆ. ಎಲ್ಲಾರೂ ಇದರ ಸದುಪಯೋಗ ಮಾಡಿಕೊಳ್ಳುವಂತೆ ತಿಳಿಸಿದರು. ಸದ್ರಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಡಾ.ಕೆ. ನಾಗರಾಜ ಇವರು ಉಪನ್ಯಾಸ ನೀಡಲಿದ್ದಾರೆ.

# ಇರಾನ್ ಯುದ್ಧ ತಡೆಯಲು ಅಮೆರಿಕ ಸಂಸತ್ ನಿರ್ಣಯ ಅಂಗೀಕಾರ: ಟ್ರಂಪ್

**ವಾಷಿಂಗ್ಟನ್, ಜೂ.4:** ರಿಪಬ್ಲಿಕನ್ ನೇತೃತ್ವದ ಅಮೆರಿಕ ಪ್ರತಿನಿಧಿಗಳ ಸಭೆಯು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ನಲ್ಲಿ ಮತ್ತಷ್ಟು ಮಿಲಿಟರಿ ಕ್ರಮ ಕೈಗೊಳ್ಳುವುದನ್ನು ತಡೆಯುವ ನಿರ್ಣಯವನ್ನು ಅಂಗೀಕರಿಸಿದೆ, ಇದು ಮೂರು ತಿಂಗಳ ಹಳೆಯ ಸಂಘರ್ಷದ ಬಗ್ಗೆ ಅವರ ಪಕ್ಷದ ಸದಸ್ಯರಲ್ಲಿ ಹೆಚ್ಚುತ್ತಿರುವ ಕಳವಳವನ್ನು ಪ್ರತಿಬಿಂಬಿಸುತ್ತದೆ. ಫೆಬ್ರವರಿ 28 ರಂದು ಪ್ರಾರಂಭವಾದ ಯುದ್ಧದ ಅಸಮ್ಮತಿಯನ್ನು ವ್ಯಕ್ತಪಡಿಸುವಲ್ಲಿ ನಾಲ್ಕು ರಿಪಬ್ಲಿಕನ್ನರು ಡೆಮೋಕ್ರಾಟ್‌ಳೊಂದಿಗೆ ಸೇರಿದ ನಂತರ ಹೆಚ್ಚಾಗಿ ಸಾಂಕೇತಿಕವಾಗಿರುವ 215–208 ಮತವು ಯಶಸ್ವಿಯಾಯಿತು. ಕಾಂಗ್ರೆಸ್ ಯುದ್ಧ ಘೋಷಿಸದ ಹೊರತು ಅಥವಾ ಮಿಲಿಟರಿ ಬಲದ ಬಳಕೆಯನ್ನು ಅಧಿಕೃತಗೊಳಿಸದ ಹೊರತು ಟ್ರಂಪ್‌ಗೆ ಇರಾನ್ನಿಂದ ಯುಎಸ್ ಸೈನ್ಯವನ್ನು ಹಿಂತೆಗೆದುಕೊಳ್ಳುವಂತೆ ಯುದ್ಧ ಅಧಿಕಾರ ನಿರ್ಣಯವು ನಿರ್ದೇಶಿಸುತ್ತದೆ. ಸದನ ಮತ್ತು ಸೆನೆಟ್ ಎರಡರಲ್ಲೂ ಅವರ ಪಕ್ಷಕ್ಕೆ ಅಲ್ಪ ಬಹುಮತವಿದ್ದರೂ, ಕಾಂಗ್ರೆಸ್‌ನಲ್ಲಿ ಟ್ರಂಪ್‌ಗೆ ಇದು ಇತ್ತೀಚಿನ ಹಿನ್ನಡೆಯಾಗಿದೆ. ಟ್ರಂಪ್ ಅಮೆರಿಕ ಪಡೆಗಳನ್ನು ಹಿಂತೆಗೆದುಕೊಳ್ಳಬೇಕು ಅಥವಾ ಸಂಘರ್ಷಕ್ಕೆ ಕಾಂಗ್ರೆಸ್ ಅನುಮೋದನೆ ಪಡೆಯಬೇಕು ಎಂಬುದಕ್ಕೆ ಯುದ್ಧ ಅಧಿಕಾರ ನಿರ್ಣಯವನ್ನು ಅಂಗೀಕರಿಸುವ ಮತದಾನವಾಗಿತ್ತು. ಅಧ್ಯಕ್ಷೀಯ ಅಧಿಕಾರವನ್ನು ನಿರ್ಬಂಧಿಸುವ ಅಸಾಂವಿಧಾನಿಕ ಪ್ರಯತ್ನ ಎಂದು ಹೇಳುವ ಮೂಲಕ ಶ್ವೇತಭವನವು ನಿರ್ಣಯದ ಅರ್ಹತೆಗಳನ್ನು ತಳ್ಳಿಹಾಕಿದೆ. ಆದರೆ ಇದರ ಅಂಗೀಕಾರವು ಮಹತ್ವದ್ದಾಗಿದೆ ಏಕೆಂದರೆ ಇದು ಇರಾನ್ ಯುದ್ಧವನ್ನು ಕೊನೆಗೊಳಿಸಲು ಶ್ವೇತಭವನದ ಮೇಲೆ ಒತ್ತಡವನ್ನು ಹೆಚ್ಚಿಸುತ್ತದೆ, ಏಕೆಂದರೆ ಪೆಟ್ರೋಲ್ ಬೆಲೆಗಳು ಹೆಚ್ಚಿವೆ ಮತ್ತು ಯುದ್ಧಕ್ಕೆ



ಸಾರ್ವಜನಿಕ ವಿರೋಧ ಹೆಚ್ಚಾಗಿದೆ.

ಟ್ರಂಪ್ ಅವರ ಯುದ್ಧ ಅಧಿಕಾರವನ್ನು ನಿಯಂತ್ರಿಸಲು ಸದನವು ಮಾಡಿದ ನಾಲ್ಕನೇ ಪ್ರಯತ್ನ ಇದಾಗಿದೆ. ಸೆನೆಟ್ ಮೇ ತಿಂಗಳಲ್ಲಿ ಇದೇ ರೀತಿಯ ನಿರ್ಣಯವನ್ನು ಮಂಡಿಸಿತು ಆದರೆ ಇನ್ನೂ ಪೂರ್ಣ ಪ್ರಮಾಣದ ಮತದಾನವನ್ನು ನಡೆಸಿಲ್ಲ. ಬುಧವಾರ ಪರಿಗಣಿಸಲಾದ ಈ ಕ್ರಮವು ಏಕಕಾಲೀನ ನಿರ್ಣಯವಾಗಿತ್ತು. ಇದನ್ನು ರಿಪಬ್ಲಿಕನ್ ನಿಯಂತ್ರಿತ ಅಮೆರಿಕ ಸಂಸತ್ ಸಹ ಅಂಗೀಕರಿಸಿದರೆ, ಅದಕ್ಕೆ ಅಧ್ಯಕ್ಷರ ಸಹಿ ಅಗತ್ಯವಿಲ್ಲ, ಆದರೂ ಅದು ಇನ್ನೂ ಕಾನೂನು ಸವಾಲಿಗೆ ಒಳಪಟ್ಟಿರುತ್ತದೆ. ಕಾಂಗ್ರೆಸ್ನಲ್ಲಿ ಸಂಪ್ರದಾಯವಾದಿಗಳ ದಂಗೆಯಿಂದಾಗಿ ಅವರ ಆಡಳಿತವು ರಾಜಕೀಯ ಮಿತ್ರರಾಷ್ಟ್ರಗಳಿಗೆ 180 ಕೋಟಿ ಡಾಲರ್ "ಶಸ್ತ್ರಾಸ್ತ್ರ ವಿರೋಧಿ" ನಿಧಿಯ ಯೋಜನೆಗಳನ್ನು ಹಿಂತೆಗೆದುಕೊಳ್ಳಲು ಕಾರಣವಾದ ಕೆಲವೇ ದಿನಗಳ ನಂತರ, ಟ್ರಂಪ್ ಅವರ ರಿಪಬ್ಲಿಕನ್ ಪಕ್ಷದೊಳಗಿನ ವಿಭಜನೆಯ ಇತ್ತೀಚಿನ ಸಂಕೇತವನ್ನು ಈ ಮತವು ಗುರುತಿಸಿದೆ. ಆದಾಗ್ಯೂ, ಟ್ರಂಪ್ ಸಂಘರ್ಷವನ್ನು ನಿರ್ವಹಿಸುವ ಬಗ್ಗೆ ಕೆಲವು ರಿಪಬ್ಲಿಕನ್ನರಲ್ಲಿ ಈ ಮತವು ಅಸಮಾಧಾನವನ್ನು ಪ್ರತಿಬಿಂಬಿಸುತ್ತದೆ ಮತ್ತು ಯುದ್ಧವು ನಾಲ್ಕನೇ ತಿಂಗಳನ್ನು ಪ್ರವೇಶಿಸಿರುವುದರಿಂದ ಅಧ್ಯಕ್ಷೀಯ ಯುದ್ಧ ಅಧಿಕಾರಗಳನ್ನು ನಿಗ್ರಹಿಸುವ ಅಪರೂಪದ ದ್ವಿಪಕ್ಷೀಯ ಪ್ರಯತ್ನವನ್ನು ಗುರುತಿಸುತ್ತದೆ. ಯುದ್ಧ ಅಧಿಕಾರಗಳ ಕುರಿತಾದ ಹಿಂದಿನ ಮೂರು ನಿರ್ಣಯಗಳು ಸದನದಲ್ಲಿ ಕಡಿಮೆ ಅಂತರದಿಂದ ವಿಫಲವಾಗಿದ್ದವು ಮತ್ತು ಕಳೆದ ತಿಂಗಳು ಈ ನಿರ್ಣಯವು ಅಂಗೀಕಾರವಾಗುವ ಸಾಧ್ಯತೆ ಇದ್ದಾಗ, ಚೇಂಬರ್‌ನ ರಿಪಬ್ಲಿಕನ್ ನಾಯಕರು ಈ ನಿರ್ಣಯದ ಮೇಲಿನ ಮತದಾನವನ್ನು ಹಠಾತ್ತನೆ ಮುಂದೂಡಿದರು. ಹಿಂದಿನ ಏಳು ಪ್ರಯತ್ನಗಳು ವಿಫಲವಾದ ನಂತರ, ಸೆನೆಟ್ ಕಳೆದ ತಿಂಗಳು ಕಾರ್ಯವಿಧಾನದ ಮತದಾನದಲ್ಲಿ ಪ್ರತ್ಯೇಕ ಆದರೆ ಇದೇ ರೀತಿಯ ನಿರ್ಣಯವನ್ನು ಮಂಡಿಸಿತು. ಸೆನೆಟ್ ಕ್ರಮದ ಕುರಿತು ಹೆಚ್ಚಿನ ಮತಗಳನ್ನು ಇನ್ನೂ ನಿಗದಿಪಡಿಸಲಾಗಿಲ್ಲ. ಫೆಬ್ರವರಿ 28 ರಂದು ಇರಾನ್ ಮೇಲೆ ಜಂಟಿ ಯುಎಸ್–ಇಸ್ರೇಲಿ ವಾಯುದಾಳಿಗಳು ಪ್ರಾರಂಭವಾದಾಗಿನಿಂದ ಟ್ರಂಪ್ ಸ್ಪಷ್ಟ ಕಾರ್ಯತಂತ್ರವನ್ನು ರೂಪಿಸದೆ ದೇಶವನ್ನು ದೀರ್ಘ ಸಂಘರ್ಷಕ್ಕೆ ಎಳೆದಿರಬಹುದು ಮತ್ತು ಗ್ಯಾಸೋಲಿನ್, ಆಹಾರ ಮತ್ತು ಇತರ ಉತ್ಪನ್ನಗಳಿಗೆ ಹೆಚ್ಚಿನ ಬೆಲೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿರಬಹುದು ಎಂದು ಅವರು ಎಚ್ಚರಿಸಿದರು. ಯಾವುದೇ ಡೆಮೋಕ್ರಾಟ್‌ಗಳು ಅದರ ವಿರುದ್ಧ ಮತ ಚಲಾಯಿಸಲಿಲ್ಲ. ಏಳು ಸದನ ಸದಸ್ಯರು ಮತ ಚಲಾಯಿಸಲಿಲ್ಲ.

**ಯುದ್ಧ ಅಧಿಕಾರ ನಿರ್ಣಯಕ್ಕೆ ಮತ ಹಾಕಿದ ನಾಲ್ವರು ಸದನದ ರಿಪಬ್ಲಿಕನ್ನರು ಮಿಶಿಗನ್‌ನ ಪ್ರತಿನಿಧಿಗಳಾದ ಟಾಮ್ ಬ್ಯಾರೆಟ್, ಓಹಿಯೋದ ವಾರೆನ್ ಡೇವಿಡ್ಸನ್, ಪೆನ್ಸಿಲ್ವೇನಿಯಾದ ಬ್ರಿಯಾನ್ ಫಿಟ್ಜ್‌ಪ್ಯಾಟ್ರಿಕ್ ಮತ್ತು ಕೆಂಟುಕಿಯ ಥಾಮಸ್ ಮಾಸ್ಸಿ.**

# ಇಸ್ರೇಲ್–ಲೆಬನಾನ್ ಷರತ್ತುಬದ್ಧ ಕದನ ವಿರಾಮ ರೂಪುರೇಷೆಗೆ ಅಸ್ತು

**ಬೈರುತ್/ಜೆರುಸಲೆಮ್, ಜೂ.4:** ಹೆಜ್ಬೊಲ್ಲಾ ತನ್ನ ದಾಳಿಗಳನ್ನು ಕೊನೆಗೊಳಿಸುವುದು ಮತ್ತು ಲಿಟಾನಿ ನದಿಯ ದಕ್ಷಿಣದ ಪ್ರದೇಶಗಳಿಂದ ತನ್ನ ಹೋರಾಟಗಾರರನ್ನು ಹಿಂತೆಗೆದುಕೊಳ್ಳುವುದು ಕಡ್ಡಾಯ ಎಂಬ ಷರತ್ತಿನ ಮೇಲೆ ಇಸ್ರೇಲ್ ಮತ್ತು ಲೆಬನಾನ್ ಪೂರ್ಣ ಕದನ ವಿರಾಮವನ್ನು ಜಾರಿಗೆ ತರಲು ಒಪ್ಪಿಕೊಂಡಿವೆ ಎಂದು ಅಮೆರಿಕ, ಇಸ್ರೇಲ್ ಮತ್ತು ಲೆಬನಾನ್ ಬಿಡುಗಡೆ ಮಾಡಿದ ಜಂಟಿ ಹೇಳಿಕೆಯಲ್ಲಿ ತಿಳಿಸಲಾಗಿದೆ. ಇಸ್ಲಾಮಿಸ್ಟ್ ಮಿಲಿಟಿಯಾ ಈಗಾಗಲೇ ಪೂರ್ಣ ಕದನ ವಿರಾಮಕ್ಕೆ ಒಪ್ಪುವುದಾಗಿ ಹೇಳಿದ್ದರೂ, ಇಸ್ರೇಲ್ ಮತ್ತು ಲೆಬನಾನ್ ಸರ್ಕಾರಗಳು ಮಾತುಕತೆ ನಡೆಸಿದ ಷರತ್ತುಗಳನ್ನು ಹಿಜ್ಬೊಲ್ಲಾ ಔಪಚಾರಿಕವಾಗಿ ಒಪ್ಪಿಕೊಳ್ಳುತ್ತದೆಯೇ ಎಂಬ ಬಗ್ಗೆ ಭಾರೀ ಸಂದೇಹವಿದೆ. ಪೂರ್ಣ ಕದನ ವಿರಾಮವು ಹೆಚ್ಚಿನ ಪ್ರಾದೇಶಿಕ ಮಹತ್ವವನ್ನು ಹೊಂದಿದೆ, ಏಕೆಂದರೆ ಯುದ್ಧವನ್ನು ಕೊನೆಗೊಳಿಸುವ ಒಪ್ಪಂದದ ಕುರಿತು ಇರಾನಿನ ಅಧಿಕಾರಿಗಳು ಯುಎಸ್ ಆಡಳಿತದೊಂದಿಗೆ ಮಾಡಿದ



ಮಾತುಕತೆಗಳ ಭಾಗವಾಗಿ ಇದು ಪ್ರಮುಖ ಬೇಡಿಕೆಗಳಲ್ಲಿ ಒಂದಾಗಿದೆ. ಹಿಜ್ಬುಲ್ಲಾ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳಿಗೆ ಪ್ರತಿಕ್ರಿಯೆಯಾಗಿ ಲೆಬನಾನ್ ರಾಜಧಾನಿಯ ಮೇಲೆ ದೊಡ್ಡ ಪ್ರಮಾಣದ ದಾಳಿಗಳ ಯೋಜನೆಗಳನ್ನು ಕೈಬಿಡುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ಇಸ್ರೇಲಿ ಪ್ರಧಾನ ಮಂತ್ರಿಯನ್ನು ಒತ್ತಾಯಿಸಿದಾಗ, ಉದ್ವಿಗ್ನ ರಾಜತಾಂತ್ರಿಕತೆಯ ಅವಧಿಯ ನಂತರ ಈ ಪ್ರಗತಿ ಸಂಭವಿಸಿದೆ ಎಂದು ವರದಿಯಾಗಿದೆ.

ಈ ಕರೆಯ ನಂತರ, ಟ್ರಂಪ್ ಲೆಬನಾನ್ನಲ್ಲಿ ಹೊಸ ಭಾಗಶಃ ಕದನ ವಿರಾಮವನ್ನು ಘೋಷಿಸಿದರು, ಇದರಲ್ಲಿ ಹಿಜ್ಬೊಲ್ಲಾ ಗಡಿಯುದ್ದಕ್ಕೂ ಇಸ್ರೇಲಿ ಪಟ್ಟಣಗಳ ಮೇಲಿನ ದಾಳಿಯನ್ನು ನಿಲ್ಲಿಸಿದ್ದಕ್ಕೆ ಪ್ರತಿಯಾಗಿ ಬೈರುತ್ ಮೇಲೆ ದಾಳಿ ಮಾಡುವುದಿಲ್ಲ ಎಂಬ ಇಸ್ರೇಲ್ ಬದ್ಧತೆಯೂ ಸೇರಿದೆ. ಆದಾಗ್ಯೂ, ಘೋಷಣೆಯ ಹೊರತಾಗಿಯೂ, ಕಳೆದ 48 ಗಂಟೆಗಳಲ್ಲಿ ಹಿಜ್ಬುಲ್ಲಾ ಇಸ್ರೇಲ್‌ನೊಳಗಿನ ಗುರಿಗಳ ವಿರುದ್ಧ ಹಲವಾರು ಡ್ರೋನ್ ದಾಳಿಗಳನ್ನು ನಡೆಸಿದೆ. ಅಮೆರಿಕದ ಅಧಿಕಾರಿಗಳು ಇಸ್ರೇಲಿ ಮತ್ತು ಲೆಬನಾನಿನ ಪ್ರತಿನಿಧಿಗಳ ನಡುವೆ ನೇರ ಮಾತುಕತೆಗಳನ್ನು ಮಧ್ಯಸ್ಥಿಕೆ ವಹಿಸಿದ ಅಮೆರಿಕ ವಿದೇಶಾಂಗ ಇಲಾಖೆಯಲ್ಲಿ ಎರಡು ದಿನಗಳ ಮಾತುಕತೆಯ ನಂತರ ಹೊಸ ಒಪ್ಪಂದವು ಹೊರಹೊಮ್ಮಿತು. ಹೊಸ ಚೌಕಟ್ಟಿನ ಅಡಿಯಲ್ಲಿ, ಜೆರುಸಲೆಮ್ ಮತ್ತು ಬೈರುತ್ ಎರಡೂ ದಕ್ಷಿಣ ಲೆಬನಾನ್‌ನಲ್ಲಿ "ಪೈಲಟ್ ವಲಯಗಳ" ಸರಣಿಯನ್ನು ಸ್ಥಾಪಿಸಲು ಒಪ್ಪಿಕೊಂಡಿವೆ, ಅಲ್ಲಿ ಲೆಬನಾನಿನ ಸಶಸ್ತ್ರ ಪಡೆಗಳು ವಿಶೇಷ ಭದ್ರತಾ ನಿಯಂತ್ರಣವನ್ನು ವಹಿಸಿಕೊಳ್ಳುತ್ತವೆ ಮತ್ತು ಯಾವುದೇ ಹೆಜ್ಬೊಲ್ಲಾ ಚಟುವಟಿಕೆಯನ್ನು ಖಚಿತಪಡಿಸಿಕೊಳ್ಳುವುದಿಲ್ಲ. ಪ್ರತಿಯಾಗಿ, ಐಡಿಎಫ್ ತನ್ನ ಸೈನ್ಯವನ್ನು ಗೊತ್ತುಪಡಿಸಿದ ವಲಯಗಳಿಂದ ಹಿಂತೆಗೆದುಕೊಳ್ಳುತ್ತದೆ. "ಈ ಹಂತಗಳು ಸಮಗ್ರ ಶಾಂತಿ ಮತ್ತು ಭದ್ರತಾ ಒಪ್ಪಂದದತ್ತ ಪ್ರಗತಿಯನ್ನು ಸಕ್ರಿಯಗೊಳಿಸುತ್ತವೆ" ಎಂದು ಜಂಟಿ ಹೇಳಿಕೆ ತಿಳಿಸಿದೆ. ಇಸ್ರೇಲ್ ಮತ್ತು ಲೆಬನಾನ್ ನಡುವಿನ ಸಂಬಂಧಗಳ ಕುರಿತು ನಿರ್ಧಾರಗಳು ಆಯಾ ಸರ್ಕಾರಗಳ ಕೈಯಲ್ಲಿ ಉಳಿಯಬೇಕು ಎಂದು ಹೇಳಿಕೆ ಒತ್ತಿ ಹೇಳಿದೆ. ಜೂನ್ 22 ರಂದು ವಾಷಿಂಗ್ಟನ್‌ನಲ್ಲಿ ಹೊಸ ಸುತ್ತಿನ ಮಾತುಕತೆ ನಡೆಯಲಿದ್ದು, ಮೂರು ದೇಶಗಳ ಅಧಿಕಾರಿಗಳು ಕದನ ವಿರಾಮ ಚೌಕಟ್ಟನ್ನು ಶಾಶ್ವತ ಮತ್ತು ಸಮಗ್ರವಾಗಿ ಪರಿವರ್ತಿಸಲು ಪ್ರಯತ್ನಿಸುತ್ತಿದ್ದಾರೆ.

# ವಿನೇಶ್ ಫೋಗಟ್ ವಿವಾದ: ವಿಮರ್ಶೆ ತೆಗೆದುಹಾಕಲು ಸುಪ್ರೀಂಕೋರ್ಟ್ ನಿರಾಕರಣೆ

**ನವದೆಹಲಿ, ಜೂ.4:** ಏಷ್ಯನ್ ಗೇಮ್ಸ್ 2026ರ ಆಯ್ಕೆ ಪ್ರಕ್ರಿಯೆಯಲ್ಲಿ ಕುಸ್ತಿಪಟು ವಿನೇಶ್ ಫೋಗಟ್ ಭಾಗವಹಿಸಲು ಅನುಮತಿ ನೀಡುವಾಗ ದೆಹಲಿ ಹೈಕೋರ್ಟ್ ಮಾಡಿದ್ದ ಕಠಿಣ ವಿಮರ್ಶೆಗಳನ್ನು ಮತ್ತು ಅವಲೋಕನಗಳನ್ನು ತೆಗೆದುಹಾಕಲು ಸುಪ್ರೀಂ ಕೋರ್ಟ್ ಗುರುವಾರ ನಿರಾಕರಿಸಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಅರವಿಂದ್ ಕುಮಾರ್ ಅವರಿದ್ದ ಪೀಠವು, ಮೇ 29 ರಂದು ಸುಪ್ರೀಂ ಕೋರ್ಟ್ ನೀಡಿದ ಆದೇಶದಂತೆ ವಿನೇಶ್ ಫೋಗಟ್ ಈಗಾಗಲೇ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿರುವುದರಿಂದ, ಭಾರತೀಯ ಕುಸ್ತಿ ಫೆಡರೇಶನ್ ಸಲ್ಲಿಸಿದ್ದ ಈ ಅರ್ಜಿಗೆ ಈಗ ಯಾವುದೇ ಅರ್ಥ ಉಳಿದಿಲ್ಲ ಎಂದು ಹೇಳಿ ಪ್ರಕರಣವನ್ನು ಮುಕ್ತಾಯಗೊಳಿಸಿದೆ.

ಆದಾಗ್ಯೂ, ಹೈಕೋರ್ಟ್ ಟೀಕೆಗಳನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ ಎಂದರ್ಥವಲ್ಲ, ಈ ಕಾನೂನು ವಿಷಯಗಳು ಇನ್ನೂ ಮುಕ್ತವಾಗಿವೆ ಎಂದು ಪೀಠವು ಸ್ಪಷ್ಟಪಡಿಸಿದೆ.

ಏಷ್ಯನ್ ಗೇಮ್ಸ್ ಆಯ್ಕೆಲ್ಲಿ ಭಾಗವಹಿಸಲು ವಿನೇಶ್ ಫೋಗಟ್ ಅವರಿಗೆ ಅರ್ಹತೆ ಇಲ್ಲ ಎಂದು ಕುಸ್ತಿ ಒಕ್ಕೂಟ ವಾದಿಸಿತ್ತು. ನಿಯಮಗಳ ಪ್ರಕಾರ 2025 ಮತ್ತು 2026 ರ ಕೆಲವು ನಿರ್ದಿಷ್ಟ ಸ್ಪರ್ಧೆಗಳಲ್ಲಿ ಪದಕ ಗೆದ್ದವರಿಗೆ ಮಾತ್ರ ಪ್ರಕ್ರಿಯೆಯಲ್ಲಿ ಅವಕಾಶವಿತ್ತು. 2024ರ ಒಲಿಂಪಿಕ್ಸ್ ಬಳಿಕ ನಿವೃತ್ತಿ ಘೋಷಿಸಿ, ಡಿಸೆಂಬರ್ 2025 ರಲ್ಲಿ ಮರು ಪ್ರವೇಶ ಮಾಡಿದ್ದ ವಿನೇಶ್ ಯಾವುದೇ



ಸ್ಪರ್ಧೆಗಳಲ್ಲಿ ಭಾಗವಹಿಸಿರಲಿಲ್ಲ. ಅಲ್ಲದೆ ಅವರು ಮರಳಿ ಬರುವ ಮುನ್ನ ನೀಡಬೇಕಾದ 6 ತಿಂಗಳ ಮುನ್ಸೂಚನೆ ಅವಧಿಯನ್ನು ಪೂರೈಸಿಲ್ಲ ಎಂದು ಒಕ್ಕೂಟ ಆರೋಪಿಸಿತ್ತು.

ಇದನ್ನು ಪ್ರಶ್ನಿಸಿ ವಿನೇಶ್ ಫೋಗಟ್ ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಪ್ರಕರಣದ ವಿಚಾರಣೆ ನಡೆಸಿದ್ದ ದೆಹಲಿ ಹೈಕೋರ್ಟ್ನ ಮುಖ್ಯ ನ್ಯಾಯಮೂರ್ತಿ ದೇವೇಂದ್ರ ಕುಮಾರ್ ಉಪಾಧ್ಯಾಯ ಮತ್ತು ನ್ಯಾಯಮೂರ್ತಿ ತೇಜಸ್ ಕಟಾರಿಯಾ ಅವರಿದ್ದ ಪೀಠವು ಮೇ 22 ರಂದು ಕುಸ್ತಿ ಒಕ್ಕೂಟ ವಿರುದ್ಧ ತೀವ್ರ ವಾಗ್ದಾಳಿ ನಡೆಸಿತ್ತು. ವಿನೇಶ್ ಫೋಗಟ್ ಅವರು ಹೆರಿಗೆ ರಜೆಯಲ್ಲಿದ್ದ ಕಾರಣಕ್ಕಾಗಿ 2025ರ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಾಧ್ಯವಾಗಿರಲಿಲ್ಲ. ತಾಯ್ತನವನ್ನು ಮುಂದಿಟ್ಟುಕೊಂಡು ಮಹಿಳಾ ಕ್ರೀಡಾಪಟುಗಳನ್ನು ಕಡೆಗಣಿಸುವುದು ಅಥವಾ ಹೊರಗಿಡುವುದು ತಪ್ಪು ಎಂದು ಕೋರ್ಟ್ ಹೇಳಿತ್ತು.

2024 ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ವಿನೇಶ್ ಫೋಗಟ್ ಹೆಚ್ಚಿನ ತೂಕದ ಕಾರಣಕ್ಕೆ ಅನರ್ಹಗೊಂಡಿದ್ದನ್ನು ಕುಸ್ತಿ ಒಕ್ಕೂಟ ತನ್ನ ಶೋಕಾಸ್ ನೋಟಿಸ್‌ನಲ್ಲಿ ರಾಷ್ಟ್ರೀಯ ಅವಮಾನ ಎಂದು ಕರೆದಿತ್ತು. ಇದನ್ನು ಹೈಕೋರ್ಟ್ ತೀವ್ರವಾಗಿ ಖಂಡಿಸಿತ್ತು, ಈ ಪದಬಳಕೆ ದ್ವೇಷಪೂರಿತವಾಗಿದೆ ಎಂದು ಕಿಡಿಕಾರಿತ್ತು.

ಹೈಕೋರ್ಟ್ನ ಈ ಕಠಿಣ ತೀರ್ಪನ್ನು ಪ್ರಶ್ನಿಸಿ ಕುಸ್ತಿ ಒಕ್ಕೂಟ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ಮೇ 29 ರಂದು ಸುಪ್ರೀಂ ಕೋರ್ಟ್ ವಿನೇಶ್ಗೆ ಟ್ರಯಲ್ಸ್‌ಮಲ್ಲಿ ಭಾಗವಹಿಸಲು ತಾತ್ಕಾಲಿಕ ಅನುಮತಿ ನೀಡಿತ್ತು (ಆದರೆ ವಿನೇಶ್ ಟ್ರಯಲ್ಸ್‌ನಲ್ಲಿ ಅರ್ಹತೆ ಪಡೆಯಲು ವಿಫಲರಾಗಿದ್ದರು).

ಗುರುವಾರ ಮತ್ತೆ ವಿಚಾರಣೆ ಆರಂಭವಾದಾಗ, ಕುಸ್ತಿ ಒಕ್ಕೂಟ ಪರ ಹಿರಿಯ ವಕೀಲ ಡಿ. ಎನ್. ಗೋಬರ್ಧನ್, ಹೈಕೋರ್ಟ್ ತೀರ್ಪಿನಲ್ಲಿ ಬಳಸಿರುವ ದ್ವೇಷಪೂರಿತ ಮತ್ತು ಖಂಡನೀಯ ಎಂಬ ಪದಗಳನ್ನು ತೆಗೆದುಹಾಕಬೇಕು, ಇಲ್ಲದಿದ್ದರೆ ಕೆಳಹಂತದ ನ್ಯಾಯಾಲಯದಲ್ಲಿರುವ ಪ್ರಕರಣಗಳ ಮೇಲೆ ಇದು ಪ್ರಭಾವ ಬೀರುತ್ತದೆ ಎಂದು ವಾದಿಸಿದರು. ಆದರೆ, ಸುಪ್ರೀಂ ಕೋರ್ಟ್ ಈ ವಾದವನ್ನು ಪುರಸ್ಕರಿಸದೆ, ಪ್ರಕರಣ ಈಗ ಪ್ರಸ್ತುತತೆ ಕಳೆದುಕೊಂಡಿರುವುದರಿಂದ ಹೈಕೋರ್ಟ್ನ ಯಾವುದೇ ಮುಖ್ಯಾಂಶಗಳನ್ನು ಸದ್ಯಕ್ಕೆ ಬದಲಾಯಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿ ಅರ್ಜಿ ವಿಲೇವಾರಿ ಮಾಡಿದೆ.

# ಫಿಫಾ ವಿಶ್ವಕಪ್ ಚಂದಾದಾರಿಕೆ ದುಬಾರಿ: ಅಸಮಾಧಾನ

ಫಿಫಾ ವಿಶ್ವಕಪ್ ಆರಂಭವಾಗಲು ಕೆಲವೇ ದಿನಗಳು ಬಾಕಿ ಇರುವಾಗ ಭಾರತದ ಫುಟ್ಬಾಲ್ ಫ್ಯಾನ್ಸ್‌ಗಳಿಗೆ ಭಾರಿ ನಿರಾಸೆ ಮೂಡಿದೆ. ಜೀ ಎಂಟರ್‌ಟೈನ್‌ಮೆಂಟ್ ಭಾರತದಲ್ಲಿ ವಿಶ್ವಕಪ್ ಪಂದ್ಯಗಳನ್ನು ನೇರ ಪ್ರಸಾರ ಮಾಡುವ ಅಧಿಕೃತ ಹಕ್ಕುಗಳನ್ನು ಪಡೆದುಕೊಂಡಿದೆ ಎಂಬ ಸುದ್ದಿ ಆರಂಭದಲ್ಲಿ ಅಭಿಮಾನಿಗಳಿಗೆ ಸಮಾಧಾನ ತಂದಿತ್ತಾದರೂ, ZEE5 ಅಪ್ಲಿಕೇಶನ್ ಬಿಡುಗಡೆ ಮಾಡಿದ ಪ್ರೀಮಿಯಂ ಸ್ಟ್ರೀಮಿಂಗ್ ಪ್ಯಾಕೇಜ್‌ನ ಬೆಲೆಗಳು ಈಗ ಅಭಿಮಾನಿಗಳ ಅಸಮಾಧಾನಕ್ಕೆ ಕಾರಣವಾಗಿದೆ.

ಲೈವ್ ಸ್ಟ್ರೀಮಿಂಗ್ ಸಮಯದಲ್ಲಿ ಜಾಹೀರಾತುಗಳನ್ನು ಒಳಗೊಂಡಂತೆ 3 ತಿಂಗಳ ವಿಶ್ವಕಪ್ ಪ್ಯಾಕೇಜ್‌ಗೆ 799 ರೂ. ಶುಲ್ಕ ವಿಧಿಸಲಾಗುತ್ತಿದೆ. ಚಂದಾದಾರಿಕೆಯಾಗಿ ಇಷ್ಟು ದೊಡ್ಡ ಮೊತ್ತವನ್ನು ಪಾವತಿಸಿದ ನಂತರವೂ, ಅಭಿಮಾನಿಗಳು ಪಂದ್ಯದ ಸಮಯದಲ್ಲಿ ಜಾಹೀರಾತುಗಳನ್ನು ವೀಕ್ಷಿಸಬೇಕಾಗುತ್ತದೆ ಮತ್ತು ಕೇವಲ 2 ತಿಂಗಳುಗಳ ಅವಧಿಯ ಪಂದ್ಯಾವಳಿಗಾಗಿ 3 ತಿಂಗಳ ಯೋಜನೆಯನ್ನು ತೆಗೆದುಕೊಳ್ಳುವಂತೆ ಒತ್ತಾಯಿಸಲಾಗುತ್ತಿದೆ ಎಂಬುದು ಫ್ಯಾನ್ಸ್‌ಗಳ ಟೀಕೆಗೆ ಕಾರಣವಾಗಿದೆ.

ಅಭಿಮಾನಿಗಳು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಇದರ ವಿರುದ್ಧ ಟೀಕಿಸುತ್ತಿದ್ದಾರೆ. ಆ್ಯಪ್ ಮೂಲಕ ಸ್ಟ್ರೀಮಿಂಗ್‌ಗೆ ಹಣ ಪಾವತಿಸುವುದಕ್ಕಿಂತ ಸಾಮಾನ್ಯ ಟೆಲಿವಿಷನ್ ಕೇಬಲ್/ಡಿಶ್ ರೀಚಾರ್ಜ್ ಮಾಡುವುದು ಹೆಚ್ಚು ಲಾಭದಾಯಕ ಎಂದು ಹಲವರು ಸೂಚಿಸುತ್ತಿದ್ದಾರೆ.ಈ ವರ್ಷದ ಆರಂಭದಲ್ಲಿ ಈಋಈಂ ಮತ್ತು YouTube ನಡುವೆ ಸಹಿ ಹಾಕಲಾದ ಜಾಗತಿಕ ಪಾಲುದಾರಿಕೆ ಒಪ್ಪಂದದ ನಂತರ, ಭಾರತ ಸೇರಿದಂತೆ ಹೆಚ್ಚಿನ ಅಭಿಮಾನಿಗಳು ಪಂದ್ಯಗಳು YouTubeನಲ್ಲಿ ಉಚಿತವಾಗಿ ಲಭ್ಯವಿರುತ್ತವೆ ಎಂದು ಭಾವಿಸಿದ್ದರು. ಈ ನಿರೀಕ್ಷೆಗಳು ಸಂಪೂರ್ಣವಾಗಿ ತಪ್ಪು ಎಂದು ಸ್ಪಷ್ಟಪಡಿಸಿದೆ.

**ಒಪ್ಪಂದದ ನಿಯಮಗಳು ಈ ಕೆಳಗಿನಂತಿವೆ**

10 ನಿಮಿಷಗಳ ನೇರಪ್ರಸಾರ: ಅಧಿಕೃತ ಪ್ರಸಾರಕರು ಪ್ರತಿ ಪಂದ್ಯದ ಮೊದಲ 10



ನಿಮಿಷಗಳನ್ನು ಮಾತ್ರ YouTube ನಲ್ಲಿ ನೇರಪ್ರಸಾರ ಮಾಡಲು ಅನುಮತಿಸಲಾಗಿದೆ.

ಪೂರ್ಣ ಪ್ರಸಾರ: ಯೂಟ್ಯೂಬ್‌ನಲ್ಲಿ ಪೂರ್ಣ ಸಮಯದ ಪಂದ್ಯಗಳನ್ನು ಪ್ರಸಾರ ಮಾಡಬೇಕೆ ಬೇಡವೇ ಎಂಬುದನ್ನು ಆಯಾ ದೇಶಗಳ ಸ್ಥಳೀಯ ಚಾನೆಲ್‌ಗಳು ನಿರ್ಧರಿಸುತ್ತವೆ.

**FIFA ಚಾನೆಲ್ ವಿಷಯ:** FIFAದ ಅಧಿಕೃತ YouTube ಚಾನೆಲ್ ಪಂದ್ಯದ ಮುಖ್ಯಾಂಶಗಳು, ಗೋಲ್ ಹೈಲೈಟ್ಸ್, ತೆರೆಮರೆಯ ದೃಶ್ಯಗಳು ಮತ್ತು ಇತರೆ ಕಾರ್ಯಕ್ರಮಗಳನ್ನು ಮಾತ್ರ ಒಳಗೊಂಡಿರಲಿದೆ.

ಯುಎಸ್ ನಂತಹ ದೇಶಗಳ ಚಾನೆಲ್‌ಗಳು (ಉದಾಹರಣೆಗೆ ಫಾಕ್ಸ್ ಸಾಕರ್) ತಮ್ಮ ಯೂಟ್ಯೂಬ್ ಚಾನೆಲ್‌ಗಳಲ್ಲಿ ವಿಶ್ವಕಪ್ ಪಂದ್ಯಗಳನ್ನು ನೇರಪ್ರಸಾರ ಮಾಡಿದರೂ, 'ಜಿಯೋ–ಬ್ಲಾಕಿಂಗ್' ತಂತ್ರಜ್ಞಾನದಿಂದಾಗಿ ಭಾರತದಲ್ಲಿ ಅವುಗಳನ್ನು ವೀಕ್ಷಿಸಲು ಅವರಿಗೆ ಸಾಧ್ಯವಾಗುವುದಿಲ್ಲ. ಏಕೆಂದರೆ ಆ ಚಾನೆಲ್‌ಗಳು ತಮ್ಮ ದೇಶಗಳಲ್ಲಿ ಮಾತ್ರ ಪ್ರಸಾರದ ಹಕ್ಕುಗಳನ್ನು ಹೊಂದಿವೆ. ಭಾರತದಲ್ಲಿನ ಅಧಿಕೃತ ಚಾನಲ್‌ಗಳು ಯೂಟ್ಯೂಬ್‌ನಲ್ಲಿ ಪಂದ್ಯಗಳನ್ನು ಪ್ರಸಾರ ಮಾಡಲು ಇಚ್ಛಿಸದಿದ್ದರೆ, ಇತರ ದೇಶಗಳ ಯೂಟ್ಯೂಬ್ ಲೈವ್ ಸ್ಟ್ರೀಮಿಂಗ್‌ಗಳು ಸಹ ಲಭ್ಯವಿರಲ್ಲ.

**ಭಾರತದಲ್ಲಿ ಆಟವನ್ನು ಎಲ್ಲಿ ಮತ್ತು ಹೇಗೆ ವೀಕ್ಷಿಸಬೇಕು?**

2026ರ ಫಿಫಾ ವಿಶ್ವಕಪ್, 2027ರ ಮಹಿಳಾ ವಿಶ್ವಕಪ್ ಮತ್ತು 2030ರ ಫಿಫಾ ವಿಶ್ವಕಪ್ ಸೇರಿದಂತೆ ಭಾರತದಲ್ಲಿ ನಡೆಯುವ ಫಿಫಾ ಪಂದ್ಯಾವಳಿಗಳ ಸಂಪೂರ್ಣ ಡಿಜಿಟಲ್ ಮತ್ತು ದೂರದರ್ಶನ ಪ್ರಸಾರ ಹಕ್ಕುಗಳನ್ನು ಜೀ ಗ್ರೂಪ್ ಹೊಂದಿದ್ದು, 2034 ರವರೆಗೆ ಇದು ತನ್ನದಾಗಿಸಿಕೊಂಡಿದೆ.

ಸಂಕ್ಷಿಪ್ತವಾಗಿ ಹೇಳುವುದಾದರೆ, ವಿಶ್ವಕಪ್ ಪಂದ್ಯಗಳನ್ನು ಯೂಟ್ಯೂಬ್‌ನಲ್ಲಿ ಉಚಿತವಾಗಿ ನೋಡುವ ಭಾರತೀಯ ಫುಟ್‌ಬಾಲ್ ಅಭಿಮಾನಿಗಳ ಆಶಯಗಳು ಹುಸಿಯಾಗಿವೆ.

ಪಂದ್ಯಾವಳಿಯ ಎಲ್ಲಾ 104 ಪಂದ್ಯಗಳನ್ನು ನೇರಪ್ರಸಾರ ವೀಕ್ಷಿಸಲು ಅಭಿಮಾನಿಗಳು ZEE5ನ ಸಬ್‌ಸ್ಕ್ರಿಪಷನ್ ಅಥವಾ ದೂರದರ್ಶನದಲ್ಲಿ ಅಧಿಕೃತ ಕ್ರೀಡಾ ಚಾನೆಲ್ ಅನ್ನು ಅವಲಂಬಿಸಬೇಕಾಗುತ್ತದೆ.

# ವೈಎಂಸಿ ಇಂಡಿಯಾ ಕರಾಟೆ ಕ್ಲಬ್‌ನ ವ್ರಿಹ್ವಾ ಹಿಸ್ಸಾರಿಯಾ ರಾಷ್ಟ್ರಮಟ್ಟಕ್ಕೆ ಆಯ್ಕೆ

**ಬೆಂಗಳೂರು, ಜೂ.4:** ವೈಎಂಸಿ ಇಂಡಿಯಾ ಕರಾಟೆ ಕ್ಲಬ್‌ನ ಪ್ರತಿಭಾವಂತ ಕರಾಟೆ ಪಟು ವ್ರಿಹ್ವಾ ಹಿಸ್ಸಾರಿಯಾ ಅವರು ಕರ್ನಾಟಕ ರಾಜ್ಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿ ಚಿನ್ನದ ಪದಕ ಗೆದ್ದಿದ್ದಾರೆ.

ಹೆಣ್ಣು ಮಕ್ಕಳ 7 ವರ್ಷ ವಯೋಮಿತಿ 30 ಕೆ.ಜಿ. ವಿಭಾಗದಲ್ಲಿ ವಿಭಾಗದಲ್ಲಿ ಸ್ಪರ್ಧಿಸಿದ ವ್ರಿಹ್ವಾ ಹಿಸ್ಸಾರಿಯಾ ಅವರು ತಮ್ಮ ಶ್ರೇಷ್ಠ ಪ್ರದರ್ಶನದ ಮೂಲಕ ರಾಜ್ಯ ಮಟ್ಟದಲ್ಲಿ ವಿಜಯಶಾಲಿಯಾಗಿ, ಜೂ.5ರ ಶನಿವಾರದಿಂದ ಸೋಮವಾರದವರೆಗೆ ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆಯಲಿರುವ ರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕವನ್ನು ಪ್ರತಿನಿಧಿಸಲು ಆಯ್ಕೆಯಾಗಿದ್ದಾರೆ.

ಈ ಸಾಧನೆಗೆ ವೈಎಂಸಿ ಇಂಡಿಯಾ ಕರಾಟೆ ಕ್ಲಬ್‌ನ ಮುಖ್ಯ ತರಬೇತುದಾರ ಜಯಂತ್ ಪಟೇಲ್ ಅವರ ಮಾರ್ಗದರ್ಶನ ಮತ್ತು ತರಬೇತಿ ಪ್ರಮುಖ ಕಾರಣವಾಗಿದೆ.

ವ್ರಿಹ್ವಾ ಹಿಸ್ಸಾರಿಯಾ ಅವರ ಈ ಸಾಧನೆಗೆ ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷ ಸಿ.ಎಸ್.ಅರುಣ್ ಮಾಚಯ್ಯ ಹಾಗೂ ಅಮೆಚೂರ್ ಕರಾಟೆ ಅಸೋಸಿಯೇಷನ್ ಆಫ್ ಕರ್ನಾಟಕದ ಪ್ರಧಾನ ಕಾರ್ಯದರ್ಶಿ ಭಾರ್ಗವರೆಡ್ಡಿ ಅವರು ಅಭಿನಂದನೆಗಳನ್ನು ಸಲ್ಲಿಸಿ, ರಾಷ್ಟ್ರೀಯ ಚಾಂಪಿಯನ್‌ಶಿಪ್‌ನಲ್ಲಿ ಅತ್ಯುತ್ತಮ ಸಾಧನೆ ಮಾಡಿ ಕರ್ನಾಟಕಕ್ಕೆ ಕೀರ್ತಿ ತರಲೆಂದು ಶುಭ ಹಾರೈಸಿದ್ದಾರೆ.

